ಸಂಪುಟ: 06 ಸಂಚಿಕೆ: 80 ಪುಟಗಳು: 08 ಬುಧವಾರ 03 ಜೂನ್ 2026 www.udayavahini.in epaper.udayavahini.in Udaya vahini news Udaya vahini news Udayavahini news you tube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

**ಮುಂಜಾನೆ ಮಾತು**

ಸರಿ ಮತ್ತು ಸುಲಭಗಳ ಮಧ್ಯೆ ಆಯ್ಕೆಕಷ್ಟ. ಸರಿಯಿದ್ದದ್ದು ಸುಲಭವೆನ್ನಲಾಗದು. ಸುಲಭವಿದ್ದದ್ದೆಲ್ಲ ಸರಿಯಿರಲಾರದು ನಮ್ಮ ಆಯ್ಕೆ ಸರಿಯಿರಲಿ!

ಉದಯ ವಾಹಿನಿ
ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ವೆಂಕಟೇಶ್ವರ ಏತ ನೀರಾವರಿ ಯೋಜನೆಯಲ್ಲಿ ಭ್ರಷ್ಟಾಚಾರ : ಆರ್ .ಅಶೋಕ್

• ಉದಯವಾಹಿನಿ, ಬೆಂಗಳೂರು

ಬಾಗಲಕೋಟೆ ಜಿಲ್ಲೆಯ ರಬಕವಿ–ಬನಹಟ್ಟಿ ತಾಲ್ಲೂಕಿನ ರೈತರ ಪಾಲಿಗೆ ವರದಾನವಾಗಬೇಕಿದ್ದ ವೆಂಕಟೇಶ್ವರ ಏತ ನೀರಾವರಿ ಯೋಜನೆ ಇಂದು ಕಾಂಗ್ರೆಸ್ ಸರ್ಕಾರದ ಭ್ರಷ್ಟಾಚಾರ ಮತ್ತು ಬೇಜವಾಬ್ದಾರಿತನದಿಂದಾಗಿ ರೈತರ ಪಾಲಿಗೆ ಶಾಪವಾಗಿ ಪರಿಣಮಿಸಿದೆ ಎಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್ .ಅಶೋಕ್ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ.

ಸರ್ಕಾರದ ವಿರುದ್ಧ ಪೋಸ್ಟ್ ಮಾಡಿರುವ ಅವರು, 174 ಕೋಟಿ ರೂ. ಲೂಟಿಯಾದರೂ ಹರಿಯಲಿಲ್ಲ ಒಂದು ಹನಿ ನೀರು ಬರೊಬ್ಬರಿ 174.42 ಕೋಟಿ ರೂಪಾಯಿ ಸಾರ್ವಜನಿಕರ ಹಣ ನೀರಾವರಿ ಹೆಸರಿನಲ್ಲಿ ವೆಚ್ಚವಾಗಿ ಎರಡೂವರೆ ವರ್ಷಗಳೇ ಕಳೆದರೂ ರೈತರ ಜಮೀನಿಗೆ ಹರಿದಿದ್ದು ಮಾತ್ರ ಶೂನ್ಯ ಹನಿ ನೀರು ಎಂದು ಕಿಡಿಕಾರಿದ್ದಾರೆ. ಕಾಂಗ್ರೆಸ್ ನಾಯಕರೇ, ಎಲ್ಲಿಗೆ ಹೋಯಿತು 174 ಕೋಟಿ ರೂಪಾಯಿ ಹಣ, ಕೃಷ್ಣಾ ನದಿಯಿಂದ 0.75 ಟಿಎಂಸಿಯಷ್ಟು ನೀರನ್ನು ಬಳಸಿಕೊಂಡು ಸುಮಾರು 17,991 ಎಕರೆ (7,200 ಹೆಕ್ಟೇರ್) ಒಣ ಭೂಮಿಗೆ ನೀರುಣಿಸುವ ಭವ್ಯ ಆಶ್ವಾಸನೆ ನೀಡಿದ್ದರಲ್ಲ, ಆ ನೀರೆಲ್ಲಾ ನಿಮ್ಮ ಭ್ರಷ್ಟಾಚಾರದ ಜೇಬಿಗೆ ಹರಿದುಹೋಯಿತೇ, ಕುಲಹಳ್ಳಿ, ಪ್ರಸಿದ್ಧ ಜಕಾವೆಲ್ ಬಳಿ ನೀರು ಪೂರೈಕೆ ಮಾಡುವ ನಾಟಕವಾಡಿದ ಈ ಸರ್ಕಾರ, ಜಮೀನು ಕಳೆದುಕೊಂಡ ಬಡ ರೈತರಿಗೆ ಇನ್ನೂ ಸೂಕ್ತ ಪರಿಹಾರ ಧನವನ್ನೇ ಒದಗಿಸಿಲ್ಲ ಎಂದು ಆರೋಪಿಸಿದ್ದಾರೆ.

## ನನ್ನ ರಾಜಕೀಯ ಜೀವನದಲ್ಲಿ ಗಾಂಧಿ ಕುಟುಂಬ ನಿರ್ಣಾಯಕ ಪಾತ್ರವಹಿಸಿದೆ : ಡಿಕೆಶಿ

• ಉದಯವಾಹಿನಿ, ಬೆಂಗಳೂರು

ಗಾಂಧಿ ಕುಟುಂಬವು ತಮ ರಾಜಕೀಯ ಜೀವನ ಪಯಣದಲ್ಲಿ ನಿರ್ಣಾಯಕ ಪಾತ್ರ ವಹಿಸಿದೆ ಎಂದು ನಿಯೋಜಿತ ಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸುವ ಮುನ್ನಾದಿನ ಅವರು ತಮ್ಮ ಸಾಮಾಜಿಕ ಜಾಲತಾಣದಲ್ಲಿ ಗಾಂಧಿ ಕುಟುಂಬದ ರಾಜೀವ್‌ಗಾಂಧಿಯಿಂದ ಆರಂಭಿಸಿ, ಪ್ರಿಯಾಂಕ ಗಾಂಧಿಯವರಿಗೂ ಪ್ರತಿಯೊಬ್ಬರ ಗುಣಲಕ್ಷಣಗಳು ಹಾಗೂ ತಮ ವೈಯಕ್ತಿಕ ಜೀವನದಲ್ಲಿ ಅವರು ಬೀರಿದ ಪ್ರಭಾವಗಳ ಬಗ್ಗೆ ಸಮಗ್ರ ಮಾಹಿತಿ ನೀಡಿದ್ದಾರೆ.

ಗಾಂಧಿ ಕುಟುಂಬ ತಮ ನಾಯಕತ್ವದ ವಿಚಾರವಾಗಿ ಅಷ್ಟೇ ಅಲ್ಲ, ಜೀವನದ ವಿವಿಧ ಹಂತಗಳಲ್ಲಿ ನನ್ನ ಮೇಲೆ ಇಟ್ಟಿರುವ ವಿಶ್ವಾಸ ಅಗಾಧವಾದದ್ದು ಎಂದಿದ್ದಾರೆ.ತಾವು ಪದೇ ಪದೇ ರಾಜೀವ್ ಗಾಂಧಿಯವರನ್ನು ನೆನಪಿಸಿಕೊಳ್ಳುತ್ತಿದ್ದು, ನನ್ನಲ್ಲಿದ್ದ ಸಾಮರ್ಥ್ಯವನ್ನು ಗುರುತಿಸುವ ಮೂಲಕ, ಒಬ್ಬ ಯುವ ಕಾರ್ಯಕರ್ತನಲ್ಲಿದ್ದ ಸಾಧ್ಯತೆಗಳನ್ನು ಅವರು ಪ್ರಕಟ ಪಡಿಸಿದ್ದರು.

ಅವರ ಪ್ರೋತ್ಸಾಹ ನನಗೆ ದೊಡ್ಡ ಕನಸು ಕಾಣುವ ಆತವಿಶ್ವಾಸವನ್ನು ನೀಡಿತು ಹಾಗೂ ಸಾರ್ವಜನಿಕ ಸೇವೆಯಲ್ಲಿ ಸಂಪೂರ್ಣವಾಗಿ ತೊಡಗಿಸಿಕೊಳ್ಳಲು ಸ್ಫೂರ್ತಿ ನೀಡಿತ್ತು ಎಂದಿದ್ದಾರೆ. ಇತರರಲ್ಲಿರುವ ಸಾಮರ್ಥ್ಯವನ್ನು ಗುರುತಿಸಿ, ಅವರ ನಿರೀಕ್ಷೆಗಳನ್ನೂ ಮೀರಿ ಬೆಳೆಯಲು ಪ್ರೇರೇಪಿಸುವವರೇ ಶ್ರೇಷ್ಠ ನಾಯಕರು. ರಾಜೀವ್ ಗಾಂಧಿ ನನ್ನ ವಿಷಯದಲ್ಲೇ ಅದನ್ನೇ ಮಾಡಿದ್ದಾರೆ ಎಂದು ಡಿ.ಕೆ.ಶಿವಕುಮಾರ್ ಹೇಳಿದರು.

## ಸಂಪುಟ ಸೇರುವ ನಿರೀಕ್ಷೆಯಲ್ಲಿ ಮಾಜಿ ಸಚಿವ ಈಶ್ವರ್ ಖಂಡ್ರೆ

• ಉದಯವಾಹಿನಿ,ಬೆಂಗಳೂರು

ಪಕ್ಷದ ಹಿರಿಯ ನಾಯಕರನ್ನು ಭೇಟಿ ಮಾಡಿದ ವೇಳೆಯಲ್ಲಿ ಉತ್ತಮ ಆಡಳಿತಕ್ಕೆ ಮಾರ್ಗದರ್ಶನ ನೀಡಿದ್ದಾರೆ. ನಾನು ಅವರಿಗೆ ಧನ್ಯವಾದ ಹೇಳಿ ಬಂದಿದ್ದೇನೆ ಎಂದು ಮಾಜಿ ಸಚಿವ ಈಶ್ವರ್ ಖಂಡ್ರೆ ಈ ರೀತಿ ಹೇಳುವ ಮೂಲಕ ತಾವು ಸಂಪುಟ ಸೇರುವ ಇಂಗಿತವನ್ನು ಪರೋಕ್ಷವಾಗಿ ವ್ಯಕ್ತಪಡಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಆಡಳಿತದಲ್ಲಿ ಉತ್ತಮ ಮತ್ತು ಸಮನ್ವಯ ಸಂಪುಟ ರಚನೆಯಾಗಬೇಕೆಂಬುದು ಜನರ ಆಶಯ. ಈ ವಿಚಾರವಾಗಿ ವರಿಷ್ಠರು ಚರ್ಚಿಸಿ, ನಿರ್ಧಾರ ತೆಗೆದುಕೊಳ್ಳುತ್ತಾರೆ ಎಂದರು. ಸಂಪುಟಕ್ಕೆ ಯಾರು ಸೇರುತ್ತಾರೆ? ಯಾರನ್ನು ಕೈ ಬಿಡಲಾಗುತ್ತದೆ ಎಂಬುದು ನನಗೆ ಮಾಹಿತಿ ಇಲ್ಲ. ದೆಹಲಿಯಲ್ಲಿ ಪಕ್ಷದ ವರಿಷ್ಠ ನಾಯಕರನ್ನು ತಾವು ಭೇಟಿ ಮಾಡಿದ ವೇಳೆ ಸೂಕ್ತ ಮಾರ್ಗದರ್ಶನ ಮಾಡಿದ್ದಾರೆ ಎಂದರು.

ಕೆಪಿಸಿಸಿ ಅಧ್ಯಕ್ಷ ಸ್ಥಾನ ಮತ್ತು ಸಚಿವ ಸ್ಥಾನ ಎರಡನ್ನೂ ನೀಡುವಂತೆ ಒತ್ತಡ ಹಾಕಿದ್ದೀರಾ? ಎಂಬ ಪ್ರಶ್ನೆಗೆ ಉತ್ತರಿಸಿದ ಅವರು, ಈ ಹಿಂದೆ ತಮಗೆ ಅರಣ್ಯ ಮತ್ತು ಜೀವಶಾಸ್ತ್ರ ಪರಿಸರ ಇಲಾಖೆಯ ಜವಾಬ್ದಾರಿ ನೀಡಲಾಗಿತ್ತು. ಅದನ್ನು ದಕ್ಷತೆಯಿಂದ ನಿಭಾಯಿಸಿದ್ದೇನೆ. ಸರ್ಕಾರಕ್ಕೆ ಒಳ್ಳೆಯ ಹೆಸರು ಬಂದಿದೆ. ಮುಂದೆ ಯಾವುದೇ ಜವಾಬ್ದಾರಿ ಕೊಟ್ಟರೂ ನಿರ್ವಹಣೆ ಮಾಡುವುದಾಗಿ ಹೇಳಿದರು.

ಲಿಂಗಾಯತ ಸಮುದಾಯ ಜಾತ್ಯತೀತ ಸಿದ್ಧಾಂತದಲ್ಲೇ ನಂಬಿಕೆ ಇಟ್ಟಿದೆ. ಸಮಪಾಲು–ಸಮಬಾಳು ನಮ ಆಶಯ. ಸರ್ಕಾರದಲ್ಲಿ ಎಲ್ಲಾ ಸಮುದಾಯಗಳಿಗೂ ಸೂಕ್ತ ಪ್ರಾತಿನಿಧ್ಯ ದೊರೆಯಬೇಕು. ಹಾಗೆಯೇ ವೀರಶೈವ ಲಿಂಗಾಯತ ಸಮುದಾಯಕ್ಕೂ ಆದ್ಯತೆ ನೀಡಬೇಕೆಂದು ಒತ್ತಾಯಿಸಿದರು.

## ಡಿಕೆಶಿ ಪದಗ್ರಹಣಕ್ಕೆ ಭರದ ಸಿದ್ಧತೆ

• ಉದಯವಾಹಿನಿ, ಬೆಂಗಳೂರು

ಡಿ.ಕೆ.ಶಿವಕುಮಾರ್ ಅವರು ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕಾರ ಸಮಾರಂಭಕ್ಕೆ ಬೆಂಗಳೂರಿನಲ್ಲಿ ಭರ್ಜರಿ ಸಿದ್ಧತೆಗಳು ನಡೆದಿವೆ. ಲೋಕಭವನದಲ್ಲಿ ಸಂಜೆ 4.05ಕ್ಕೆ ಮುಖ್ಯಮಂತ್ರಿ ಹಾಗೂ ಸಂಪುಟದ ಸಚಿವರ ಪ್ರಮಾಣವಚನ ಸ್ವೀಕಾರ ಸಮಾರಂಭ ನಡೆಯಲಿದೆ.

ಇದಕ್ಕಾಗಿ ನಗರದಾದ್ಯಂತ ಫ್ಲೆಕ್ಸ್, ಬ್ಯಾನರ್‌ಗಳು ರಾರಾಜಿಸುತ್ತಿವೆ. ಲೋಕಭವನದ ಗಾಜಿನ ಮನೆಯಲ್ಲಿ ವೇದಿಕೆ ಸಜ್ಜುಗೊಂಡಿದೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಸಂಸದೆ ಪ್ರಿಯಾಂಕ ಗಾಂಧಿ, ಎಐಸಿಸಿ ಪ್ರಧಾನ ಕಾರ್ಯದರ್ಶಿಗಳಾದ ಕೆ.ಸಿ.ವೇಣುಗೋಪಾಲ್, ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಸೇರಿದಂತೆ ಪ್ರಮುಖ ನಾಯಕರು ಭಾಗವಹಿಸುವ ಸಾಧ್ಯತೆ ಇದೆ. ಎಲ್ಲಾ ಧರ್ಮದ ಧಾರ್ಮಿಕ ಮುಖಂಡರನ್ನು ಪ್ರಮಾಣವಚನ ಸ್ವೀಕಾರ ಸಮಾರಂಭಕ್ಕೆ ಸಾಕ್ಷೀಕರಿಸುವಂತೆ ಆಹ್ವಾನಿಸಲಾಗಿದೆ. ಮಾಜಿ ಸಂಸದ ಡಿ.ಕೆ.ಸುರೇಶ್ ಲೋಕಭವನಕ್ಕೆ ಭೇಟಿ ನೀಡಿ, ಪ್ರಮಾಣವಚನ ಸ್ವೀಕಾರ ಸಮಾರಂಭದ ಪೂರ್ವ ಸಿದ್ಧತೆಗಳನ್ನು ಪರಿಶೀಲಿಸಿದ್ದಾರೆ. ಗಾಜಿನ ಮನೆಯಲ್ಲಿ ಸುಮಾರು 500 ಜನರಿಗೆ ಮಾತ್ರ ಆಸನ ವ್ಯವಸ್ಥೆ ಮಾಡಲು ಅವಕಾಶವಿದೆ.

# ಕಾಳಗ ಶುರು

## ಟ್ರಂಪ್, ನೆತನ್ಯಾಹು ಜಗಳ ಜೋರು

ಇಸ್ರೇಲ್ ಮತ್ತು ಹಿಜ್ಬುಲ್ಲಾ ನಡುವಿನ ದಾಳಿಗಳನ್ನು ನಿಲ್ಲಿಸುವ ಕುರಿತು ಒಪ್ಪಂದಕ್ಕೆ ಬರಲಾಗಿದೆ ಎಂದು ಟ್ರಂಪ್ ಅವರು ಹೇಳಿದ್ದು, ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಜೊತೆ ದೂರವಾಣಿ ಮಾತುಕತೆ ನಡೆಸಿದ ಬಳಿಕ ಹಾಗೂ ಮಧ್ಯವರ್ತಿಗಳ ಮೂಲಕ ಹಿಜ್ಬುಲ್ಲಾಗೆ ಸಂದೇಶ ರವಾನಿಸಿದ ನಂತರ ಈ ಬೆಳವಣಿಗೆ ನಡೆದಿದೆ ಎಂದು ಹೇಳಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಟ್ರಂಪ್, ಇಸ್ರೇಲ್ ಬೈರೂತ್ ಕಡೆಗೆ ಯಾವುದೇ ಸೈನಿಕರನ್ನು ಕಳುಹಿಸುವುದಿಲ್ಲ. ಈಗಾಗಲೇ ತೆರಳುತ್ತಿದ್ದ ಸೈನಿಕರನ್ನು ಹಿಂದಕ್ಕೆ ಕರೆಸಲಾಗಿದೆ. ಹಿಜ್ಬುಲ್ಲಾ ಕೂಡ ಎಲ್ಲಾ ರೀತಿಯ ಗುಂಡಿನ ದಾಳಿಗಳನ್ನು ನಿಲ್ಲಿಸಲು ಒಪ್ಪಿದೆ. ಇಸ್ರೇಲ್ ದಾಳಿ ನಡೆಸುವುದಿಲ್ಲ ಮತ್ತು ಹಿಜ್ಬುಲ್ಲಾ ಕೂಡ ಪ್ರತಿದಾಳಿ ಮಾಡುವುದಿಲ್ಲ ಎಂದು ತಿಳಿಸಿದ್ದಾರೆ. ಆದರೆ ಟ್ರಂಪ್ ಈ ಘೋಷಣೆ ಮಾಡಿದ ಕೆಲವೇ ಕ್ಷಣಗಳಲ್ಲಿ ಉತ್ತರ ಇಸ್ರೇಲ್ ಭಾಗದಲ್ಲಿ ಲೆಬನಾನಿನಿಂದ ಕ್ಷಿಪಣಿಗಳು ಉಡಾವಣೆಯಾದ ಬಗ್ಗೆ ವರದಿಯಾಗಿದೆ. ಇದರಿಂದಾಗಿ ಪರಿಸ್ಥಿತಿ ಇನ್ನೂ ಸಂಪೂರ್ಣ ನಿಯಂತ್ರಣಕ್ಕೆ ಬಂದಿಲ್ಲ ಎಂಬುದು ಸ್ಪಷ್ಟವಾಗಿದೆ.



### ರಾತ್ರಿ ಪೂರ್ತಿ ಗುಂಡಿನ ಕಾಳಗ

ಇಸ್ರೇಲ್ ನಡೆಸಿದ ವಾಯುದಾಳಿಯಲ್ಲಿ ದಕ್ಷಿಣ ಲೆಬನಾನ್‌ನಲ್ಲಿ ಕನಿಷ್ಠ ಆರು ಮಂದಿ ಮೃತಪಟ್ಟಿದ್ದಾರೆ ಎಂದು ಲೆಬನಾನ್ ಸರ್ಕಾರಿ ಮಾಧ್ಯಮಗಳು ವರದಿ ಮಾಡಿವೆ. ನಬಾತಿಯೆ ನಗರದ ಸಮೀಪದ ಗ್ರಾಮವೊಂದರಲ್ಲಿ ಸಿರಿಯನ್ ಪ್ರಜೆಯೊಬ್ಬರು ಮೃತಪಟ್ಟಿದ್ದಾರೆ. ಟೈರ್ ನಗರದಲ್ಲಿರುವ ಜಬಲ್ ಅಮೆಲ್ ಆಸ್ಪತ್ರೆಯ ಮೇಲೂ ದಾಳಿ ನಡೆದಿದ್ದು, ಕಟ್ಟಡಕ್ಕೆ ಭಾರೀ ಹಾನಿಯಾಗಿದೆ ಎಂದು ಆರೋಗ್ಯ ಸಚಿವಾಲಯ ತಿಳಿಸಿದೆ. ಮತ್ತೊಂದೆಡೆ, ಲೆಬನಾನ್‌ನಿಂದ ಉಡಾವಣೆಯಾದ ಎರಡು ಕ್ಷಿಪಣಿಗಳನ್ನು ತನ್ನ ವಾಯುಪಡೆ ಹೊಡೆದುರುಳಿಸಿದೆ ಎಂದು ಇಸ್ರೇಲ್ ಸೇನೆ ಹೇಳಿದೆ. ಹಿಜ್ಬುಲ್ಲಾ ಕೂಡ ಉತ್ತರ ಇಸ್ರೇಲ್ ಪ್ರದೇಶಗಳ ಮೇಲೆ ರಾಕೆಟ್ ಹಾಗೂ ಕ್ಷಿಪಣಿ ದಾಳಿ ನಡೆಸಿರುವುದಾಗಿ ಹೇಳಿಕೊಂಡಿದೆ.

ಈ ಸಂಘರ್ಷ ಈಗ ಕೇವಲ ಇಸ್ರೇಲ್–ಹಿಜ್ಬುಲ್ಲಾ ನಡುವಿನ ಸಮಸ್ಯೆಯಾಗಿಲ್ಲ. ಇರಾನ್ ಮತ್ತು ಅಮೆರಿಕ ನಡುವೆ ನಡೆಯುತ್ತಿರುವ ಮಾತುಕತೆಗಳ ಮೇಲೂ ಇದರ ಪರಿಣಾಮ ಬೀಳುತ್ತಿದೆ. ಇರಾನ್ ವಿದೇಶಾಂಗ ಸಚಿವ ಅಬ್ಬಾಸ್ ಅರಘ್ಚಿ, ಅಮೆರಿಕ–ಇರಾನ್ ನಡುವೆ ಯಾವುದೇ ಕದನ ವಿರಾಮ ಒಪ್ಪಂದವಾದರೂ ಅದು ಲೆಬನಾನ್ ಸೇರಿದಂತೆ ಎಲ್ಲಾ ಪ್ರದೇಶಗಳಿಗೂ ಅನ್ವಯಿಸಬೇಕು ಎಂದು ಸ್ಪಷ್ಟಪಡಿಸಿದ್ದಾರೆ. ಒಂದು ಪ್ರದೇಶದಲ್ಲಿ ಕದನ ವಿರಾಮ ಉಲ್ಲಂಘನೆಯಾದರೆ, ಅದನ್ನು ಎಲ್ಲಾ ಪ್ರದೇಶಗಳಲ್ಲಿಯೂ ಉಲ್ಲಂಘನೆಯಾಗಿಯೇ ಪರಿಗಣಿಸಲಾಗುತ್ತದೆ ಎಂದು ಎಚ್ಚರಿಕೆ ನೀಡಿದ್ದಾರೆ. ಮಧ್ಯಪ್ರಾಚ್ಯದಲ್ಲಿ ಉದ್ವಿಗ್ನತೆ ಗರಿಷ್ಠ ಮಟ್ಟ ತಲುಪಿರುವ ಸಂದರ್ಭದಲ್ಲಿ, ಟ್ರಂಪ್ ಘೋಷಿಸಿರುವ ಈ ತಾತ್ಕಾಲಿಕ ಒಪ್ಪಂದ ಎಷ್ಟು ಕಾಲ ಮುಂದುವರಿಯುತ್ತದೆ ಎಂಬುದು ಈಗ ಜಾಗತಿಕ ಮಟ್ಟದಲ್ಲಿ ಕುತೂಹಲಕ್ಕೆ ಕಾರಣವಾಗಿದೆ.



### ಟ್ರಂಪ್ ತೀವ್ರ ಆಕ್ರೋಶ

• ಉದಯವಾಹಿನಿ, ನವದೆಹಲಿ

ಮಧ್ಯಪ್ರಾಚ್ಯದಲ್ಲಿ ಮತ್ತೆ ಯುದ್ಧದ ಕಾರ್ಮೋಡಗಳು ಕವಿದಿರುವ ನಡುವೆಯೇ ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ನಡುವೆ ಬಿರುಕು ಮೂಡಿರುವ ಲಕ್ಷಣಗಳು ಗೋಚರಿಸುತ್ತಿವೆ. ಲೆಬನಾನ್‌ನಲ್ಲಿ ಇಸ್ರೇಲ್ ಸೇನಾ ಕಾರ್ಯಾಚರಣೆ ತೀವ್ರಗೊಳ್ಳುತ್ತಿರುವ ನಡುವಲ್ಲೇ ಟ್ರಂಪ್ ಹಾಗೂ ನೆತನ್ಯಾಹು ನಡುವೆ ದೂರವಾಣಿಯಲ್ಲಿ ಮಾತುಕತೆ ನಡೆದಿದ್ದು, ಈ ವೇಳೆ ನೆತನ್ಯಾಹು ವಿರುದ್ಧ ಟ್ರಂಪ್ ಅವರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆಂದು ಅಮೆರಿಕದ ಮಾಧ್ಯಮಗಳು ವರದಿ ಮಾಡಿವೆ.

ಲೆಬನಾನ್‌ನಲ್ಲಿರುವ ಹಿಜ್ಬುಲ್ಲಾ ಉಗ್ರ ಸಂಘಟನೆಯ ವಿರುದ್ಧ ಇಸ್ರೇಲ್ ಕಳೆದ ಕೆಲವು ವಾರಗಳಿಂದ ನಿರಂತರವಾಗಿ ದಾಳಿಗಳನ್ನು ನಡೆಸುತ್ತಿದೆ. ಇತ್ತೀಚೆಗೆ ಬೈರೂತ್‌ನ ದಕ್ಷಿಣ ಉಪನಗರಗಳಲ್ಲಿರುವ ಹಿಜ್ಬುಲ್ಲಾ ನಿಯಂತ್ರಿತ ಪ್ರದೇಶಗಳ ಮೇಲೆ ವಾಯುದಾಳಿ ನಡೆಸಲು ಹಾಗೂ ದಕ್ಷಿಣ ಲೆಬನಾನ್‌ನಲ್ಲಿ ಭೂ ಕಾರ್ಯಾಚರಣೆಯನ್ನು ವಿಸ್ತರಿಸಲು ಇಸ್ರೇಲ್ ಸರ್ಕಾರ ನಿರ್ಧರಿಸಿತ್ತು. ಈ ಬೆಳವಣಿಗೆ ಉದ್ವಿಗ್ನತೆಯನ್ನು ಮತ್ತಷ್ಟು ಹೆಚ್ಚಿಸಿದೆ. ಅದೇ ಸಮಯದಲ್ಲಿ ಅಮೆರಿಕವು ಇರಾನ್ ಜೊತೆ ಉದ್ವಿಗ್ನತೆ ಕಡಿಮೆ ಮಾಡುವ ಉದ್ದೇಶದಿಂದ ಶಾಂತಿ ಮಾತುಕತೆಗಳನ್ನು ನಡೆಸುತ್ತಿತ್ತು. ಇರಾನ್ ಬೆಂಬಲಿತ ಹಿಜ್ಬುಲ್ಲಾ ವಿರುದ್ಧ ಇಸ್ರೇಲ್ ನಡೆಸುತ್ತಿರುವ ವ್ಯಾಪಕ ದಾಳಿಗಳು ಈ ರಾಜತಾಂತ್ರಿಕ ಪ್ರಯತ್ನಗಳನ್ನು ಹಾಳುಮಾಡಬಹುದು ಎಂಬ ಆತಂಕ ಅಮೆರಿಕ ಆಡಳಿತದಲ್ಲಿ ಹೆಚ್ಚಾಗಿದೆ. ಇದೇ ಕಾರಣಕ್ಕೆ ಟ್ರಂಪ್ ನೆತನ್ಯಾಹು ಜೊತೆ ನೇರವಾಗಿ ಮಾತನಾಡಿದ್ದಾರೆ ಎನ್ನಲಾಗಿದೆ. ಅಮೆರಿಕಾದ ಅಧಿಕಾರಿಗಳ ಮಾಹಿತಿ ಪ್ರಕಾರ, ದೂರವಾಣಿ ಸಂಭಾಷಣೆಯ ವೇಳೆ ಟ್ರಂಪ್ ಅತ್ಯಂತ ಕೋಪಗೊಂಡಿದ್ದರು. ಇಸ್ರೇಲ್‌ನ ಕ್ರಮಗಳು ಜಾಗತಿಕ ಮಟ್ಟದಲ್ಲಿ ದೇಶವನ್ನು ಪ್ರತ್ಯೇಕಗೊಳಿಸುತ್ತಿವೆ ಮತ್ತು ಅಮೆರಿಕದ ಹಿತಾಸಕ್ತಿಗಳಿಗೂ ಹಾನಿ ಉಂಟುಮಾಡುತ್ತಿವೆ ಎಂದು ನೆತನ್ಯಾಹುಗೆ ಖಡಕ್ ಎಚ್ಚರಿಕೆ ನೀಡಿದ್ದಾರೆಂದು ಹೇಳಿದ್ದಾರೆ.

ನೀನು ಸಂಪೂರ್ಣ ಹುಚ್ಚನಂತೆ ವರ್ತಿಸುತ್ತಿದ್ದೀಯ. ನಾನು ಇರದೇ ಇದ್ದರೆ ಈಗಾಗಲೇ ಜೈಲಿನಲ್ಲಿರುತ್ತಿದ್ದೆ. ನಿನ್ನನ್ನು ನಾನು ಉಳಿಸುತ್ತಿದ್ದೇನೆ. ಈಗ ಎಲ್ಲರೂ ನಿನ್ನನ್ನು ದ್ವೇಷಿಸುತ್ತಿದ್ದಾರೆ. ನಿನ್ನ ಕ್ರಮಗಳಿಂದ ಇಸ್ರೇಲ್ ಮೇಲಿನ ಜಾಗತಿಕ ಬೆಂಬಲವೂ ಕುಸಿಯುತ್ತಿದೆ ಎಂದು ಟ್ರಂಪ್ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾಗಿ ವರದಿಯಾಗಿದೆ.

ಮಾತುಕತೆಯ ವೇಳೆ ಒಂದು ಹಂತದಲ್ಲಿ ಟ್ರಂಪ್ ಧ್ವನಿ ಏರಿಸಿ ನೀನು ಏನು ಮಾಡುತ್ತಿದ್ದೀಯ ಎಂದು ಪ್ರಶ್ನಿಸಿದ್ದಾರೆಂದು ಮೂಲಗಳು ತಿಳಿಸಿವೆ. ನೆತನ್ಯಾಹು ಯಾವುದೇ ಕ್ರಮ ಕೈಗೊಳ್ಳುವ ಮುನ್ನ ಅದರ ಅಂತರರಾಷ್ಟ್ರೀಯ ಪರಿಣಾಮಗಳನ್ನು ಗಂಭೀರವಾಗಿ ಪರಿಗಣಿಸಬೇಕು ಎಂದು ಟ್ರಂಪ್ ಒತ್ತಾಯಿಸಿದ್ದಾರೆ ಎನ್ನಲಾಗಿದೆ. ಇಸ್ರೇಲ್ ತನ್ನ ಕ್ರಮವನ್ನು ಸಮರ್ಥಿಸಿಕೊಳ್ಳುತ್ತಾ, ಹಿಜ್ಬುಲ್ಲಾ ನಿರಂತರವಾಗಿ ರಾಕೆಟ್ ಹಾಗೂ ಡ್ರೋನ್ ದಾಳಿಗಳನ್ನು ನಡೆಸುತ್ತಿರುವ ಕಾರಣ ಪ್ರತಿಕ್ರಿಯಿಸುವುದು ಅನಿವಾರ್ಯವಾಗಿದೆ ಎಂದು ಅಮೆರಿಕಕ್ಕೆ ತಿಳಿಸಿದೆ. ಆದರೆ, ಟ್ರಂಪ್ ಆಡಳಿತದ ಕೆಲವು ಅಧಿಕಾರಿಗಳ ಪ್ರಕಾರ, ಹಿಜ್ಬುಲ್ಲಾ ದಾಳಿಗಳಿಗೆ ಪ್ರತಿಕ್ರಿಯೆ ಅಗತ್ಯವಿದ್ದರೂ ಇಸ್ರೇಲ್ ಕೈಗೊಂಡಿರುವ ಕ್ರಮಗಳು ಪ್ರಮಾಣ ಮೀರುತ್ತಿವೆ ಎಂಬ ಅಭಿಪ್ರಾಯ ವ್ಯಕ್ತವಾಗಿದೆ. ವಿಶೇಷವಾಗಿ ನಾಗರಿಕರ ಸಾವಿನ ಸಂಖ್ಯೆ ಏರಿಕೆಯಾಗುತ್ತಿರುವುದು ಮತ್ತು ಒಂದು ಗುರಿಯನ್ನು ಹೊಡೆಯಲು ವ್ಯಾಪಕ ಪ್ರಮಾಣದ ವಾಯುದಾಳಿಗಳನ್ನು ನಡೆಸುತ್ತಿರುವುದು ಅಮೆರಿಕಾದ ಕಳವಳಕ್ಕೆ ಕಾರಣವಾಗಿದೆ. ಈ ಕಠಿಣ ಮಾತುಕತೆಯ ಬಳಿಕ ಪರಿಸ್ಥಿತಿಯಲ್ಲಿ ತಾತ್ಕಾಲಿಕ ಬದಲಾವಣೆ ಕಂಡುಬಂದಿದೆ ಎಂದು ಹೇಳಲಾಗುತ್ತಿದೆ. ಕೆಲವು ವರದಿಗಳ ಪ್ರಕಾರ, ಬೈರೂತ್‌ನಲ್ಲಿ ನಡೆಸಲು ಉದ್ದೇಶಿಸಿದ್ದ ಕೆಲವು ದಾಳಿಗಳನ್ನು ಇಸ್ರೇಲ್ ತಾತ್ಕಾಲಿಕವಾಗಿ ಸ್ಥಗಿತಗೊಳಿಸಿದೆ ಎಂದು ತಿಳಿಸಿವೆ. ಇದರ ಬೆನ್ನಲ್ಲೇ ಟ್ರಂಪ್ ಸಾಮಾಜಿಕ ಜಾಲತಾಣದಲ್ಲಿ ತಾವು ನೆತನ್ಯಾಹು ಜೊತೆ ಅತ್ಯಂತ ಫಲಪ್ರದ ಮಾತುಕತೆ ನಡೆಸಿರುವುದಾಗಿ ಬರೆದುಕೊಂಡು, ಬೈರೂತ್ ಕಡೆಗೆ ಸಾಗುತ್ತಿದ್ದ ಸೈನಿಕರನ್ನು ಹಿಂದಕ್ಕೆ ಕರೆಸಲಾಗಿದೆ ಎಂದು ಹೇಳಿದ್ದಾರೆ. ಇದೇ ವೇಳೆ ಹಿಜ್ಬುಲ್ಲಾ ಕೂಡ ಮಧ್ಯವರ್ತಿಗಳ ಮೂಲಕ ಇಸ್ರೇಲ್ ಮೇಲಿನ ದಾಳಿಗಳನ್ನು ತಾತ್ಕಾಲಿಕವಾಗಿ ನಿಲ್ಲಿಸಲು ಸಮ್ಮತಿಸಿದೆ ಎಂದು ಟ್ರಂಪ್ ಹೇಳಿಕೊಂಡಿದ್ದಾರೆ. ಆದರೆ, ಈ ಹೇಳಿಕೆಗೆ ಸಂಬಂಧಿಸಿದಂತೆ ಹಿಜ್ಬುಲ್ಲಾ ಅಥವಾ ಲೆಬನಾನ್ ಅಧಿಕಾರಿಗಳಿಂದ ಅಧಿಕೃತ ದೃಢೀಕರಣ ಲಭ್ಯವಾಗಿಲ್ಲ. ಮತ್ತೊಂದೆಡೆ ನೆತನ್ಯಾಹು ತಮ್ಮ ನಿಲುವಿನಲ್ಲಿ ಯಾವುದೇ ಬದಲಾವಣೆ ಇಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಇಸ್ರೇಲ್ ತನ್ನ ಭದ್ರತೆಯನ್ನು ಮೊದಲ ಆದ್ಯತೆಯಾಗಿ ಪರಿಗಣಿಸುತ್ತದೆ ಎಂದು ಹೇಳಿರುವ ಅವರು, ಹಿಜ್ಬುಲ್ಲಾ ದಾಳಿಗಳನ್ನು ನಿಲ್ಲಿಸದಿದ್ದರೆ ಲೆಬನಾನ್‌ನಲ್ಲಿನ ಕಾರ್ಯಾಚರಣೆಗಳು ಮುಂದುವರಿಯಲಿವೆ ಎಂದು ಎಚ್ಚರಿಕೆ ನೀಡಿದ್ದಾರೆ. ಅಗತ್ಯವಿದ್ದರೆ ಬೈರೂತ್‌ನಲ್ಲಿರುವ ಹಿಜ್ಬುಲ್ಲಾ ನೆಲೆಗಳ ಮೇಲೂ ಮತ್ತೆ ದಾಳಿ ನಡೆಸುವ ಸಾಧ್ಯತೆಯನ್ನು ಅವರು ತಳ್ಳಿಹಾಕಿಲ್ಲ. ರಾಜಕೀಯ ವಿಶ್ಲೇಷಕರ ಪ್ರಕಾರ, ಟ್ರಂಪ್ ಮತ್ತು ನೆತನ್ಯಾಹು ನಡುವಿನ ಈ ಭಿನ್ನಾಭಿಪ್ರಾಯ ಕೇವಲ ಲೆಬನಾನ್ ವಿಷಯಕ್ಕೆ ಸೀಮಿತವಾಗಿಲ್ಲ. ಅಮೆರಿಕ–ಇರಾನ್ ಮಾತುಕತೆಗಳು, ಗಾಜಾ ಯುದ್ಧದ ಪರಿಣಾಮಗಳು, ಜಾಗತಿಕ ಮಟ್ಟದಲ್ಲಿ ಇಸ್ರೇಲ್ ಎದುರಿಸುತ್ತಿರುವ ಟೀಕೆಗಳು ಹಾಗೂ ಮಧ್ಯಪ್ರಾಚ್ಯದಲ್ಲಿ ಹೆಚ್ಚುತ್ತಿರುವ ಅಸ್ಥಿರತೆ ಸೇರಿದಂತೆ ಹಲವು ಅಂಶಗಳು ಇದರ ಹಿಂದೆ ಕೆಲಸ ಮಾಡುತ್ತಿವೆ.

**ನೆತನ್ಯಾಹುಗೆ ಖಡಕ್ ಎಚ್ಚರಿಕೆ**

### ರೂಬಿಯೊ ಪ್ರಸ್ತಾವನೆಗೆ ಒಪ್ಪಿಗೆ

ಅಮೆರಿಕ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರುಬಿಯೋ ಮಂಡಿಸಿದ್ದ ಪ್ರಸ್ತಾವನೆಯನ್ನು ಲೆಬನಾನ್ ಸರ್ಕಾರ ಹಾಗೂ ಹಿಜ್ಬುಲ್ಲಾ ಒಪ್ಪಿಕೊಂಡಿವೆ ಎಂದು ಅಮೆರಿಕದಲ್ಲಿರುವ ಲೆಬನಾನ್ ರಾಯಭಾರ ಕಚೇರಿ ತಿಳಿಸಿದೆ. ಈ ಪ್ರಸ್ತಾವನೆಯ ಪ್ರಕಾರ ಬೈರೂತ್‌ನ ದಕ್ಷಿಣ ಉಪನಗರಗಳ ಮೇಲೆ ಇಸ್ರೇಲ್ ದಾಳಿ ನಡೆಸಬಾರದು ಮತ್ತು ಉತ್ತರ ಇಸ್ರೇಲ್ ಮೇಲೆ ಹಿಜ್ಬುಲ್ಲಾ ದಾಳಿ ಮಾಡಬಾರದು ಎಂಬ ಷರತ್ತುಗಳನ್ನು ಒಳಗೊಂಡಿದೆ ಎಂದು ತಿಳಿದುಬಂದಿದೆ.

ಟ್ರಂಪ್ ಈ ಕುರಿತು ಲೆಬನಾನ್ ರಾಯಭಾರಿ ನಡಾ ಹಮಾದೆ ಮೊವಾಡ್ ಅವರೊಂದಿಗೆ ಮಾತುಕತೆ ನಡೆಸಿದ್ದು, ನೆತನ್ಯಾಹು ಕೂಡ ಈ ಪ್ರಸ್ತಾವನೆಗೆ ಒಪ್ಪಿಗೆ ಸೂಚಿಸಿದ್ದಾರೆ ಎಂದು ತಿಳಿಸಿರುವುದಾಗಿ ರಾಯಭಾರ ಕಚೇರಿ ಹೇಳಿದೆ. ಆದರೆ, ಹಿಜ್ಬುಲ್ಲಾ ಕಡೆಯಿಂದ ಈವರೆಗೆ ಅಧಿಕೃತ ಪ್ರತಿಕ್ರಿಯೆ ಬಂದಿಲ್ಲ.

### ಮಹತ್ವದ ಮಾತುಕತೆ

ಈ ಬೆಳವಣಿಗೆಗಳ ನಡುವೆ ಇಸ್ರೇಲ್ ಮತ್ತು ಲೆಬನಾನ್ ಪ್ರತಿನಿಧಿಗಳ ನಡುವೆ ವಾಷಿಂಗ್ಟನ್‌ನಲ್ಲಿ ಮಂಗಳವಾರ ಮತ್ತು ಬುಧವಾರ ಮಹತ್ವದ ಮಾತುಕತೆ ನಡೆಯಲಿದೆ ಎಂದು ತಿಳಿದುಬಂದಿದೆ.

ಲೆಬನಾನ್ ಪ್ರತಿನಿಧಿಗಳು ದೇಶದ ವಿವಿಧ ಭಾಗಗಳ ಮೇಲೆ ನಡೆಯುತ್ತಿರುವ ದಾಳಿಗಳನ್ನು ಸಂಪೂರ್ಣವಾಗಿ ನಿಲ್ಲಿಸುವ ಕುರಿತು ಒಪ್ಪಂದ ಸಾಧಿಸಲು ಪ್ರಯತ್ನ ನಡೆಸಲಿದ್ದಾರೆ. ಅಂತಿಮವಾಗಿ ಪೂರ್ಣ ಪ್ರಮಾಣದ ಕದನ ವಿರಾಮ ಜಾರಿಗೆ ತರಬೇಕೆಂಬುದು ಅವರ ಉದ್ದೇಶವಾಗಿದೆ.

### ಬೈರೂತ್ ಉಪನಗರಗಳ ಮೇಲೆ ದಾಳಿ ಆದೇಶ

ಟ್ರಂಪ್ ಅವರ ಘೋಷಣೆಗೂ ಮುನ್ನ ಇಸ್ರೇಲ್ ಸರ್ಕಾರ ಬೈರೂತ್‌ನ ದಕ್ಷಿಣ ಉಪನಗರಗಳ ಮೇಲೆ ದಾಳಿ ನಡೆಸಲು ಆದೇಶ ನೀಡಿತ್ತು. ಹಿಜ್ಬುಲ್ಲಾ ನಿರಂತರವಾಗಿ ಕದನ ವಿರಾಮ ಉಲ್ಲಂಘಿಸಿ ಇಸ್ರೇಲ್ ನಗರಗಳು ಹಾಗೂ ನಾಗರಿಕರ ಮೇಲೆ ದಾಳಿ ನಡೆಸುತ್ತಿದೆ ಎಂದು ಆರೋಪಿಸಿದ ನೆತನ್ಯಾಹು ಮತ್ತು ರಕ್ಷಣಾ ಸಚಿವ ಇಸ್ರೇಲ್ ಕಾಟ್ಜ್, ಹಿಜ್ಬುಲ್ಲಾ ನೆಲೆಗಳ ವಿರುದ್ಧ ಕ್ರಮ ಕೈಗೊಳ್ಳುವುದಾಗಿ ಘೋಷಿಸಿದ್ದರು.

ಇಸ್ರೇಲ್ ಸೇನೆಯ ಅರೇಬಿಕ್ ಭಾಷಾ ವಕ್ತಾರರು ಸಾಮಾಜಿಕ ಜಾಲತಾಣದಲ್ಲಿ ಎಚ್ಚರಿಕೆ ಸಂದೇಶ ಪ್ರಕಟಿಸಿ, ಬೈರೂತ್‌ನ ದಕ್ಷಿಣ ಉಪನಗರ ಪ್ರದೇಶದ ನಿವಾಸಿಗಳು ತಕ್ಷಣ ಸ್ಥಳಾಂತರಗೊಳ್ಳುವಂತೆ ಸೂಚಿಸಿದ್ದರು. ಹಿಜ್ಬುಲ್ಲಾ ದಾಳಿಗಳನ್ನು ಮುಂದುವರಿಸಿದರೆ ದಹಿಯೆ ಪ್ರದೇಶದ ಮೇಲೆ ವ್ಯಾಪಕ ದಾಳಿ ನಡೆಸಲಾಗುವುದು ಎಂದು ಅವರು ಎಚ್ಚರಿಕೆ ನೀಡಿದ್ದರು.

## ಅಮೆರಿಕ–ಇಸ್ರೇಲ್ ನಡುವೆ ಭಿನ್ನಾಭಿಪ್ರಾಯ ಸ್ಫೋಟ

### ನಾನಿಲ್ಲದಿದ್ದರೆ ಜೈಲಿನಲ್ಲಿರುತ್ತಿದ್ದೆ– ನೆತನ್ಯಾಹು ವಿರುದ್ಧ ಗುಡುಗಿದ ಟ್ರಂಪ್




# ಕೆಪಿಎ ಆಸರೆ ಯೋಜನೆ ಸದಸ್ಯತ್ವ ನೋಂದಣಿ ಉದ್ಘಾಟನೆ

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ಛಾಯಾಗ್ರಾಹಕರ ಸಂಘ (ಕೆಪಿಎ), ಬೆಂಗಳೂರು ಇವರ ನೇತೃತ್ವದಲ್ಲಿ ಕೆಪಿಎ ಆಸರೆ ಯೋಜನೆಯನ್ನು ಉದ್ಘಾಟಿಸಲಾಯಿತು. ಈ ಯೋಜನೆಯಡಿ ಸದಸ್ಯರಾಗಿರುವ ಛಾಯಾಗ್ರಾಹಕರು ನಿಧನರಾದಲ್ಲಿ, ಅವರ ಕುಟುಂಬಕ್ಕೆ 1 ಲಕ್ಷ ಆರ್ಥಿಕ ನೆರವು ನೀಡಲಾಗುತ್ತದೆ. ಇದೇ ಸಂದರ್ಭದಲ್ಲಿ ಯೋಜನೆಗೆ ಸದಸ್ಯತ್ವ ನೋಂದಣಿಯನ್ನೂ ಆರಂಭಿಸಲಾಯಿತು. ಈ ಯೋಜನೆಯ ಸದಸ್ಯತ್ವ ಪಡೆಯಲು 110 ಶುಲ್ಕವನ್ನು ಪಾವತಿಸಬೇಕು. ಯೋಜನೆಯ ಸದಸ್ಯರಲ್ಲಿ ಯಾರಾದರೂ ಅಕಾಲಿಕವಾಗಿ ನಿಧನರಾದರೆ, ಉಳಿದ ಸದಸ್ಯರು ತಲಾ 10 ಸಹಾಯಧನವನ್ನು ನೀಡಬೇಕು. ಹೀಗೆ ಸದಸ್ಯರಿಂದ ಸಂಗ್ರಹವಾಗುವ ಮೊತ್ತವನ್ನು ಒಟ್ಟುಗೂಡಿಸಿ, ನಿಧನರಾದ ಛಾಯಾಗ್ರಾಹಕರ ಕುಟುಂಬಕ್ಕೆ 1 ಲಕ್ಷ ಆರ್ಥಿಕ ನೆರವು ನೀಡಲಾಗುವುದು. ಇದು ಛಾಯಾಗ್ರಾಹಕರ ಕುಟುಂಬಗಳಿಗೆ ಭದ್ರತೆ ಒದಗಿಸುವ ವಿಶೇಷ ಯೋಜನೆಯಾಗಿದೆ ಎಂದು ಕೆಪಿಎ ರಾಜ್ಯಾಧ್ಯಕ್ಷರಾದ ಹೆಚ್.ಎಸ್. ನಾಗೇಶ್ ಮಾಹಿತಿ ನೀಡಿದರು. ಕೆಪಿಎ

ಉದಯವಾಹಿನಿ ಚಿತ್ರ



ಆಸರೆ ಯೋಜನೆ ನೋಂದಣಿ ಕಾರ್ಯಕ್ರಮವನ್ನು ದಕ್ಷಿಣ ಭಾರತ ಫೋಟೋ ಮತ್ತು ವಿಡಿಯೋ ಸಂಘದ ಅಧ್ಯಕ್ಷರಾದ ಎಸ್. ಪರಮೇಶ್ ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಛಾಯಾಗ್ರಾಹಕರ ಹಿತದೃಷ್ಟಿಯಿಂದ ಈ ಯೋಜನೆಯನ್ನು ರೂಪಿಸಲಾಗಿದೆ.

ಪ್ರತಿಯೊಬ್ಬ ಛಾಯಾಗ್ರಾಹಕರೂ ಈ ಯೋಜನೆಯ ಸದಸ್ಯತ್ವ ಪಡೆದು ಇದರ ಪ್ರಯೋಜನ ಪಡೆಯಬೇಕು. ರಾಜ್ಯಾದ್ಯಂತ ಸದಸ್ಯತ್ವ ನೋಂದಣಿ ಆರಂಭಗೊಂಡಿದ್ದು, ವಿಶೇಷವಾಗಿ ಬೆಂಗಳೂರಿನ ಛಾಯಾಗ್ರಾಹಕರು ಹೆಚ್ಚಿನ ಸಂಖ್ಯೆಯಲ್ಲಿ ಸದಸ್ಯತ್ವ ಪಡೆಯುವಂತೆ ಕರೆ ನೀಡಿದರು.ಕಾರ್ಯಕ್ರಮದಲ್ಲಿ ಹಿರಿಯ ಛಾಯಾಗ್ರಾಹಕರಾದ ಗುರುಶ್ರೀ ಶ್ರೀನಿವಾಸ್,ವಿಶ್ವನಾಥ್ ಸಿಂಗ್, ಕೆಪಿಎ ಉಪಾಧ್ಯಕ್ಷರಾದ ಹೆಚ್.ಎನ್. ರವಿಕುಮಾರ್, ಜಂಟಿ ಕಾರ್ಯದರ್ಶಿ ಎನ್. ಪಳನಿ, ಪಿಆರ್‌ಒ ಎಂ.ಎಸ್. ಶಂಕರ್, ಕಚೇರಿ ಆಡಳಿತಾಧಿಕಾರಿಗಳಾದ ರವಿಶಂಕರ್, ಚಂದ್ರಶೇಖರ ಬೆಳಗುಂಬ, ಹಾಲಪ್ಪ, ಕೆಪಿಎ ನಿರ್ದೇಶಕರಾದ ರಾಕೇಶ್ ಕುಮಾರ್ ಟಿ.ಪಿ., ಪ್ರಮೋದ್ ಗೌಡ, ಸಂಘಟನಾ ಕಾರ್ಯದರ್ಶಿ ಎಚ್.ಎನ್. ತಿಮ್ಮೇಗೌಡ ಹಾಗೂ ಸ್ಟಾರ್ ಮುರುಳಿ ಉಪಸ್ಥಿತರಿದ್ದರು.

ಕಾರ್ಯಕ್ರಮಕ್ಕೆ ಕೆಪಿಎ ಕಾರ್ಯದರ್ಶಿ ಟಿ.ಸಿ. ನಾಗರಾಜ್ ಸ್ವಾಗತ ಕೋರಿದರು. ನೂರಾರು ಛಾಯಾಗ್ರಾಹಕರು, ಕೆಪಿಎ ಆಡಳಿತ ಮಂಡಳಿ ಸದಸ್ಯರು ಹಾಗೂ ಕೆಪಿಎ ಆಜೀವ ಸದಸ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಿ, ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

## ಕೆರೆಗಳ ಸಮಗ್ರ ಅಭಿವೃದ್ಧಿಗೆ ಆಯುಕ್ತರ ಸೂಚನೆ

ಉದಯವಾಹಿನಿ ಚಿತ್ರ




• ಉದಯವಾಹಿನಿ, ಬೆಂಗಳೂರು

ಬೆಂಗಳೂರು ದಕ್ಷಿಣ ನಗರ ಪಾಲಿಕೆ ವ್ಯಾಪ್ತಿಯ ಬೊಮ್ಮನಹಳ್ಳಿ ವಲಯದಲ್ಲಿರುವ ಪರಪ್ಪನ ಅಗ್ರಹಾರ, ಹರಳೂರು ಹಾಗೂ ಕೂಡ್ಲು ದೊಡ್ಡ ಕೆರೆಗಳಿಗೆ ಪಾಲಿಕೆ ಆಯುಕ್ತ ಕೆ.ಎನ್. ರಮೇಶ್ ಭೇಟಿ ನೀಡಿ ಪರಿಶೀಲನೆ ನಡೆಸಿ, ಕೆರೆಗಳ ಸಂರಕ್ಷಣೆ ಹಾಗೂ ಸಮಗ್ರ ಅಭಿವೃದ್ಧಿಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಪರಿಶೀಲನೆ ವೇಳೆ ಕೆರೆಗಳಿಗೆ ತ್ಯಾಜ್ಯ ನೀರು ಹರಿದುಬರುತ್ತಿರುವುದು ಗಮನಕ್ಕೆ ಬಂದ ಹಿನ್ನೆಲೆಯಲ್ಲಿ, ತ್ಯಾಜ್ಯ ನೀರು ಕೆರೆ ನೀರಿನೊಂದಿಗೆ ವಿಲೀನಗೊಳ್ಳದಂತೆ ತಡೆ ವ್ಯವಸ್ಥೆ ನಿರ್ಮಿಸಿ, ನೀರಿನ ಕಲುಷಿತತೆ ತಡೆಯಲು ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.ಕೆರೆಗಳಿಗೆ ಹರಿಯುತ್ತಿರುವ ತ್ಯಾಜ್ಯ ನೀರನ್ನು ತಡೆಯುವ ಉದ್ದೇಶದಿಂದ ಬೆಂಗಳೂರು ಜಲಮಂಡಳಿ ಕೈಗೊಂಡಿರುವ ಒಳಚರಂಡಿ ಪೈಪ್‌ಲೈನ್ ಅಳವಡಿಕೆ ಕಾಮಗಾರಿಯನ್ನು ತ್ವರಿತಗೊಳಿಸುವಂತೆ ಸ್ಥಳದಲ್ಲೇ ಜಲಮಂಡಳಿ ಅಧಿಕಾರಿಗಳಿಗೆ ದೂರವಾಣಿ ಮೂಲಕ ಸೂಚಿಸಿದರು. ಕೆರೆ ಸಂರಕ್ಷಣೆಗೆ ಸಮನ್ವಯದೊಂದಿಗೆ ಕಾರ್ಯನಿರ್ವಹಿಸುವಂತೆ ಪಾಲಿಕೆ ಅಧಿಕಾರಿಗಳಿಗೆ ತಿಳಿಸಿದರು. ಹರಳೂರು ಹಾಗೂ ಕೂಡ್ಲು ದೊಡ್ಡ ಕೆರೆಗಳ ಸಮಗ್ರ ಅಭಿವೃದ್ಧಿಗಾಗಿ ಯೋಜನೆ ರೂಪಿಸಿ, ತಂತಿ ಬೇಲಿ ಅಳವಡಿಕೆ, ತಡೆಗೋಡೆ ನಿರ್ಮಾಣ ಸೇರಿದಂತೆ ಅಗತ್ಯ ಮೂಲಸೌಕರ್ಯ ಕಾಮಗಾರಿಗಳನ್ನು ಕೈಗೊಳ್ಳಲು ಸಮಗ್ರ ಯೋಜನಾ ವರದಿ (ಡಿಪಿಆರ್) ಸಿದ್ಧಪಡಿಸಿ ಸಲ್ಲಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

## ಆದಿಶಕ್ತಿ ಕೆಂಪಮ್ಮ ದೇವಿ ಕಿರು ಜಾತ್ರಾಮಹೋತ್ಸವ

ಉದಯವಾಹಿನಿ ಚಿತ್ರ



• ಉದಯವಾಹಿನಿ, ಬೆಂಗಳೂರು

ಶ್ರೀ ಆದಿಶಕ್ತಿ ಕೆಂಪಮ್ಮದೇವಿ ದೇವಾಲಯ ಟ್ರಸ್ಟ್ ವತಿಯಿಂದ ಕೆಂಗೇರಿ ಹೋಬಳಿ ಹೊಸ ಬೈರೋಹಳ್ಳಿ ಅರ್ಚಕರ ಬಡಾವಣೆಯ ಗಂಗಾ ನಗರದಲ್ಲಿ ಶ್ರೀ ಆದಿಶಕ್ತಿ ಕೆಂಪಮ್ಮ ದೇವಿ ಕಿರು ಜಾತ್ರಾಮಹೋತ್ಸವವನ್ನು ಭಕ್ತಿ,ಭಾವ, ಸಂಭ್ರಮ ಸಡಗರದಿಂದ ಭಕ್ತರ ಸಮ್ಮುಖದಲ್ಲಿಭಕ್ತರ ಸಮ್ಮುಖದಲ್ಲಿ ನೆರವೇರಿತು. ಜಾತ್ರಾ ಮಹೋತ್ಸವದ ಅಂಗವಾಗಿ ಶ್ರೀ ಅಮ್ಮನವರ ದೇವಾಲಯದಲ್ಲಿ ಫಲ ಪಂಚಾಮೃತ ಅಭಿಷೇಕ, ದಿವ್ಯ ಅಲಂಕಾರ, ಕುಂಕುಮಾರ್ಚನೆ, ಮಹಾಮಂಗಳಾರತಿ ತೀರ್ಥ ಪ್ರಸಾದ ವಿನಿಯೋಗ, ತಂಬಿಟ್ಟಿನ ಆರತಿ ಮಡಲಕ್ಕಿ ಸೇವೆ ನಂತರ ಅನ್ನಸಂತರ್ಪಣೆ ಏರ್ಪಡಿಸಲಾಗಿತ್ತು.

ಹಣ, ಅಧಿಕಾರ ಅಂತಸ್ತು ಎಷ್ಟೇ ಇದ್ದರೂ ದೇವರ ದೃಷ್ಟಿಯಲ್ಲಿ ಎಲ್ಲರೂ ಸಮಾನರೇ, ಧಾರ್ಮಿಕ ಆಚರಣೆಯಲ್ಲಿ ತೊಡಗಿಸಿಕೊಂಡು ಆ ಮೂಲಕ ದೇವಾಲಯಕ್ಕೆ ತೆರಳಿ ಪೂಜೆ ಸಲ್ಲಿಸಿದರೆ ಅಲ್ಲಿ ಸಿಗುವ ನೆಮ್ಮದಿ,ಶಾಂತಿ ಬೇರೆಲ್ಲೂ ಸಿಗದು ಎಂದು ಧರ್ಮದರ್ಶಿಗಳು ಹಾಗೂ ದೇವಾಲಯ ಸಂಸ್ಥಾಪಕರಾದ ಗಂಗರಾಜು ತಿಳಿಸಿದರು. ಧಾರ್ಮಿಕ ಆಚರಣೆಯ ಮೂಲಕ ಎಲ್ಲ ಸಮುದಾಯದವರು ಒಗ್ಗೂಡಿ ಪೂಜಾ ಕೈಂಕರ್ಯ ನೆರವೇರಿಸಿ ಸಂಬಂಧಗಳನ್ನು ಗಟ್ಟಿಗೊಳಿಸಿಕೊಳ್ಳುವ ಮೂಲಕ ಪ್ರೀತಿ,ವಿಶ್ವಾಸ, ಬಾತೃತ್ವ,ಬಾಂಧವ್ಯವನ್ನು ವೃದ್ಧಿಸಿಕೊಂಡು ಉತ್ತಮ ಸಮಾಜ ನಿರ್ಮಾಣ ಮಾಡಲು ಜಾತ್ರಾ ಮಹೋತ್ಸವಗಳು ಸಹಕಾರಿಯಾಗಲಿದೆ ಎಂದರು. ದೇವಸ್ಥಾನದ ವ್ಯವಸ್ಥಾಪಕರಾದ ಚಿಕ್ಕಣ್ಣ, ಸಮಿತಿ ಸದಸ್ಯರಾದ ರೇಣುಕೇಶ್ವರ್, ವೇದಾವತಿ ಹಿರೇಮಠ, ನಾರಾಯಣಪ್ಪ , ತ್ಯಾಗರಾಜನ್,ಪದ್ಮ,ಸುಮಾ ಮತ್ತಿತರರು ಉಪಸ್ಥಿತರಿದ್ದರು.

## ರಾಜ್ಯಕ್ಕೆ ಜೂ.5 ರಂದು ಮುಂಗಾರು ಪ್ರವೇಶ ಹಲವೆಡೆ ಇಂದಿನಿಂದ ಐದು ದಿನ ಮಳೆ ಮುನ್ಸೂಚನೆ

• ಉದಯವಾಹಿನಿ, ಬೆಂಗಳೂರು

ರಾಜ್ಯಕ್ಕೆ ಜೂ.5 ರಂದು ಮುಂಗಾರು ಪ್ರವೇಶಿಸಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಈ ಬಾರಿ ಮುಂಗಾರು ಪ್ರವೇಶ ತಡ ಆಗಲಿದೆ ಎನ್ನಲಾಗಿತ್ತು. ಆದರೆ ತಡ ಆಗಿಲ್ಲ ಸರಿಯಾದ ಸಮಯಕ್ಕೆ ಮುಂಗಾರು ಪ್ರವೇಶಿಸುತ್ತಿದೆ ಎಂದು ಹವಾಮಾನ ಇಲಾಖೆ ಮಾಹಿತಿ ನೀಡಿದೆ. ಕರಾವಳಿಯಲ್ಲಿ ಜೂ.3 ರಿಂದ 5ರ ವರೆಗೆ ಭಾರೀ ಮಳೆ ಮುನ್ಸೂಚನೆ ಯೆಲ್ಲೋ ಅಲರ್ಟ್ ಘೋಷಣೆ ಇಂದಿನಿಂದ ಮುಂದಿನ ಐದು ದಿನಗಳ ಕಾಲ ರಾಜ್ಯದ ಹಲವೆಡೆ ಮಳೆಯಾಗಲಿದೆ. ಗದಗ, ಮೈಸೂರು ಸೇರಿ ಎಂಟು ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ. ಜೂ.3 ರಂದು ಬೆಂಗಳೂರಿನಲ್ಲಿ ಸಾಧಾರಣ ಮಳೆ ಆಗುವ ಸಾಧ್ಯತೆ ಇದೆ ಎಂದು ಇಲಾಖೆ ಮುನ್ಸೂಚನೆ ನೀಡಿದೆ.

ರಾಜ್ಯದ ಕರಾವಳಿ ಜಿಲ್ಲೆಗಳಲ್ಲಿ ಜೂ.3 ರಿಂದ ಜೂ.5ರ ವರೆಗೆ ಹಾಗೂ ಒಳನಾಡು ಜಿಲ್ಲೆಗಳಲ್ಲಿ ಜೂ.1 ರಿಂದ 4ರ ವರೆಗೆ ಒಂದು ಅಥವಾ ಎರಡು ಸ್ಥಳಗಳಲ್ಲಿ ಭಾರಿ ಮಳೆಯಾಗುವ ಸಾಧ್ಯತೆ ಇದೆ.

## ಲಾಡ್ಲೆ ಮಶಾಕ್ ದರ್ಗಾ ಗಲಾಟೆ ಕೇಸ್ ವಾಪಸ್ ರಾಜ್ಯಪಾಲರಿಗೆ ದೂರು ನೀಡಿದ ಬಿಜೆಪಿ ನಿಯೋಗ

• ಉದಯವಾಹಿನಿ, ಬೆಂಗಳೂರು

ಆಳಂದದ ಲಾಡ್ಲೆಮಶಾಕ್ ದರ್ಗಾ ಗಲಾಟೆ ಪ್ರಕರಣ ವಾಪಸ್ ಪಡೆದ ಸರ್ಕಾರದ ನಿರ್ಧಾರವನ್ನು ರದ್ದುಗೊಳಿಸಲು ಸೂಚಿಸಬೇಕು ಎಂದು ಬಿಜೆಪಿ ನಿಯೋಗ ರಾಜ್ಯಪಾಲರಿಗೆ ದೂರು ನೀಡಿದ್ದಾರೆ.

ಇಂದು ಮಧ್ಯಾಹ್ನ 1 ಗಂಟೆಗೆ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣ ಸ್ವಾಮಿ ನೇತೃತ್ವದ ಬಿಜೆಪಿ ನಿಯೋಗವು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರನ್ನು ಭೇಟಿ ಮಾಡಿ, ದೂರು ಸಲ್ಲಿಸಿದ್ದಾರೆ. ಆಳಂದ ಲಾಡ್ಲೆ ಮಶಾಕ್ ದರ್ಗಾ ಗಲಾಟೆ ಕೇಸ್ ವಾಪಸ್ ಪಡೆದಕ್ಕೆ ಸರ್ಕಾರ ಆಳಂದದ ಲಾಡ್ಲೆ ಮಶಾಕ್ ದರ್ಗಾ ಗಲಾಟೆ ಪ್ರಕರಣವನ್ನು ಸರ್ಕಾರ ವಾಪಸ್ ಪಡೆದಿದೆ.

ಈ ನಿರ್ಧಾರವನ್ನು ರದ್ದುಗೊಳಿಸಲು ಸೂಚಿಸುವಂತೆ ರಾಜ್ಯಪಾಲರಿಗೆ ದೂರಿನಲ್ಲಿ ಮನವಿ ಮಾಡಿಕೊಂಡಿದ್ದಾರೆ.

# ಡಿಕೆಶಿ ಸಂಪುಟದಲ್ಲಿ ಕರಾವಳಿಯ ಪಾಲು ಯಾರಿಗೆ?

## ಸಚಿವ ಸ್ಥಾನದ ರೇಸ್‌ನಲ್ಲಿ ಈ ನಾಲ್ವರ ಹೆಸರು!



• ಉದಯವಾಹಿನಿ, ಬೆಂಗಳೂರು

ನೂತನ ಸಿಎಂ ಆಗಿ ಬುಧವಾರ ಅಧಿಕಾರ ಸ್ವೀಕರಿಸಲಿರುವ ಡಿ.ಕೆ.ಶಿವಕುಮಾರ್ ಅವರ ಸಚಿವ ಸಂಪುಟದಲ್ಲಿ ಕರಾವಳಿ ಜಿಲ್ಲೆಗಳಿಗೆ ಎಷ್ಟು ಪ್ರಾತಿನಿಧ್ಯ ಸಿಗಲಿದೆ ಎಂಬ ಕುತೂಹಲ ಕಾಂಗ್ರೆಸ್ ವಲಯದಲ್ಲಿದೆ. ಅದರಲ್ಲೂ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಿಂದ ಯಾರು ಸಚಿವರಾಗಬಹುದೆಂಬ ಪ್ರಶ್ನೆ ರಾಜಕೀಯ ಚರ್ಚೆಯ ಕೇಂದ್ರಬಿಂದುವಾಗಿದೆ. ಕಳೆದ ವಿಧಾನಸಭಾ ಚುನಾವಣೆಯ ಫಲಿತಾಂಶಗಳನ್ನು ಗಮನಿಸಿದರೆ, ಕರಾವಳಿಯಲ್ಲಿ ಕಾಂಗ್ರೆಸ್‌ಗೆ ಸೀಮಿತ ಯಶಸ್ಸು ದೊರೆತಿತ್ತು. ದಕ್ಷಿಣ ಕನ್ನಡ ಜಿಲ್ಲೆಯ 8 ವಿಧಾನಸಭಾ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಕೇವಲ ಎರಡು ಕ್ಷೇತ್ರಗಳಲ್ಲಿ ಜಯ ಸಾಧಿಸಿದ್ದರೆ, ಉಡುಪಿ ಜಿಲ್ಲೆಯ ಐದು ಕ್ಷೇತ್ರಗಳಲ್ಲೂ ಬಿಜೆಪಿ ಗೆಲುವು ಸಾಧಿಸಿತ್ತು. ಹೀಗಾಗಿ, ಕರಾವಳಿಯಿಂದ ಸಚಿವ ಸ್ಥಾನ ಪಡೆಯುವವರ ಸಂಖ್ಯೆ ಹಾಗೂ ಹೆಸರುಗಳ ಬಗ್ಗೆ ಹಲವು ಲೆಕ್ಕಾಚಾರಗಳು ನಡೆಯುತ್ತಿವೆ. **ಯು.ಟಿ.ಖಾದರ್‌ಗೆ ಸಚಿವ ಸ್ಥಾನ ಬಹುತೇಕ ಖಚಿತ:** ಜಿಲ್ಲೆಯಲ್ಲಿ ಕಾಂಗ್ರೆಸ್ ಗೆದ್ದಿರುವ ಎರಡು ಕ್ಷೇತ್ರಗಳ ಪೈಕಿ ಮಂಗಳೂರು ಕ್ಷೇತ್ರದ ಶಾಸಕ ಯು.ಟಿ.ಖಾದರ್ ಹಾಗೂ ಪುತ್ತೂರು ಕ್ಷೇತ್ರದ ಶಾಸಕ ಅಶೋಕ್ ಕುಮಾರ್ ರೈ ಪ್ರಮುಖರು. ಅಶೋಕ್ ಕುಮಾರ್ ರೈ ಮೊದಲ ಬಾರಿಗೆ ಶಾಸಕರಾಗಿ ಆಯ್ಕೆಯಾಗಿರುವ ಕಾರಣ, ಈ ಹಂತದಲ್ಲಿ ಅವರಿಗೆ ಸಚಿವ ಸ್ಥಾನ ಸಿಗುವ ಸಾಧ್ಯತೆ ತೀರಾ ಕಡಿಮೆ ಎಂದು ಕಾಂಗ್ರೆಸ್ ಮೂಲಗಳು ಹೇಳುತ್ತವೆ.


ಹೀಗಾಗಿ, ಜಿಲ್ಲೆಯ ಮಟ್ಟದಲ್ಲಿ ಸಚಿವ ಸ್ಥಾನದ ಪ್ರಬಲ ಆಕಾಂಕ್ಷಿಯಾಗಿ ಖಾದರ್ ಹೆಸರು ಮುಂಚೂಣಿಯಲ್ಲಿದೆ. ಈಗಾಗಲೇ ವಿಧಾನಸಭೆಯ ಸ್ಪೀಕರ್ ಆಗಿ ಕೆಲಸ ಮಾಡಿರುವ ಖಾದರ್, ರಾಜ್ಯ ರಾಜಕೀಯದಲ್ಲಿ ಮಹತ್ವದ ಸ್ಥಾನಮಾನ ಹೊಂದಿದ್ದಾರೆ. ಹೊಸ ಸರ್ಕಾರದಲ್ಲಿ ಅವರಿಗೆ ಕ್ಯಾಬಿನೆಟ್ ದರ್ಜೆಯ ಸಚಿವ ಸ್ಥಾನ ಸಿಗುವ ಸಾಧ್ಯತೆ ಹೆಚ್ಚಿದೆ ಎನ್ನುವುದು ಕಾಂಗ್ರೆಸ್ ವಲಯದ ಲೆಕ್ಕ.

ಖಾದರ್ ಹೆಸರು ಕೇವಲ ಸಚಿವ ಸ್ಥಾನದ ಮಟ್ಟಕ್ಕೆ ಸೀಮಿತವಾಗಿಲ್ಲ. ಉಪ ಮುಖ್ಯಮಂತ್ರಿ ಹುದ್ದೆಗೂ ಕೇಳಿಬರುತ್ತಿದೆ. ಮುಸ್ಲಿಂ ಸಮುದಾಯಕ್ಕೆ ಪ್ರಾತಿನಿಧ್ಯ ನೀಡುವ ಲೆಕ್ಕಾಚಾರದಲ್ಲಿ ಖಾದರ್ ಹೆಸರು ಗಂಭೀರವಾಗಿ ಚರ್ಚೆಯಲ್ಲಿದೆ. ಡಿಸಿಎಂ ಸ್ಥಾನದ ಆಕಾಂಕ್ಷಿಗಳ ಪೈಕಿ ಒಬ್ಬರಾಗಿದ್ದ ಜಮೀರ್ ಅಹ್ಮದ್ ಖಾನ್ ಅವರದೆನ್ನಲ್ಲಾದ ಆಡಿಯೋ ವೈರಲ್ ಆದ ಕಾರಣ ಸಮೀಕರಣಗಳು ಬದಲಾಗುವ ಸಾಧ್ಯತೆ ಇದೆ ಎಂಬ ಮಾತುಗಳೂ ಕೇಳಿಬರುತ್ತಿವೆ.



ಬಿ.ಕೆ.ಹರಿಪ್ರಸಾದ್ ಹೆಸರು ಕೂಡ ಚರ್ಚೆಯಲ್ಲಿ

ಡಿಸಿಎಂ ಹುದ್ದೆಯ ಚರ್ಚೆಯಲ್ಲೂ ಖಾದರ್ ಹೆಸರು





### ಕರಾವಳಿಯ ಲೆಕ್ಕಾಚಾರವೇನು?

ಪ್ರಸ್ತುತ ರಾಜಕೀಯ ಬೆಳವಣಿಗೆಗಳನ್ನು ಗಮನಿಸಿದರೆ ಕರಾವಳಿಯಿಂದ ಸಚಿವ ಸ್ಥಾನ ಪಡೆಯುವವರ ಪಟ್ಟಿಯಲ್ಲಿ ಯು.ಟಿ.ಖಾದರ್ ಅತ್ಯಂತ ಬಲಿಷ್ಠ ಅಭ್ಯರ್ಥಿಯಾಗಿ ಕಾಣಿಸಿಕೊಂಡಿದ್ದಾರೆ. ಅವರ ಹೆಸರು ಡಿಸಿಎಂ ಹುದ್ದೆಯ ಚರ್ಚೆಯಲ್ಲೂ ಕೇಳಿಬರುತ್ತಿರುವುದು ಗಮನಾರ್ಹ ಬೆಳವಣಿಗೆಯಾಗಿದೆ.ಇದರ ಜೊತೆಗೆ ಮಂಜುನಾಥ ಭಂಡಾರಿ, ಐವನ್ ಡಿಸೋಜಾ ಹಾಗೂ ಬಿ.ಕೆ.ಹರಿಪ್ರಸಾದ್ ಹೆಸರುಗಳು ವಿವಿಧ ಸಮುದಾಯ, ಪ್ರಾದೇಶಿಕ ಮತ್ತು ರಾಜಕೀಯ ಸಮೀಕರಣಗಳ ಆಧಾರದ ಮೇಲೆ ಚರ್ಚೆಯಲ್ಲಿವೆ.

### ಪಕ್ಷ ಯಾವ ಜವಾಬ್ದಾರಿ ಕೊಟ್ಟರೂ ನಿಭಾಯಿಸುತ್ತೇನೆ-ಖಾದರ್

ಸಚಿವ ಸ್ಥಾನದ ಸಾಧ್ಯತೆಗಳ ಬಗ್ಗೆ ಇತ್ತೀಚೆಗೆ ಪ್ರತಿಕ್ರಿಯಿಸಿದ್ದ ಯು.ಟಿ.ಖಾದರ್, ನಾನು ಈಗ ಸ್ಪೀಕರ್ ಆಗಿದ್ದೇನೆ. ಸಚಿವ ಸ್ಥಾನದ ಬಗ್ಗೆ ಯಾವುದೇ ಚರ್ಚೆ ನಡೆದಿಲ್ಲ. ಪಕ್ಷ ಹಾಗೂ ಹೈಕಮಾಂಡ್ ಯಾವ ಜವಾಬ್ದಾರಿ ನೀಡುತ್ತದೆಯೋ ಅದನ್ನು ನಿರ್ವಹಿಸುತ್ತೇನೆ. ಸಚಿವ ಸ್ಥಾನ ಕೊಟ್ಟರೆ ಸಚಿವನಾಗಿ, ಸ್ಪೀಕರ್ ಆಗಿ ಮುಂದುವರಿಯಲು ಹೇಳಿದರೆ ಸ್ಪೀಕರ್ ಆಗಿ, ಶಾಸಕನಾಗಿ ಕೆಲಸ ಮಾಡಲು ಸೂಚಿಸಿದರೆ ಅದರಂತೆ ಕೆಲಸ ಮಾಡುತ್ತೇನೆ ಎಂದು ಹೇಳಿದ್ದರು.

### ಉಡುಪಿಯಲ್ಲಿ ಸಚಿವ ಸ್ಥಾನದ ಲೆಕ್ಕಾಚಾರ

ಉಡುಪಿ ಜಿಲ್ಲೆಯಲ್ಲಿ ಕಾಂಗ್ರೆಸ್‌ಗೆ ಒಬ್ಬ ಶಾಸಕರೂ ಇಲ್ಲ. ಐದು ಕ್ಷೇತ್ರಗಳಲ್ಲೂ ಬಿಜೆಪಿ ಶಾಸಕರು ಆಯ್ಕೆಯಾಗಿದ್ದಾರೆ. ಆದರೂ, ವಿಧಾನ ಪರಿಷತ್ ಸದಸ್ಯರ ಮೂಲಕ ಉಡುಪಿ ಜಿಲ್ಲೆಗೆ ಪ್ರಾತಿನಿಧ್ಯ ನೀಡುವ ಸಾಧ್ಯತೆಯ ಬಗ್ಗೆ ಕಾಂಗ್ರೆಸ್ ವಲಯದಲ್ಲಿ ಚರ್ಚೆಗಳು ನಡೆಯುತ್ತಿವೆ. ಈ ಲೆಕ್ಕಾಚಾರದಲ್ಲಿ ಮೊದಲಿಗೆ ಕೇಳಿಬರುವ ಹೆಸರು ವಿಧಾನ ಪರಿಷತ್ ಸದಸ್ಯ ಮಂಜುನಾಥ ಭಂಡಾರಿ ಅವರದ್ದು.

ಮಂಜುನಾಥ ಭಂಡಾರಿ ಹೆಸರು ಮುನ್ನೆಲೆಗೆ

ಕೆಪಿಸಿಸಿ ಕಾರ್ಯಾಧ್ಯಕ್ಷರಾಗಿ ಕಾರ್ಯನಿರ್ವಹಿಸಿದ್ದ ಮಂಜುನಾಥ ಭಂಡಾರಿ ಪ್ರಸ್ತುತ ವಿಧಾನ ಪರಿಷತ್ ಸದಸ್ಯರಾಗಿದ್ದು, ದಕ್ಷಿಣ ಕನ್ನಡ-ಉಡುಪಿ ಕ್ಷೇತ್ರವನ್ನು ಪ್ರತಿನಿಧಿಸುತ್ತಿದ್ದಾರೆ. ಸಂಘಟನಾ ಅನುಭವ, ಪಕ್ಷ ನಿಷ್ಠೆ ಹಾಗೂ ಕರಾವಳಿ ಭಾಗದಲ್ಲಿ ಪಕ್ಷ ಕಟ್ಟುವಲ್ಲಿ ವಹಿಸಿರುವ ಪಾತ್ರದ ಆಧಾರದಲ್ಲಿ ಅವರಿಗೆ ಸಚಿವ ಸ್ಥಾನ ನೀಡುವ ಸಾಧ್ಯತೆಗಳ ಬಗ್ಗೆ ಕಾಂಗ್ರೆಸ್ ವಲಯದಲ್ಲಿ ಚರ್ಚೆಗಳು ನಡೆಯುತ್ತಿವೆ.

ಪ್ರಸ್ತುತ ಅವರು ದೆಹಲಿಯಲ್ಲಿ ಪಕ್ಷದ ವರಿಷ್ಠರನ್ನು ಭೇಟಿ ಮಾಡುವ ಪ್ರಯತ್ನಗಳಲ್ಲಿ ನಿರತರಾಗಿದ್ದು, ಸಚಿವ ಸ್ಥಾನದ ಸಂಬಂಧ ತಮ್ಮ ಪರವಾದ ರಾಜಕೀಯ ವಾತಾವರಣ ನಿರ್ಮಿಸಲು ಮುಂದಾಗಿದ್ದಾರೆ ಎಂಬ ಮಾಹಿತಿ ಕಾಂಗ್ರೆಸ್ ಮೂಲಗಳಿಂದ ಲಭ್ಯವಾಗಿದೆ.

## ಡಿಕೆಶಿ ಪದಗ್ರಹಣಕ್ಕೆ ಸಿದ್ಧತೆ; ವಿಧಾನಸೌಧದ ಸುತ್ತಮುತ್ತ ಇರುವ ಸರ್ಕಾರಿ ಕಚೇರಿಗಳಿಗೆ ಅರ್ಧದಿನ ರಜೆ ಘೋಷಣೆ

• ಉದಯವಾಹಿನಿ, ಬೆಂಗಳೂರು

ನಿಯೋಜಿತ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರ ಪ್ರಮಾಣ ವಚನ ಸ್ವೀಕಾರ ಸಮಾರಂಭದ ಹಿನ್ನೆಲೆಯಲ್ಲಿ ಕರ್ನಾಟಕ ಸರ್ಕಾರ ಜೂನ್ 3 ರಂದು ವಿಧಾನಸೌಧ, ವಿಕಾಸಸೌಧ ಮತ್ತು ಬಹುಮಹಡಿ ಕಟ್ಟಡದಲ್ಲಿನ ಸರ್ಕಾರಿ ನೌಕರರಿಗೆ ಅರ್ಧ ದಿನ ರಜೆ ಘೋಷಿಸಲಾಗಿದೆ. ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಹೊರಡಿಸಿದ

ಉದಯವಾಹಿನಿ ಚಿತ್ರ



ಅಧಿಸೂಚನೆ ಪ್ರಕಾರ, ಜೂನ್ 3 ರಂದು ಸಂಜೆ 4.05ಕ್ಕೆ ವಿಧಾನಸೌಧದ ಆವರಣದಲ್ಲಿ ಪ್ರಮಾಣ ವಚನ ಸ್ವೀಕಾರ ಸಮಾರಂಭ ನಡೆಯಲಿದೆ. ಈ ಕಾರ್ಯಕ್ರಮದಲ್ಲಿ ಗಣ್ಯರು, ಚುನಾಯಿತ ಪ್ರತಿನಿಧಿಗಳು, ಪಕ್ಷದ ಮುಖಂಡರು ಮತ್ತು ಸಾರ್ವಜನಿಕರು ಭಾಗವಹಿಸುವ ನಿರೀಕ್ಷೆಯಿದೆ.ಭದ್ರತಾ ವ್ಯವಸ್ಥೆಗಳು, ಸಂಚಾರ ನಿರ್ವಹಣೆ ಮತ್ತು ಸಮಾರಂಭದ ಸುಗಮ ನಿರ್ವಹಣೆಗೆ ಅನುಕೂಲವಾಗುವಂತೆ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ಸರ್ಕಾರ ತಿಳಿಸಿದೆ. ವಿಧಾನಸೌಧದ ಆವರಣದಲ್ಲಿ ಮತ್ತು ಸುತ್ತಮುತ್ತ ಭಾರಿ ವಾಹನಗಳ ಸಂಚಾರ ಮತ್ತು ಜನದಟ್ಟಣೆ ಉಂಟಾಗಬಹುದು ಎಂದು ನಿರೀಕ್ಷಿಸಲಾಗಿದೆ. ಇದರ ಪರಿಣಾಮವಾಗಿ, ಜೂನ್ 3 ರಂದು ಮಧ್ಯಾಹ್ನ ವಿಧಾನಸಭೆ ಮತ್ತು ವಿಧಾನಸೌಧದ ಸುತ್ತಮುತ್ತಲಿನ ಸರ್ಕಾರಿ ಕಚೇರಿಗಳು ಮುಚ್ಚಲ್ಪಡುತ್ತವೆ.

## ನೀರಿನ ಸೋರಿಕೆ, ಅಕ್ರಮ ಸಂಪರ್ಕಗಳಿಗೆ ಕಡಿವಾಣ

• ಉದಯವಾಹಿನಿ, ಬೆಂಗಳೂರು

ನಗರದಲ್ಲಿ ನೀರಿನ ಸೋರಿಕೆ ಹಾಗೂ ಅಕ್ರಮ ಸಂಪರ್ಕಗಳ ತಡೆಗಟ್ಟಲು ಬೆಂಗಳೂರು ಜಲ ಸರಬರಾಜು ಮತ್ತು ಒಳಚರಂಡಿ ಮಂಡಳಿ ಅತ್ಯಾಧುನಿಕ ತಂತ್ರಜ್ಞಾನಗಳ ಬಳಕೆಗೆ ಮುಂದಾಗಿದೆ.

ಕೃತಕ ಬುದ್ಧಿಮತ್ತೆ ಪ್ರಿಡಿಕ್ಟಿವ್ ಅನಾಲಿಟಿಕ್ಸ್ ಹಾಗೂ ರೋಬೋಟಿಕ್ ತಪಾಸಣಾ ತಂತ್ರಜ್ಞಾನಗಳನ್ನು ಬಳಸಿಕೊಂಡು ನೀರಿನ ವಿತರಣಾ ಜಾಲದಲ್ಲಿ ಉಂಟಾಗುವ ನಷ್ಟವನ್ನು ಪತ್ತೆಹಚ್ಚುವ ಮಹತ್ವಾಕಾಂಕ್ಷಿ ಯೋಜನೆ ಜಾರಿಗೆ ತರಲು ಜಲಮಂಡಳಿ ಮುಂದಾಗಿದೆ.

ಬಿಡಬ್ಲ್ಯೂಎಸ್‌ಎಸ್ಬಿ ಅಧ್ಯಕ್ಷ ರಾಮ್ ಪ್ರಸಾತ್ ಮನೋಹರ್ ಅವರು ಮಾತನಾಡಿ, ನಗರದ ವಿವಿಧ ಭಾಗಗಳಲ್ಲಿ ನೀರಿನ ಕಳ್ಳತನ ಹಾಗೂ ಲೆಕ್ಕವಿಲ್ಲದ ನೀರಿನ ಮೂಲಗಳನ್ನು ಪತ್ತೆಹಚ್ಚಲು ಎರಡು ಸ್ಟಾರ್ಟ್‌ಅಪ್ ಸಂಸ್ಥೆಗಳೊಂದಿಗೆ ಜಂಟಿ ಪ್ರಾಯೋಗಿಕ ಅಧ್ಯಯನ ನಡೆಸಲು ಒಪ್ಪಿಗೆ ನೀಡಲಾಗಿದೆ ಎಂದು ಹೇಳಿದ್ದಾರೆ. ಈ ಯೋಜನೆಯಲ್ಲಿ ಸಂಸ್ಥೆಗಳು ಭಾಗವಹಿಸಲಿವೆ. ನೀರಿನ ಸೋರಿಕೆ, ಅಕ್ರಮ ಸಂಪರ್ಕಗಳು ಮತ್ತು ಆದಾಯೇತರ ನೀರಿನ ನಷ್ಟವನ್ನು ಕಡಿಮೆ ಮಾಡುವ ಮಾರ್ಗಗಳನ್ನು ಈ ಅಧ್ಯಯನದಲ್ಲಿ ಪರಿಶೀಲಿಸಲಾಗುತ್ತದೆ.

ಈ ಯೋಜನೆ ಅಡಿಯಲ್ಲಿ ಆಯ್ಕೆಯಾಗಿದ್ದು, ಸಂಪೂರ್ಣ ವೆಚ್ಚವನ್ನು ಅನುದಾನದ ಮೂಲಕ ಭರಿಸಲಾಗುತ್ತಿದೆ. ಜೊತೆಗೆ ಸಂಸ್ಥೆ ಇನ್‌ಕ್ಯುಬೇಷನ್ ಪಾಲುದಾರರಾಗಿ ಮತ್ತು ತಾಂತ್ರಿಕ ಪಾಲುದಾರರಾಗಿ ಸಹಕರಿಸುತ್ತಿವೆ.

ಉದಯವಾಹಿನಿ ಚಿತ್ರ




## ವಾಣಿಜ್ಯ ದರ ಏರಿಕೆ: ಸದ್ಯಕ್ಕೆ ದರ ಏರಿಕೆ ಇಲ್ಲ

• ಉದಯವಾಹಿನಿ, ಬೆಂಗಳೂರು

ಜೂನ್ 1ರಿಂದ ವಾಣಿಜ್ಯ ಎಲ್‌ಪಿಜಿ ಸಿಲಿಂಡರ್ ದರದಲ್ಲಿ ರೂ.46 ಏರಿಕೆಯಾಗಿರುವುದು ಬೆಂಗಳೂರಿನ ಹೋಟೆಲ್, ರೆಸ್ಟೋರೆಂಟ್ ಹಾಗೂ ಕ್ಯಾಟರಿಂಗ್ ಉದ್ಯಮಕ್ಕೆ ಮತ್ತಷ್ಟು ಆರ್ಥಿಕ ಹೊರೆ ತಂದಿದೆ. ಆದರೂ ಸದ್ಯಕ್ಕೆ ಆಹಾರ ಪದಾರ್ಥಗಳ ದರ ಹೆಚ್ಚಿಸುವ ಉದ್ದೇಶ ಇಲ್ಲ ಎಂದು ಹೋಟೆಲ್ ಉದ್ಯಮದ ಪ್ರತಿನಿಧಿಗಳು ಸ್ಪಷ್ಟಪಡಿಸಿದ್ದಾರೆ. ಬೆಂಗಳೂರು ಹೋಟೆಲ್ಸ್ ಅಸೋಸಿಯೇಷನ್ ಕಾರ್ಯದರ್ಶಿ ವೀರೇಂದ್ರ ಕಾಮತ್ ಅವರು ಮಾತನಾಡಿ, ಪ್ರತಿ ತಿಂಗಳ ಆರಂಭದಲ್ಲಿ ವಾಣಿಜ್ಯ ಎಲ್‌ಪಿಜಿ ದರದಲ್ಲಿ ಏರಿಳಿತ ಸಾಮಾನ್ಯ. ಆದರೆ, ಕಳೆದ ಕೆಲವು ತಿಂಗಳುಗಳಿಂದ ನಿರಂತರವಾಗಿ ದರ ಏರಿಕೆಯಾಗುತ್ತಿರುವುದು ಆತಂಕಕ್ಕೆ ಕಾರಣವಾಗಿದೆ ಎಂದು ಹೇಳಿದ್ದಾರೆ.

ಸಾಮಾನ್ಯವಾಗಿ ತಿಂಗಳ ಆರಂಭದಲ್ಲಿ ರೂ.40ರ ಆಸುಪಾಸಿನಲ್ಲಿ ದರ ಬದಲಾಗುತ್ತದೆ. ಆದರೆ, ಇತ್ತೀಚಿನ ತಿಂಗಳುಗಳಲ್ಲಿ ಒಟ್ಟು ರೂ.900ಕ್ಕೂ ಹೆಚ್ಚು ಏರಿಕೆಯಾಗಿರುವುದರಿಂದ ಹೋಟೆಲ್ ಉದ್ಯಮದ ನಿರ್ವಹಣಾ ವೆಚ್ಚಗಳು ಗಣನೀಯವಾಗಿ ಹೆಚ್ಚಿವೆ ಎಂದು ತಿಳಿಸಿದ್ದಾರೆ. ಬೆಂಗಳೂರು ಹೋಟೆಲ್ಸ್ ಅಸೋಸಿಯೇಷನ್ ಗೌರವಾಧ್ಯಕ್ಷ ಪಿ.ಸಿ. ರಾವ್ ಮಾತನಾಡಿ, ಹೆಚ್ಚುವರಿ ವೆಚ್ಚವನ್ನು ಸದ್ಯಕ್ಕೆ ಹೋಟೆಲ್‌ಗಳೇ ಭರಿಸುತ್ತಿವೆ. ಗ್ರಾಹಕರ ಮೇಲೆ ಹೊರೆ ಹಾಕುವ ಉದ್ದೇಶ ಇಲ್ಲ ಎಂದು ಹೇಳಿದ್ದಾರೆ. ಇದೇ ವೇಳೆ ಎಲ್‌ಪಿಜಿ ದರ ರೂ.900ಕ್ಕೂ ಹೆಚ್ಚು ಏರಿದ್ದಾಗ ಮಾತ್ರ ಮೆನು ದರ ಪರಿಷ್ಕರಣೆ ಮಾಡಲಾಗಿತ್ತು ಎಂದು ಸ್ಮರಿಸಿದ್ದಾರೆ.

ಉದಯವಾಹಿನಿ ಚಿತ್ರ



**ಇಂಧನ ದರಗಳ ಏರಿಕೆಯಿಂದ ಹೋಟೆಲ್ ಮತ್ತು ಆಹಾರ ಸೇವಾ ಕ್ಷೇತ್ರದ ಒಟ್ಟಾರೆ ಕಾರ್ಯಾಚರಣಾ ವೆಚ್ಚವೂ ಹೆಚ್ಚಾಗಿದೆ. ಕಚ್ಚಾ ವಸ್ತುಗಳು, ವಿದ್ಯುತ್ ಮತ್ತು ಇತರೆ ಸೇವಾ ವೆಚ್ಚಗಳ ಹೆಚ್ಚಳದ ನಡುವೆಯೇ ಎಲ್‌ಪಿಜಿ ದರ ಏರಿಕೆಯೂ ಆಹಾರ ಪದಾರ್ಥಗಳ ಬೆಲೆ ಹೆಚ್ಚಳಕ್ಕೆ ಕಾರಣವಾಗಿದೆ ಎಂದು ಹೋಟೆಲ್ ಮಾಲೀಕರು ಅಭಿಪ್ರಾಯಪಟ್ಟಿದ್ದಾರೆ.**

## ದಿನೇಶ್ ಗುಂಡೂರಾವ್‌ರಿಗೆ ಡಿಸಿಎಂ ಸ್ಥಾನಕ್ಕೆ ಆಗ್ರಹಿಸಿ ಪ್ರತಿಭಟನೆ

• ಉದಯವಾಹಿನಿ, ಬೆಂಗಳೂರು

ಗಾಂಧಿನಗರ ವಿಧಾನಸಭಾ ಕ್ಷೇತ್ರದ ಶಾಸಕ ಹಾಗೂ ಸಚಿವ ದಿನೇಶ್ ಗುಂಡೂರಾವ್ ಅವರಿಗೆ ರಾಜ್ಯ ಸರ್ಕಾರದಲ್ಲಿ ಉಪಮುಖ್ಯಮಂತ್ರಿ (ಡಿಸಿಎಂ) ಸ್ಥಾನ ನೀಡಬೇಕೆಂದು ಆಗ್ರಹಿಸಿ ಕ್ಷೇತ್ರದ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಮಂಗಳವಾರ ಕ್ವೀನ್ಸ್ ರಸ್ತೆಯ ಕೆಪಿಸಿಸಿ ಕಚೇರಿ ಮುಂಭಾಗ ಬೃಹತ್ ಪ್ರತಿಭಟನೆ ನಡೆಸಿ, ಜಂಟಿ ಮನವಿ ಪತ್ರ ಸಲ್ಲಿಸಿದರು.

ಗಾಂಧಿನಗರ ಕ್ಷೇತ್ರದ ಪ್ರಮುಖ ನಾಯಕರ ನೇತೃತ್ವದಲ್ಲಿ ಜಮಾಯಿಸಿದ ನೂರಾರು ಕಾರ್ಯಕರ್ತರು, ದಿನೇಶ್ ಗುಂಡೂರಾವ್ ಪರವಾಗಿ ಘೋಷಣೆಗಳನ್ನು ಕೂಗಿದರು. ಪಕ್ಷಕ್ಕಾಗಿ ದಶಕಗಳಿಂದ ಶ್ರಮಿಸಿರುವ ಅವರಿಗೆ ತಕ್ಷಣವೇ ಡಿಸಿಎಂ ಹುದ್ದೆ ನೀಡುವ ಮೂಲಕ ಹೈಕಮಾಂಡ್ ಸೂಕ್ತ ನಾಯಕತ್ವ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ರಾಜ್ಯದ ಸಮಗ್ರ ಅಭಿವೃದ್ಧಿ, ಸಾಮಾಜಿಕ ನ್ಯಾಯ ಹಾಗೂ ಜನಸಾಮಾನ್ಯರ ಸಮಸ್ಯೆಗಳ ಪರಿಹಾರಕ್ಕೆ ದಿನೇಶ್ ಗುಂಡೂರಾವ್ ಅವರಂತಹ ಅನುಭವಿ ನಾಯಕರ ಸೇವೆ ಇನ್ನಷ್ಟು ಪರಿಣಾಮಕಾರಿಯಾಗಿ ಬಳಕೆಯಾಗಬೇಕಿದೆ. ಆ

# ವಿಕ್ಟೋರಿಯಾ ಆಸ್ಪತ್ರೆಯಲ್ಲಿ ತಿಗಣೆ ಕಾಟ

## ರೋಗಿಗಳು-ಸಹಾಯಕರ ನಿದ್ದೆಗೆಡಿಸಿದ ಸಮಸ್ಯೆ; ಸ್ವಚ್ಛತೆ ನಿರ್ವಹಣೆ ಕುರಿತು ಜನರ ಆಕ್ರೋಶ

• ಉದಯವಾಹಿನಿ, ಬೆಂಗಳೂರು

ನಗರದ ಪ್ರಮುಖ ಸರ್ಕಾರಿ ಆಸ್ಪತ್ರೆಗಳಲ್ಲೊಂದಾದ ವಿಕ್ಟೋರಿಯಾ ಆಸ್ಪತ್ರೆಯಲ್ಲಿ ತಿಗಣೆ ಕಾಟದ ಆರೋಪ ಕೇಳಿಬಂದಿದ್ದು, ರೋಗಿಗಳು ಹಾಗೂ ಸಹಾಯಕರು ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಆಸ್ಪತ್ರೆಯ ಮೂರನೇ ಮಹಡಿಯ ಸರ್ಜಿಕಲ್-ಗ್ಯಾಸ್ಟ್ರೋ ವಾರ್ಡ್‌ನಲ್ಲಿ ತಿಗಣೆ ಕಾಟ ಹೆಚ್ಚಾಗಿದ್ದು, ರೋಗಿಗಳ ಆರೈಕೆಗಾಗಿ ರಾತ್ರಿ ತಂಗುವ ಸಂಬಂಧಿಕರು ನಿದ್ರೆಯಿಲ್ಲದೆ ಕಾಲ ಕಳೆಯಬೇಕಾದ ಪರಿಸ್ಥಿತಿ ಎದುರಾಗಿದೆ. ರೋಗಿಗಳು ಹಾಗೂ ಅವರ ಕುಟುಂಬ ಸದಸ್ಯರಿಗೆ ಸುರಕ್ಷಿತ ಮತ್ತು ಸ್ವಚ್ಛ ವಾತಾವರಣ ಕಲ್ಪಿಸಲು ಪರಿಣಾಮಕಾರಿ ಕೀಟ ನಿಯಂತ್ರಣ ಕ್ರಮಗಳನ್ನು ಕೈಗೊಳ್ಳಬೇಕೆಂದು ಮನವಿ ಮಾಡಿದ್ದಾರೆ. ಅಲ್ಲದೆ, ಹಲವು ದಿನಗಳಿಂದ ಈ ಸಮಸ್ಯೆ ಮುಂದುವರಿದಿದ್ದರೂ ಸಂಬಂಧಿಸಿದ ಅಧಿಕಾರಿಗಳಿಗೆ ದೂರು ನೀಡಿದ ಬಳಿಕವೂ ಸಮರ್ಪಕ ಕ್ರಮ ಕೈಗೊಳ್ಳಲಾಗಿಲ್ಲ ಎಂದು ಆರೋಪಿಸಿದ್ದಾರೆ.

ತಿಗಣೆ ಕಾಟದಿಂದ ವಾರ್ಡ್‌ಗಳಲ್ಲಿ ಉಳಿಯುವ ಸಹಾಯಕರಿಗೆ ತೀವ್ರ ಅಸೌಕರ್ಯ ಮತ್ತು ಆತಂಕ ಉಂಟಾಗುತ್ತಿದೆ ಎಂದು ತಿಳಿಸಿದ್ದಾರೆ. ಈ ಆರೋಪಗಳನ್ನು ಆಸ್ಪತ್ರೆ ಆಡಳಿತ ತಳ್ಳಿಹಾಕಿದ್ದು, ಸಮಸ್ಯೆಯನ್ನು ಈಗಾಗಲೇ ಪರಿಹರಿಸಲಾಗಿದೆ ಎಂದು ಸ್ಪಷ್ಟಪಡಿಸಿದೆ. ಪ್ರಸ್ತುತ ತಿಗಣೆ ಸಮಸ್ಯೆ ಸಂಪೂರ್ಣವಾಗಿ ನಿವಾರಣೆಯಾಗಿದೆ.

ಉದಯವಾಹಿನಿ ಚಿತ್ರ




### ತಕ್ಷಣ ಕ್ರಮ ಕೈಗೊಳ್ಳಿ

ರೋಗಿಯೊಬ್ಬರ ಸಹಾಯಕರು ಹಂಚಿಕೊಂಡಿರುವ ವಿಡಿಯೊದಲ್ಲಿ ಹಾಸಿಗೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ತಿಗಣೆಗಳಿರುವ ದೃಶ್ಯಗಳು ಕಂಡು ಬಂದಿದ್ದು, ತಕ್ಷಣ ಕ್ರಮ ಕೈಗೊಳ್ಳುವಂತೆ ಆಸ್ಪತ್ರೆ ಆಡಳಿತ ಮಂಡಳಿಯನ್ನು ಒತ್ತಾಯಿಸಿದ್ದಾರೆ.

### ಕೀಟ ನಿಯಂತ್ರಣ ಕಾರ್ಯಾಚರಣೆ

ಮೂರನೇ ಮಹಡಿಯ ಶಸ್ತ್ರಚಿಕಿತ್ಸೆ-ಗ್ಯಾಸ್ಟ್ರೋ ವಾರ್ಡ್‌ನಲ್ಲಿ ಮಾತ್ರ ಈ ಸಮಸ್ಯೆ ಕಂಡುಬಂದಿದ್ದು, ಮಾಹಿತಿ ದೊರಕಿದ ತಕ್ಷಣ ರೋಬೋಟಿಕ್ ಕ್ಲೀನಿಂಗ್, ಫ್ಯೂಮಿಗೇಷನ್ ಹಾಗೂ ಕೀಟ ನಿಯಂತ್ರಣ ಕಾರ್ಯಾಚರಣೆ ನಡೆಸಲಾಗಿದೆ.

> ವಿಕ್ಟೋರಿಯಾ ಆಸ್ಪತ್ರೆಯ ಪ್ರಧಾನಮಂತ್ರಿ ಸ್ವಾಸ್ಥ್ಯ ಸುರಕ್ಷಾ ಯೋಜನೆ ಎರಡು-ಮೂರು ವಾರಗಳ ಹಿಂದೆ ಈ ಸಮಸ್ಯೆ ವರದಿಯಾಗಿತ್ತು . ಜಗದೀಶ್ ಬ್ಲಾಕ್‌ನ ವಿಶೇಷ ಅಧಿಕಾರಿ ಹೆಚ್.ಆರ್

ಈಗ ಯಾವುದೇ ರೀತಿಯ ತೊಂದರೆ ಇಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಕೆಲವೊಮ್ಮೆ ರೋಗಿಗಳ ಸಹಾಯಕರು ಹೊರಗಿನಿಂದ ತರುವ ಹೊದಿಕೆಗಳು, ಹಾಸಿಗೆ ಸಾಮಗ್ರಿಗಳು ಹಾಗೂ ವೈಯಕ್ತಿಕ ವಸ್ತುಗಳ ಮೂಲಕ ಇಂತಹ ಕೀಟಗಳು ಆಸ್ಪತ್ರೆ ಆವರಣಕ್ಕೆ ಪ್ರವೇಶಿಸುವ ಸಾಧ್ಯತೆ ಇರುತ್ತದೆ ಎಂದು ವಿವರಿಸಿದ್ದಾರೆ. ಆದಾಗ್ಯೂ, ಸಾಮಾಜಿಕ ಜಾಲತಾಣಗಳಲ್ಲಿ ವಿಡಿಯೊ ವೈರಲ್ ಆಗಿರುವ ಹಿನ್ನೆಲೆಯಲ್ಲಿ ವಿಕ್ಟೋರಿಯಾ ಆಸ್ಪತ್ರೆಯ ಸ್ವಚ್ಛತೆ ಮತ್ತು ಕೀಟ ನಿಯಂತ್ರಣ ವ್ಯವಸ್ಥೆಗಳ ಬಗ್ಗೆ ಸಾರ್ವಜನಿಕ ವಲಯದಲ್ಲಿ ಚರ್ಚೆ ಆರಂಭವಾಗಿದೆ.

# ಡಿಕೆಶಿ ಸಿಎಂ ಆಗುತ್ತಿರುವುದು ಜಿಲ್ಲೆಗೆ ಸಿಕ್ಕ ದೊಡ್ಡ ಗೌರವ

• ಉದಯವಾಹಿನಿ, ರಾಮನಗರ

ಡಿ.ಕೆ.ಶಿವಕುಮಾರ್ ಅವರು ರಾಜ್ಯದ ಮುಖ್ಯಮಂತ್ರಿಗಳಾಗುತ್ತಿರುವುದು ಜಿಲ್ಲೆಗೆ ಸಿಕ್ಕಿರುವ ದೊಡ್ಡ ಗೌರವವಾಗಿದ್ದು, ಕಳೆದ ಮೂರು ವರ್ಷಗಳಿಂದ ಸಿದ್ಧರಾಮಯ್ಯ ಅವರು ಮಾಡಿರುವ ಅಭಿವೃದ್ಧಿ ಕಾರ್ಯಗಳನ್ನು ಡಿಕೆಶಿ ಅವರು ಪರಿಪೂರ್ಣವಾಗಿ ಮುಂದುವರೆಸಿಕೊಂಡು ಹೋಗಲಿದ್ದಾರೆ ಎಂದು ಶಾಸಕ ಇಕ್ಬಾಲ್ ಹುಸೇನ್ ಹೇಳಿದರು.

ನಗರದ ಶಾಸಕರ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ತಮ್ಮ ರಾಜಕೀಯದ ದಾರಿಯಲ್ಲಿ ಹಿಂದುಳಿದವರು, ದೀನ ದಲಿತರ ಹೇಳಿಗೆಗಾಗಿ ಶ್ರಮಿಸುತ್ತಿರುವ ಡಿಕೆಶಿ ಅವರು, ರಾಜಕೀಯಕ್ಕೆ ಕಾಲಿಟ್ಟಾಗಿನಿಂದಲೂ ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಕಾರ್ಯಕರ್ತರಾಗಿ ದುಡಿದಿರುವ ಅವರಿಗೆ




ಸಿಎಂ ಹುದ್ದೆ ಸಿಕ್ಕಿರುವುದು ದೊಡ್ಡ ಗೌರವದ ಸಂಕೇತ ಎಂದು ಹರ್ಷ ವ್ಯಕ್ತಪಡಿಸಿದರು.ಕಳೆದ ಮೂರು ವರ್ಷಗಳಿಂದೀಚೆಗೆ ನಡೆಯುತ್ತಿರುವ ಅಭಿವೃದ್ಧಿ ಕಾರ್ಯಗಳಿಗೆ ಮುಂದಿನ ಎರಡು ವರ್ಷಗಳಲ್ಲಿ ಮತ್ತಷ್ಟು ವೇಗ ದೊರೆಯಲಿದೆ.

ರಾಮನಗರ ಪಟ್ಟಣಕ್ಕೆ ಸಮೃದ್ಧವಾಗಿ ಕುಡಿಯುವ ನೀರು, 300 ಎಕರೆ ಪ್ರದೇಶದಲ್ಲಿ ಬಡವರಿಗೆ ಸೂರು ಕಲ್ಪಸಲು ಈಗಾಲೆ ಸ್ಥಳ ಗುರುತಿಸಲಾಗಿದೆ, ಹಳ್ಳಿಯ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಕಲ್ಪಿಸಲು ಕೆಪಿಎಸ್ ಶಾಲೆಗಳನ್ನು ಪ್ರಾರಂಭಿಸಲಾಗಿದೆ.

ನಗರ ಪ್ರದೇಶಕ್ಕೆ ಮಂಚನಬೆಲೆಯಿಂದ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿದ್ದು, ಕಸಬಾ, ಕೈಲಾಂಚ ಹೋಬಳಿಗೆ 290 ಕೋಟಿ ವೆಚ್ಚದಲ್ಲಿ ಕುಡಿಯುವ ನೀರು ಕಾಮಗಾರಿ ಪ್ರಗತಿಯಲ್ಲಿದೆ, ಕ್ಷೇತ್ರದಾತ್ಯಂತ ಏತ ನೀರಾವರಿ ಹಾಗೂ ಕೆರೆ ತುಂಬಿಸುವ ಯೋಜನೆಗಳನ್ನು ಕೈಗೆತ್ತಿಕೊಳ್ಳಲಾಗಿದೆ ಎಂದರು.

ಮುಂದಿನ ಎರಡು ವರ್ಷಗಳಲ್ಲಿ ಸಾಗುವಳಿ, ಬಗರ್ ಹುಕುಂ ಸಾಗುವಳಿ ಚೀಟಿಯನ್ನು ನೀಡುವ ಕೆಲಸಕ್ಕೆ ಮತ್ತಷ್ಟು ವೇಗ ನೀಡಲಾಗುವುದು, ನೆಲೆ, ಸೂರು, ಆರೋಗ್ಯ, ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡಲಾಗುತ್ತಿದೆ. ಪ್ರಾಧಿಕಾರದಿಂದ ಎರಡು ಸಾವಿರ ಜನಕ್ಕೆ ನಿವೇಶನ ವಿತರಣೆ ಮಾಡಲಾಗುತ್ತಿದೆ.

ಹಲವು ವರ್ಷಗಳ ಹಿಂದೆ ನೀಡಿದ್ದ ಹಣಕ್ಕೆ ನಿವೇಶನ ನೀಡಲಾಗುತ್ತಿದೆ ಎಂದರು.

ಪ್ರಾಧಿಕಾರದ ಅಧ್ಯಕ್ಷ ಚೇತನ್ ಕುಮಾರ್, ಗ್ರಾಪಂ ಮಾಜಿ ಅಧ್ಯಕ್ಷ ಸ್ವಾಮಿ, ಮಹೇಶ್, ನಗರಸಭೆ ಮಾಜಿ ಅಧ್ಯಕ್ಷ ರವಿ, ಜಯ ಕರ್ನಾಟಕ ರವಿ, ಮುಖಂಡರಾದ ಗುರುರಾಜ್, ಗುಡ್ಡೆ ವೆಂಕಟೇಶ್ ಮತ್ತಿತರರು ಇದ್ದರು.

# ಕೇಂದ್ರ ಮತ್ತು ರಾಜ್ಯ ಸರ್ಕಾರ ಒಂದೇ ನಾಣ್ಯದ ಎರಡು ಮುಖಗಳಿದ್ದಂತೆ

**ಕೇಂದ್ರ ಸರ್ಕಾರ ಮಹತ್ವದ ಲಸಿಕೆ ಅಭಿಯಾನ ಇಂದು ಆರಂಭಿಸಿದೆ. ಆದರೆ ಈ ವ್ಯಾಕ್ಸಿನ್ ಬಗ್ಗೆ ಯಾರಿಗೂ ಮಾಹಿತಿಯಾಗಲಿ, ಪ್ರಚಾರವಾಗಲಿ ಮಾಡಿಲ್ಲ. 16900 ವ್ಯಾಕ್ಸಿನ್ ಜಿಲ್ಲೆಗೆ ಬಂದಿ ದ್ದರೂ ಹೆಣ್ಣು ಮಕ್ಕಳ ಆರೋಗ್ಯ ಬಗ್ಗೆ ಇಲಾಖೆಯು ನಿರಾಸಕ್ತಿ ತೋರಿರುವುದು ಬೇಸರ ತಂದಿದೆ.**

• ಉದಯವಾಹಿನಿ, ಗುಬ್ಬಿ

ಅಭಿವೃದ್ಧಿ ವಿಚಾರದಲ್ಲಿ ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರ ಒಂದೇ ನಾಣ್ಯದ ಎರಡು ಮುಖಗಳಂತೆ ಕೆಲಸ ಮಾಡಬೇಕು. ಸಾಮರಸ್ಯತೆ ಇಲ್ಲವಾದಲ್ಲಿ ಜನಪರ ಕೆಲಸಗಳು ನಡೆಯುವುದಿಲ್ಲ ಎಂದು ಕೇಂದ್ರದ ರೈಲ್ವೆ ಸಚಿವ ವಿ.ಸೋಮಣ್ಣ ತಿಳಿಸಿದರು.

ತಾಲ್ಲೂಕಿನ ಕಸಬ ಹೋಬಳಿ ಕಳ್ಳಿಪಾಳ್ಯ ಗೇಟ್ ಬಳಿಯ ರೈಲ್ವೇ ಕೆಳ ಸೇತುವೆಗೆ ಗುದ್ದಲಿ ಪೂಜೆ ನೆರವೇರಿಸಿ ಮಾತನಾಡಿ, ಕೇಂದ್ರ ಸರ್ಕಾರ ಮಹತ್ವದ ಲಸಿಕೆ ಅಭಿಯಾನ ಇಂದು ಆರಂಭಿಸಿದೆ. ಆದರೆ ಈ ವ್ಯಾಕ್ಸಿನ್ ಬಗ್ಗೆ ಯಾರಿಗೂ ಮಾಹಿತಿಯಾಗಲಿ, ಪ್ರಚಾರವಾಗಲಿ ಮಾಡಿಲ್ಲ. 16900 ವ್ಯಾಕ್ಸಿನ್ ಜಿಲ್ಲೆಗೆ ಬಂದಿದ್ದರೂ ಹೆಣ್ಣು ಮಕ್ಕಳ ಆರೋಗ್ಯ ಬಗ್ಗೆ ಇಲಾಖೆಯು ನಿರಾಸಕ್ತಿ ತೋರಿರುವುದು ಬೇಸರ ತಂದಿದೆ.

ಈ ನಡವಳಿಕೆಯು ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಸ್ವಾಮ್ಯತೆ ಬಗ್ಗೆ ತಿಳಿಸುತ್ತದೆ. ಎರಡೂ ಸರ್ಕಾರ ಒಗ್ಗೂಡಿ ಮಾಡ ಬೇಕಾದ ಅಭಿಯಾನ ಜನರಿಗೆ ತಲುಪಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

14 ವರ್ಷದಿಂದ ಮೇಲ್ಪಟ್ಟ ಹೆಣ್ಣು ಮಕ್ಕಳಲ್ಲಿ ಕಾಣಿಸಿಕೊಳ್ಳುವ ಮಾರಕ ಕ್ಯಾನ್ಸರ್ ತಡೆಯಲು ಕೇಂದ್ರ ಸರ್ಕಾರ ಈ ಲಸಿಕೆಯನ್ನು ನೀಡಲು ಮಕ್ಕಳನ್ನು ಗುರುತಿಸಿ ರಾಜ್ಯದ 6 ಲಕ್ಷ ಜಿಲ್ಲೆಯ 25 ಸಾವಿರ ಮಕ್ಕಳಿಗೆ ನೀಡಬೇಕಾದ ಲಸಿಕೆಗೆ ಜಿಲ್ಲೆಯಲ್ಲಿ 15900 ವ್ಯಾಕ್ಸಿನ್ ನಲ್ಲಿ ಕೇವಲ ಆರು ಸಾವಿರ ಮಾತ್ರ ನೀಡಿದ್ದಾರೆ. ಅದೂ ಕೂಡ ಸರಿಯಾದ ಮಾಹಿತಿ ಇಲ್ಲ. ಆರೋಗ್ಯ ಇಲಾಖೆ ಬಗ್ಗೆ ಏನೂ ಹೇಳುವುದು ಎಂದು ಬೇಸರ ವ್ಯಕ್ತಪಡಿಸಿದ ಅವರು ರೈಲ್ವೆ ಇಲಾಖೆಯ ಕೆಲಸಗಳು ತ್ವರಿತವಾಗಿ ನಡೆಸಲಾಗಿದೆ. ಈಗಾಗಲೇ 2 ಸಾವಿರ ಕೋಟಿ ಕೆಲಸ ಪ್ರಗತಿಯಲ್ಲಿದೆ. ಈ ಪೈಕಿ ಗುಬ್ಬಿ ತಾಲ್ಲೂಕಿನಲ್ಲಿ 10 ಕೆಳ ಸೇತುವೆ ಕಾಮಗಾರಿ ಪ್ರಗತಿಯಲ್ಲಿದೆ ಎಂದರು. ಬೆಂಗಳೂರು ನಗರದಲ್ಲಿ ರೈಲ್ವೆ ಪ್ರಯಾಣ ಬಳಕೆದಾರರ ಸಂಖ್ಯೆ 30 ಲಕ್ಷಕ್ಕೂ ಅಧಿಕವಿದೆ.

ದೇಶದಲ್ಲಿ 3 ಕೋಟಿಗೂ ಅಧಿಕವಿದೆ. ಈ ನಿಟ್ಟಿನಲ್ಲಿ ಲಾಭದಾಯಕ ರೈಲ್ವೆ ಇಲಾಖೆಯನ್ನು ಬೆಳೆಸಲು ಪ್ರಧಾನಿಗಳು ಸಾಕಷ್ಟು ಅನುದಾನ ನೀಡುತ್ತಿದ್ದಾರೆ. ರಾಯದುರ್ಗದಿಂದ ಪಾವಗಡ ಎರಡು ತಿಂಗಳಲ್ಲಿ ಕೆಲಸ ಪೂರ್ಣ ಆಗಲಿದೆ. ಪಾವಗಡದಿಂದ ಮಡಕಶಿರಾ ಇನ್ನೆರಡು ತಿಂಗಳು, ನಂತರದಲ್ಲಿ ಕೊರಟಗೆರೆ ಹೀಗೆ ಕೆಲಸ ಪೂರ್ಣಗೊಳ್ಳಲಿದೆ.

ತುಮಕೂರು ದಾವಣಗೆರೆ ಮಾರ್ಗ ಬಹುತೇಕ ಸಂಪೂರ್ಣವಾಗಿದೆ ಎಂದ ಅವರು ತುಮಕೂರು ಬಳಿ ರೈಲ್ವೆ ಟರ್ಮಿನಲ್ ಕಾಮಗಾರಿ 4 ಸಾವಿರ ಕೋಟಿ ಹಣದಲ್ಲಿ ನಡೆದಿದೆ. 5 ಸಾವಿರ ಉದ್ಯೋಗ ಸೃಷ್ಟಿಸಿ ಲಕ್ಷಾಂತರ ಜನರ ಬದುಕಿಗೆ ಆಧರವಾಗಲಿದೆ. ಈ ಜೊತೆಗೆ ವಸಂತನರಸಾಪುರ ಕೈಗಾರಿಕಾ ವಲಯದಲ್ಲಿ 200 ಹಾಸಿಗೆಯ ಆಸ್ಪತ್ರೆ ಹಾಗೂ 20 ಕೋಟಿ ವೆಚ್ಚದ ಮಹಿಳಾ ಹಾಸ್ಟೆಲ್ ನಿರ್ಮಾಣ ಆಗಲಿದೆ ಎಂದರು.




**ಕ್ರಿಯಾಶೀಲ ಸಂಸದರಾಗಿ ಸೋಮಣ್ಣ ಅವರು ಕೋಟಿಗಟ್ಟಲೆ ಅನುದಾನ ತಂದು ಜಿಲ್ಲೆಯ ಅಭಿವೃದ್ಧಿ ಮಾಡುತ್ತಿದ್ದಾರೆ. ಲೋಕಸಭಾ ಸದಸ್ಯರು ಈ ಮಟ್ಟದ ಕೆಲಸ ಮಾಡಲು ಸಾಧ್ಯ ಎಂಬುದು ಈ ವರ್ಷದಲ್ಲಿ ನೋಡಿದ್ದೇವೆ. ರೈಲ್ವೆ ಗೇಟ್ ಗಳ ತೆರವು ಮಾಡಿ ಮೇಲ್ಸೇತುವೆ ಹಾಗೂ ಕೆಳಸೇತುವೆ ನಿರ್ಮಾಣ ಮಾಡಿ ದ್ದಾರೆ. ಜೊತೆಗೆ 90 ಕೋಟಿ ರೂಗಳ ರಸ್ತೆ ಕೆಲಸಗಳನ್ನು ಸಹ ಮಾಡಿಸುತ್ತಿದ್ದಾರೆ. ಈ ಜತೆಗೆ ಅಂತರ್ಜಲ ವೃದ್ಧಿಗೆ ವ್ಯಾಲಿಗಳಿಗೆ ಚೆಕ್ ಡ್ಯಾಂ ನಿರ್ಮಾಣ ಮಾಡಲು ಅನುದಾನ ನೀಡು ವಂತೆ ಮನವಿ ಮಾಡಿ, ಅತಿ ಹೆಚ್ಚು ಕರೆಂಟ್ ಬಳಕೆಯ ನಮ್ಮ ತಾಲ್ಲೂಕು ಹೆಚ್ಚು ಕೊಳವೆ ಬಾವಿ ಹೊಂದಿದೆ. ಈ ನಿಟ್ಟಿನಲ್ಲಿ ಅಂತರ್ಜಲ ವೃದ್ಧಿ ಅತ್ಯವಶ್ಯವಿದೆ.**


ಎಸ್.ಆರ್.ಶ್ರೀನಿವಾಸ್ ಶಾಸಕ

ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ರವಿ ಹೆಬ್ಬಾಕ, ದಿಶಾ ಸಮಿತಿ ಸದಸ್ಯ ಹುಚ್ಚಯ್ಯ, ಮುಖಂಡರಾದ ಎಸ್.ಡಿ.ದಿಲೀಪ್ ಕುಮಾರ್, ಬಿ.ಎಸ್.ನಾಗರಾಜು, ಕಳ್ಳಿಪಾಳ್ಯ ಲೋಕೇಶ್, ಪಿ.ಬಿ.ಚಂದ್ರಶೇಖರಬಾಬು, ಎನ್.ಸಿ.ಪ್ರಕಾಶ್, ಜಿ.ಎನ್.ಬೆಟ್ಟಸ್ವಾಮಿ, ಹೊನ್ನಗಿರಿಗೌಡ, ಯೋಗಾನಂದಕುಮಾರ್, ಸಿದ್ದಗಂಗಮ್ಮ, ಬೆಣಚಿಗೆರೆ ರುದ್ರೇಶ್, ಭೈರಪ್ಪ, ಜಿ.ಆರ್.ಶಿವಕುಮಾರ್, ಪಂಚಾಕ್ಷರಿ, ಬಲರಾಮಯ್ಯ, ಚಿಕ್ಕವೀರಯ್ಯ, ರೈಲ್ವೇ ಇಲಾಖೆಯ ವಿಭಾಗೀಯ ವ್ಯವಸ್ಥಾಪಕ ಪ್ರವೀಣ್ ಕಾತರಕಿ ಇನ್ನಿತರರು ಇದ್ದರು.

# ಮಗನ ಸನಾತನ ವಿವಾದದ ಬೆನ್ನಲ್ಲೇ ನಿಮಿಷಾಂಬಾ ದೇಗುಲದಲ್ಲಿ ದುರ್ಗಾ ಸ್ಟಾಲಿನ್ ವಿಶೇಷ ಪೂಜೆ

• ಉದಯವಾಹಿನಿ, ಮಂಡ್ಯ

ತಮಿಳುನಾಡಿನ ಮಾಜಿ ಮುಖ್ಯಮಂತ್ರಿ ಎಂ.ಕೆ. ಸ್ಟಾಲಿನ್ ಅವರ ಪತ್ನಿ ದುರ್ಗಾ ಸ್ಟಾಲಿನ್ ಅವರು ನಿನ್ನೆ ಮಂಡ್ಯ ಜಿಲ್ಲೆಯ ಪ್ರಸಿದ್ಧ ಧಾರ್ಮಿಕ ಕ್ಷೇತ್ರಕ್ಕೆ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿದ್ದಾರೆ. ಶ್ರೀರಂಗಪಟ್ಟಣ ತಾಲ್ಲೂಕಿನ ಗಂಜಾಂನಲ್ಲಿರುವ ಐತಿಹಾಸಿಕ ಶ್ರೀ ನಿಮಿಷಾಂಬಾದೇವಸ್ಥಾನಕ್ಕೆ ಕುಟುಂಬಸ್ಥರೊಂದಿಗೆ ಭೇಟಿ ನೀಡಿದ ಅವರು, ಶಕ್ತಿ ದೇವತೆಯ ಆಶೀರ್ವಾದ ಪಡೆದರು. ಮೈಸೂರು ಭಾಗದ ಪ್ರಭಾವಿ ನಾಯಕ, ಶಾಸಕ ಜಿ.ಟಿ. ದೇವೇಗೌಡ ಅವರ ಪುತ್ರಿ ಹಾಗೂ




ಅಳಿಯನೊಂದಿಗೆ ದೇಗುಲಕ್ಕೆ ಆಗಮಿಸಿದ ದುರ್ಗಾ ಸ್ಟಾಲಿನ್ ದೇವಿಗೆ ವಿಶೇಷ ಕಾಣಿಕೆಗಳನ್ನು ಸಮರ್ಪಿಸಿದರು.

ಹುಣ್ಣಿಮೆಯ ಹಿನ್ನೆಲೆಯಲ್ಲಿ ರೇಷ್ಮೆ ಸೀರೆ, ಗಾಜಿನ ಬಳೆಗಳು ಹಾಗೂ ಹೂ-ಹಣ್ಣು, ಕಾಯಿಗಳ ಮೂಲಕ ದೇವಿಯ ಮಡಿಲು ತುಂಬಿಸಿ ಶ್ರದ್ಧಾಭಕ್ತಿಯಿಂದ 'ಉಡಿಸೇವೆ' ನೆರವೇರಿಸಿದರು.

ಸುಮಾರು 30 ನಿಮಿಷಗಳ ಕಾಲ ದೇವಸ್ಥಾನದಲ್ಲೇ ತಂಗಿದ್ದ ಅವರು, ದೇವಿಯ ಸಾಂಪ್ರದಾಯಿಕ ಪೂಜಾ ಕೈಂಕರ್ಯಗಳಲ್ಲಿ ಭಾಗಿಯಾದರು. ಇದೇ ವೇಳೆ ಶ್ರೀ ಅಂಜನೇಯಸ್ವಾಮಿಗೂ ಪೂಜೆ ಸಲ್ಲಿಸಿದ ಅವರು, ದೇಗುಲದ ಪ್ರಾಂಗಣದಲ್ಲಿ ಕುಳಿತು ಕೆಲಕಾಲ ಧ್ಯಾನಿಸಿದರು. ದೇವಾಲಯದ ಪ್ರಧಾನ ಅರ್ಚಕರಾದ ಸೂರ್ಯನಾರಾಯಣ ಭಟ್ ಅವರು ದೇವಿಗೆ ಕುಂಕುಮಾರ್ಚನೆ, ದುರ್ಗಾ ಸಪ್ತಶತಿ ಪಾರಾಯಣದೊಂದಿಗೆ ಮಹಾ ಮಂಗಳಾರತಿ ನೆರವೇರಿಸಿ, ಬಳಿಕ ತೀರ್ಥ ಪ್ರಸಾದ ವಿತರಿಸಿದರು.

ದುರ್ಗಾ ಸ್ಟಾಲಿನ್ ಅವರ ಪುತ್ರ ಉದಯನಿಧಿ ಸ್ಟಾಲಿನ್ ಅವರು ಈ ಹಿಂದೆ ಸನಾತನ ಧರ್ಮವನ್ನು ಸೊಳ್ಳೆ, ಮಲೇರಿಯಾದಂತೆ ನಿರ್ಮೂಲನೆ ಮಾಡಬೇಕು ಎಂದು ಹೇಳಿಕೆ ನೀಡಿ ದೇಶಾದ್ಯಂತ ತೀವ್ರ ವಿವಾದ ಹಾಗೂ ಆಕ್ರೋಶಕ್ಕೆ ಕಾರಣವಾಗಿದ್ದರು.

## ಮನೆ ಪಕ್ಕ ಬೆಳೆದಿದ್ದ ತರಕಾರಿ ಗಿಡಗಳನ್ನ ದನ ಬಿಟ್ಟು ಮೇಯಿಸಿದ್ದಕ್ಕೆ ಗಲಾಟೆ ಕೊಲೆಯಲ್ಲಿ ಅಂತ್ಯ

• ಉದಯವಾಹಿನಿ, ರಾಮನಗರ

ಮನೆ ಪಕ್ಕ ಬೆಳೆದಿದ್ದ ತರಕಾರಿ ಗಿಡಗಳನ್ನ ದನ ಬಿಟ್ಟು ಮೇಯಿಸಿದ್ದಕ್ಕೆ ಗಲಾಟೆ ನಡೆದು ಮಹಿಳೆ ಮೇಲೆ ಹಲ್ಲೆನಡಿಸಿದ್ದ ಹಿನ್ನೆಲೆ ಗಾಯಗೊಂಡು ಚಿಕಿತ್ಸೆ ಪಡೆಯುತ್ತಿದ್ದ ಮಹಿಳೆ ಆಸ್ಪತ್ರೆಯಲ್ಲಿ ಸಾವನ್ನಪ್ಪಿರುವ ಘಟನೆ ರಾಮನಗರ ಟೌನ್ ವ್ಯಾಪ್ತಿಯ ಬಾಲಗೇರಿಯಲ್ಲಿ ನಡೆದಿದೆ.

ಜಯಮ್ಮ (55) ಮೃತ ಮಹಿಳೆ. ಪಕ್ಕದ ಮನೆಯ ಶ್ರೀನಿವಾಸ್ ಎಂಬಾತನಿಂದ ಹಲ್ಲೆ ಆರೋಪ. ಜಯಮ್ಮ ಮತ್ತು ಶ್ರೀನಿವಾಸ್ ಅಕ್ಕಪಕ್ಕದ ನಿವಾಸಿಗಳು. ಮನೆ ಪಕ್ಕ ಜಯಮ್ಮ ಬೆಳೆದಿದ್ದ ಗಿಡಗಳನ್ನ ಶ್ರೀನಿವಾಸ್‌ಗೆ ಸೇರಿದ ಹಸು ಮೇಯ್ದಿತ್ತು ಎಂಬ ವಿಚಾರಕ್ಕೆ ಎರಡೂ ಕುಟುಂಬಗಳಿಗೂ ಗಲಾಟೆ ನಡೆದಿತ್ತು. ಗಲಾಟೆ ವೇಳೆ ಶ್ರೀನಿವಾಸ್ ಜಯಮ್ಮಗೆ ಕಪಾಳಕ್ಕೆ ಹೊಡೆದಿದ್ದ. ಈ ವೇಳೆ ಪ್ರಜ್ಞೆ ತಪ್ಪಿ ಬಿದ್ದಿದ್ದ ಜಯಮ್ಮರನ್ನ ಕುಟುಂಬಸ್ಥರು ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸಿದ್ದರು.

## ವರ್ಷಾಂತ್ಯಕ್ಕೆ ತಾಲ್ಲೂಕಿನ 105 ಕೆರೆಗಳಿಗೆ ಎತ್ತಿನಹೊಳೆ ನೀರು: ಶಾಸಕ ಷಡಕ್ಷರಿ

• ಉದಯವಾಹಿನಿ, ಮಡಿಕೇರಿ

ಕೊಡಗು ಜಿಲ್ಲೆಯ ಮೂಲಕ ಹಾದುಹೋಗುವ ರೈಲು ಮಾರ್ಗಕ್ಕೆ ಸಂಬಂಧಿಸಿದಂತೆ ಪ್ರಸ್ತುತ ರೈಲ್ವೆ ಸಚಿವಾಲಯದ ಮುಂದೆ ಯಾವುದೇ ಪ್ರಸ್ತಾವನೆ ಇಲ್ಲ ಎಂದು ಸಂಸದ ಯದುವೀರ್ ಒಡೆಯರ್ ಸ್ಪಷ್ಟಪಡಿಸಿದ್ದಾರೆ.

ಕೇಂದ್ರ ರೈಲ್ವೆ ಸಚಿವರಾದ ಅಶ್ವಿನಿ ವೈಷ್ಣವ್ ಅವರನ್ನು ಭೇಟಿ ಮಾಡಿದ ಬಳಿಕ ಈ ಕುರಿತು ಯದುವೀರ್ ಸ್ಪಷ್ಟನೆ ನೀಡಿದ್ದಾರೆ. ಭೇಟಿ ಸಂದರ್ಭದಲ್ಲಿ ಮೈಸೂರು-ಕೊಡಗು ಲೋಕಸಭಾ ಕ್ಷೇತ್ರಕ್ಕೆ ಸಂಬಂಧಿಸಿದ ವಿವಿಧ ರೈಲ್ವೆ ಮೂಲಸೌಕರ್ಯ ಮತ್ತು ಸಂಪರ್ಕ ವ್ಯವಸ್ಥೆಗಳ ಕುರಿತು ಚರ್ಚೆ ನಡೆಸಿದ್ದಾರೆ. ವರದಿಗಳು ಮತ್ತು ಚರ್ಚೆಗಳು ಕೊಡಗಿನ ಮೂಲಕ ರೈಲು ಮಾರ್ಗ ಹಾದುಹೋಗುವ




ಸಾಧ್ಯತೆಯ ಬಗ್ಗೆ ಸಾರ್ವಜನಿಕರ ಒಂದು ವಲಯದಲ್ಲಿ ಆತಂಕವನ್ನು ಉಂಟುಮಾಡಿವೆ ಎಂದು ಯದುವೀರ್ ತಿಳಿಸಿದ್ದಾರೆ. ಹಿತಾಸಕ್ತಿಪಕ್ಷಗಳೊಂದಿಗೆ ಸಮಾಲೋಚನೆ ನಡೆಸಲಾಗುವುದು ಜಿಲ್ಲೆಯ ಪರಿಸರ, ಪರಿಸ್ಥಿತಿ ಮತ್ತು ಅಭಿವೃದ್ಧಿ ಸಂಬಂಧಿತ ಹಿತಾಸಕ್ತಿಗಳನ್ನು ಪರಿಗಣಿಸಲಾಗುವುದು ಎಂದು ಸಂಸದರು ಒತ್ತಿಹೇಳಿದ್ದಾರೆ. ಕೊಡಗಿನ ಸಮತೋಲಿತ ಅಭಿವೃದ್ಧಿಯನ್ನು ಖಚಿತಪಡಿಸುವುದರ ಜೊತೆಗೆ ಅದರ ವಿಶಿಷ್ಟ ಪರಿಸರ ಮತ್ತು ಸಾಂಸ್ಕೃತಿಕ ಪರಂಪರೆಯನ್ನು ಸಂರಕ್ಷಿಸುವ ತನ್ನ ಬದ್ಧತೆಯನ್ನು ಯದುವೀರ್ ಪುನರುಚ್ಚರಿಸಿದರು.

### ನಾಗರಿಕರಿಗೆ ಭರವಸೆ

**ಪ್ರದೇಶದ ಹಿತಕ್ಕಾಗಿ ಉತ್ತಮ ಸಂಪರ್ಕ ಮತ್ತು ಮೂಲಸೌಕರ್ಯ ಅಭಿವೃದ್ಧಿಗೆ ಸಂಬಂಧಿಸಿದ ವಿಷಯಗಳಲ್ಲಿ ರೈಲ್ವೆ ಸಚಿವಾಲಯದೊಂದಿಗೆ ನಿರಂತರವಾಗಿ ಸಂಪರ್ಕದಲ್ಲಿರುವುದಾಗಿ ನಾಗರಿಕರಿಗೆ ಭರವಸೆ ನೀಡಿದರು. ಊಹಾಪೋಹಗಳ ಆಧಾರದ ಮೇಲಿನ ವರದಿಗಳಿಂದ ಸಾರ್ವಜನಿಕರು ದಾರಿ ತಪ್ಪಬಾರದು ಹಾಗೂ ಈ ವಿಷಯಕ್ಕೆ ಸಂಬಂಧಿಸಿದ ಯಾವುದೇ ಅಧಿಕೃತ ಬೆಳವಣಿಗೆಯನ್ನು ಸೂಕ್ತ ಮಾರ್ಗಗಳ ಮೂಲಕ ಪಾರದರ್ಶಕವಾಗಿ ತಿಳಿಸಲಾಗುವುದು ಎಂದು ಭರವಸೆ ನೀಡಿದರು.**

# ಮೈಸೂರಿನಲ್ಲಿ ಸಂಭ್ರಮದ ವಿಶ್ವ ಹಾಲು ದಿನಾಚರಣೆ

**ಏಳು ಸಾರೋಟಗಳಲ್ಲಿ ನಂದಿನ ಉತ್ಪನ್ನದ ಭಿತ್ತಿ ಪತ್ರದ ಮೂಲಕ ಹಾಲಿನ ಮಹತ್ವಗಳ ಕುರಿತು ಅರಿವು**

• ಉದಯವಾಹಿನಿ , ಮೈಸೂರು

ವಿಶ್ವ ಹಾಲು ದಿನದ ಅಂಗವಾಗಿ ಮೈಮುಲ್‌ನಿಂದ ರೈತ ಮಹಿಳೆಯರ ಶಕ್ತಿಯ ಸಂಭ್ರಮಾಚರಣೆ ಶೀರ್ಷಿಕೆಯಲ್ಲಿ ಸಾರೋಟು ಮೆರವಣಿಗೆ ನಡೆಸಲಾಯಿತು. ಆಲನಹಳ್ಳಿ ಬಡಾವಣೆಯಲ್ಲಿರುವ ಮೈಸೂರು ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ನಿಯಮಿತ ಕಚೇರಿಯಿಂದ ಆಯೋಜಿಸಿದ್ದ ಮೆರವಣಿಗೆಗೆ ಒಕ್ಕೂಟದ ಆಡಳಿತಾಧಿಕಾರಿ ಸಿ.ಪ್ರಸಾದ್ ರೆಡ್ಡಿ ಚಾಲನೆ ನೀಡಿದರು. ನಂದಿನಿ ಡೇರಿಯಿಂದ ಬನ್ನೂರು ಮುಖ್ಯರಸ್ತೆ ಮಾರ್ಗವಾಗಿ ಟೆರಿಶಿಯನ್ ಕಾಲೇಜು




ವೃತ್ತ, ಜಿಲ್ಲಾಧಿಕಾರಿ ಕಚೇರಿ ರಸ್ತೆ, ನಜರಬಾದ್ ಪೊಲೀಸ್ ಠಾಣೆ ಮಾರ್ಗವಾಗಿ ಕುಪ್ಪಣ್ಣ ಪಾರ್ಕ್‌ನಲ್ಲಿ ಮೆರವಣಿಗೆ ಅಂತ್ಯಗೊಂಡಿತು.

ಏಳು ಸಾರೋಟಗಳಲ್ಲಿ ನಂದಿನ ಉತ್ಪನ್ನದ ಭಿತ್ತಿ ಪತ್ರದ ಮೂಲಕ ಹಾಲಿನ ಮಹತ್ವಗಳ ಕುರಿತು ಅರಿವು ಮೂಡಿಸಲಾಯಿತು. ಅಲ್ಲದೆ, ಮೈಮುಲ್‌ನ ಸಾವಿರಾರು ಮಂದಿ ಬೈಕ್‌ನಲ್ಲಿ ಮೆರವಣಿಗೆ ನಡೆಸಿ ಅರಿವು ಮೂಡಿಸುವ ಪ್ರಯತ್ನ ನಡೆಸಿದರು. ಈ ವೇಳೆ ಆಡಳಿತಾಧಿಕಾರಿ ಸಿ.ಪ್ರಸಾದ್ ರೆಡ್ಡಿ ಮಾತನಾಡಿ, 2001ರಿಂದ ವಿಶ್ವಸಂಸ್ಥೆಯಿಂದ ವಿಶ್ವದಾದ್ಯಂತ ವಿಶ್ವ ಹಾಲು ದಿನ ಆಚರಿಸಲಾಗುತ್ತಿದೆ. ಇಂದು ಆರೋಗ್ಯ ಅತಿಮುಖ್ಯವಾಗಿದೆ. ಆರೋಗ್ಯವಾಗಿರಲು ಪೌಷ್ಟಿಕಾಂಶ ಬಹುಮುಖ್ಯ. ಅಂತಹ ಪೌಷ್ಟಿಕಾಂಶ ಸಿಗಲು ಹಾಲು ಅವಶ್ಯಕ. ಆರೋಗ್ಯವಾಗಿದ್ದಾಗ ಮಾತ್ರ ಆರ್ಥಿಕವಾಗಿ ಅಭಿವೃದ್ಧಿ ಹೊಂದಲು ಸಹಕಾರಿಯಾಗುತ್ತದೆ. ಹೀಗಾಗಿ ವಿಶ್ವದಾದ್ಯಂತ ಹಾಲು ದಿನ ಆಚರಿಸಲಾಗುತ್ತಿದೆ. ಪ್ರತಿಯೊಬ್ಬರಲ್ಲೂ ಹಾಲಿನ ಮಹತ್ವದ ಅರಿವು ಮೂಡಿಸುವ ಕೆಲಸ ಮಾಡಲಾಗುತ್ತಿದೆ ಎಂದು ಹೇಳಿದರು. ಮೈಸೂರು ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ನಿಯಮಿತದ ವ್ಯವಸ್ಥಾಪಕ ನಿರ್ದೇಶಕ ಕೆ.ಎನ್.ಸುರೇಶ್ ನಾಯ್ಕ್ ಮಾತನಾಡಿ, ಒಕ್ಕೂಟದ ಹಾಲಿನ ಮಹತ್ವ ಸಾರುವ ದಿನವನ್ನೇ ವಿಶ್ವ ಹಾಲು ದಿನವನ್ನಾಗಿ ಆಚರಿಸಲಾಗುತ್ತಿದೆ.

# ಸರ್ಕಾರಿ ಶಾಲೆಯಲ್ಲೇ ಓದಿದವರು ಉನ್ನತ ಸ್ಥಾನಕ್ಕೆ: ಜಿ.ಟಿ. ದೇವೇಗೌಡ

• ಉದಯವಾಹಿನಿ, ಮೈಸೂರು

ಸರ್ಕಾರಿ ಶಾಲೆಗಳಲ್ಲಿ ವ್ಯಾಸಂಗ ಮಾಡಿದವರೇ ಇಂದು ದೇಶದ ದೊಡ್ಡ ನಾಯಕರಾಗಿ, ಗಣ್ಯ ವ್ಯಕ್ತಿಗಳಾಗಿ ಹೊರಹೊಮ್ಮಿದ್ದಾರೆ. ಲಕ್ಷಾಂತರ ರೂ. ವ್ಯಯಿಸಿ ಖಾಸಗಿ ಶಾಲೆಗಳ ಹಿಂದೆ ಬೀಳುವ ಬದಲು ಪೋಷಕರು ಸರ್ಕಾರಿ ಶಾಲೆಗಳಿಗೆ ಆದ್ಯತೆ ನೀಡಬೇಕು'' ಎಂದು ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ. ದೇವೇಗೌಡ ಕರೆ ನೀಡಿದರು.

ಮೈಸೂರು ತಾಲ್ಲೂಕಿನ ರಟ್ನಹಳ್ಳಿ ಗ್ರಾಮದಲ್ಲಿ ನಡೆದ ತಾಲ್ಲೂಕು ಮಟ್ಟದ ಶಾಲಾ ಪ್ರಾರಂಭೋತ್ಸವ, ಶಾಲಾ ದಾಖಲಾತಿ ಆಂದೋಲನ ಹಾಗೂ ನೂತನ ಕೊಠಡಿಗಳ ಉದ್ಘಾಟನಾ ಸಮಾರಂಭದಲ್ಲಿ ಅವರು ಮಾತನಾಡಿದರು.

ಒಂದು ಕಾಲದಲ್ಲಿ ಸರ್ಕಾರಿ ಶಾಲೆ ಎಂದರೆ ಮೂಗು ಮುರಿಯುತ್ತಿದ್ದರು. ಆದರೆ ಈಗ ಸರ್ಕಾರ ಮೂಲಸೌಕರ್ಯ ಒದಗಿಸಿ ಅಭಿವೃದ್ಧಿಗೆ ಒತ್ತು ನೀಡುತ್ತಿರುವುದರಿಂದ ದಾಖಲಾತಿ ಹೆಚ್ಚುತ್ತಿದೆ. ಡಾ. ಎ.ಪಿ.ಜೆ. ಅಬ್ದುಲ್ ಕಲಾಂ, ಪ್ರಧಾನಿ ನರೇಂದ್ರ ಮೋದಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಅನೇಕ ಮಹನೀಯರು ಸರ್ಕಾರಿ ಶಾಲೆಯಲ್ಲೇ ಕಲಿತವರು. ಸಾಲ ಮಾಡಿ ಖಾಸಗಿ ಶಾಲೆಗೆ ಸೇರಿಸುವ ಬದಲು ಸರ್ಕಾರಿ ಶಾಲೆಗೆ ಕಳುಹಿಸಿ ಎಂದು ಪೋಷಕರಿಗೆ ಕಿವಿಮಾತು ಹೇಳಿದರು.

ಚಾಮುಂಡೇಶ್ವರಿ ಕ್ಷೇತ್ರದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಪ್ರೌಢಶಾಲೆ, ಕಾಲೇಜುಗಳ ಜಾಗ ಒತ್ತುವರಿಯಾಗದಂತೆ ರಕ್ಷಿಸಬೇಕು. ಒತ್ತುವರಿ ತೆರವುಗೊಳಿಸಿ ಸುತ್ತಲೂ ಕಾಂಪೌಂಡ್ ನಿರ್ಮಿಸಿ ಹಕ್ಕುಪತ್ರ ಕೊಡಿಸುವ ಕೆಲಸ ನಡೆಯುತ್ತಿದೆ. ಇದರಿಂದ ಮುಂದಿನ ದಶಕಗಳ ಕಾಲ ಸಮಸ್ಯೆ ಆಗದು. ಹೊಸ ಕೊಠಡಿಗಳಿಗೂ ಜಾಗ ಸಿಗಲಿದೆ ಎಂದರು.




ರಟ್ನಹಳ್ಳಿ ಸೇರಿದಂತೆ ಸುತ್ತಮುತ್ತಲ ಶಾಲೆಗಳ ಜಾಗ ಒತ್ತುವರಿ ತಡೆಯಬೇಕು. ಕ್ಷೇತ್ರದ ಎಲ್ಲಾ ಶಾಲೆಗಳಿಗೂ ಕಾಂಪೌಂಡ್, ಬಾಲಕ-ಬಾಲಕಿಯರಿಗೆ ಹಾಗೂ ವಿಶೇಷಚೇತನರಿಗೆ ಪ್ರತ್ಯೇಕ ಶೌಚಾಲಯ, ಶುದ್ಧ ಕುಡಿಯುವ ನೀರು ಒದಗಿಸಲಾಗುವುದು ಎಂದು ಭರವಸೆ ನೀಡಿದರು. ಶಾಸಕರು ಶುದ್ಧ ಕುಡಿಯುವ ನೀರಿನ ಘಟಕ, ಹೈಟೆಕ್ ಶೌಚಾಲಯ, ಶಾಲಾ ಕಾಂಪೌಂಡ್ ಲೋಕಾರ್ಪಣೆ ಮಾಡಿದರು. ಗ್ರಾಮದ ಮುಖ್ಯರಸ್ತೆಯಿಂದ ಅಲಂಕೃತ ಎತ್ತಿನಗಾಡಿಯಲ್ಲಿ ಮಕ್ಕಳನ್ನು ಮೆರವಣಿಗೆಯಲ್ಲಿ ಕರೆತರಲಾಯಿತು. ಪೋಷಕರು ಪೂರ್ಣಕುಂಭ ಹೊತ್ತರೆ, ಶಿಕ್ಷಕರು ಮಕ್ಕಳನ್ನು ಆರತಿ ಬೆಳಗಿ ಸ್ವಾಗತಿಸಿದರು.

**ಸರ್ಕಾರಿ ಶಾಲಾ ಮಕ್ಕಳ ವಿದ್ಯಾಭ್ಯಾಸಕ್ಕೆ ಪೂರಕ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಪೀಠೋಪಕರಣ, ಶೌಚಾಲಯ, ಕೊಠಡಿ, ಶುದ್ಧ ನೀರು ಒದಗಿಸಲು ಪ್ರತಿಷ್ಠಿತ ಕಂಪನಿಗಳ ಸಿಎಸ್ ಆರ್ ನಿಧಿ ಬಳಸಿಕೊಳ್ಳಲಾಗುತ್ತಿದೆ ಎಂದರು. ಚಾಮುಂಡೇಶ್ವರಿ ಕ್ಷೇತ್ರದ ಕೆಲ ಭಾಗಗಳಲ್ಲಿ ಮಳೆ ಕೊರತೆಯಿಂದ ಅಂತರ್ಜಲ ಕುಸಿದಿದೆ. ಕೆರೆಗಳಿಗೆ ನೀರು ತುಂಬಿಸಿರುವುದರಿಂದ ಬೋರ್‌ವೆಲ್‌ಗಳಲ್ಲಿ ನೀರು ಬರುತ್ತಿದೆ. ಹಳೆಯ ಉಂಡವಾಡಿ ಯೋಜನೆ ಪೂರ್ಣಗೊಂಡರೆ 24 ಗಂಟೆಯೂ ನೀರು ಪೂರೈಕೆಯಾಗಲಿದೆ**

### ನೂತನ ಕೊಠಡಿಗಳ ಉದ್ಘಾಟನಾ ಸಮಾರಂಭ

### ಹಳ್ಳಿಗಳ ಜನರಿಗೆ ಉದ್ಯೋಗ ಸಿಕ್ಕಿದೆ

**ಸಾಯಿ ಗಾರ್ಮೆಂಟ್ಸ್‌ನ ದೇವರಾಜ ಅರಸ್ ಅವರು 50 ಲಕ್ಷ ರೂ. ವೆಚ್ಚದಲ್ಲಿ ರಟ್ನಹಳ್ಳಿ ಶಾಲೆಗೆ ನೂತನ ಕೊಠಡಿ, ಶುದ್ಧ ಕುಡಿಯುವ ನೀರಿನ ಘಟಕ ನಿರ್ಮಿಸಿಕೊಟ್ಟಿದ್ದಾರೆ. ಸರ್ಕಾರ ನೀರಿನ ಘಟಕ ನಿರ್ಮಾಣ ನಿಲ್ಲಿಸಿರುವುದರಿಂದ ಖಾಸಗಿ ಸಂಸ್ಥೆಗಳ ನೆರವು ಪಡೆಯಲಾಗುತ್ತಿದೆ ಎಂದರು.ಸಾಯಿ ಗಾರ್ಮೆಂಟ್ಸ್‌ನಲ್ಲಿ 12,500 ಮಹಿಳೆಯರು, 2,500 ಪುರುಷರು ಕೆಲಸ ಮಾಡುತ್ತಿದ್ದಾರೆ. ಇದರಿಂದ ಕ್ಷೇತ್ರದ ಹಳ್ಳಿಗಳ ಜನರಿಗೆ ಉದ್ಯೋಗ ಸಿಕ್ಕಿದೆ. ರೈತರು ಜಮೀನು ಮಾರದೆ ಉಳಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.**

## ಮಿನಿ ನ್ಯೂಸ್

### ಡಾ.ಜಿ.ಪರಮೇಶ್ವರ್ ಗೆ ಡಿಸಿಎಂ ಹುದ್ದೆಯ ಜೊತೆಗೆ ಪ್ರಬಲ ಖಾತೆ ನೀಡುವಂತೆ ಆಗ್ರಹ



• ಉದಯವಾಹಿನಿ, ಗುಂಡ್ಲುಪೇಟೆ

ಶಾಸಕ ಡಾ.ಜಿ.ಪರಮೇಶ್ವರ್ ಅವರಿಗೆ ನೂತನ ಸಚಿವ ಸಂಪುಟದಲ್ಲಿ ಡಿಸಿಎಂ ಹಾಗೂ ಪ್ರಬಲ ಖಾತೆ ನೀಡುವಂತೆ ಒತ್ತಾಯಿಸಿ ಅಭಿಮಾನಿಗಳು ಪಂಜಿನ ಮೆರವಣಿಗೆ ನಡೆಸಿ ಹೈ ಕಮಾಂಡ್ ನಾಯಕರಿಗೆ ಆಗ್ರಹಿಸಿದರು.

ಜಿ.ಪರಮೇಶ್ವರ್ ಅವರ ಭಾವಚಿತ್ರವನ್ನಿಡಿದು ಪಟ್ಟಣದ ಪ್ರವಾಸಿ ಮಂದಿರದಿಂದ ಪಂಜಿನ ಮೆರವಣಿಗೆ ನಡೆಸಿದ ಅಭಿಮಾನಿಗಳು ಸಿದ್ದರಾಮಯ್ಯ ನೇತೃತ್ವದ ಸಂಪುಟದಲ್ಲಿ ಗೃಹ ಖಾತೆಯನ್ನ ಸಮರ್ಥವಾಗಿ ನಿರ್ವಹಿಸಿರುವ ದಲಿತ ಸಮುದಾಯದ ನಾಯಕ ಪರಮೇಶ್ವರ್ ಅವರಿಗೆ ಡಿಸಿಎಂ ಪಟ್ಟದ ಜತೆಗೆ ಸಂಪುಟದಲ್ಲಿ ಪ್ರಬಲ ಖಾತೆ ನೀಡಬೇಕು ಎಂದು ಒತ್ತಾಯಿಸಿದರು. ಈ ವೇಳೆ ಮಾತನಾಡಿದ ಅಭಿಮಾನಿ ಬಳಗದ ಶಿವರಾಮು ಕರ್ನಾಟಕದಲ್ಲಿ 'ದಲಿತ ಸಿಎಂ' ಕೂಗು ಆಗಾಗ್ಗೆ ರಾಜಕೀಯ ವಲಯದಲ್ಲಿ ಸದ್ದು ಮಾಡುತ್ತಲೇ ಇದೆ. ಇತ್ತೀಚಿನ ರಾಜಕೀಯ ಬೆಳವಣಿಗೆಗಳಲ್ಲಿ ಮುಖ್ಯಮಂತ್ರಿ ಸ್ಥಾನವನ್ನು ದಲಿತರಿಗೆ ನೀಡಬೇಕೆಂದು ಒತ್ತಾಯಿಸಿ ಹಲವು ಹೋರಾಟಗಳು ನಡೆದಿವೆ ಕಾಂಗ್ರೆಸ್ ಸರ್ಕಾರಗಳಲ್ಲಿನ ಆಡಳಿತದಲ್ಲಿ ದಕ್ಷತೆ ಹೊಂದಿರುವ ನಾಯಕರಲ್ಲಿ ಪರಮೇಶ್ವರ್ ಅವರು ಮೇಲ್ಪಂಕ್ತಿಯಲ್ಲಿದ್ದಾರೆ ಹಾಗಾಗಿ ಡಿಸಿಎಂ ಹಾಗೂ ಪ್ರಬಲ ಖಾತೆ ನೀಡಲೇಬೇಕು ಎಂದು ಆಗ್ರಹಿಸಿದರು. ಈ ವೇಳೆ ಅಭಿಮಾನಿ ಬಳಗದ ಸದಸ್ಯರು ಇದ್ದರು.

### ಸರ್ಕಾರಿ ಶಾಲೆಗಳನ್ನು ಉಳಿಸಿಕೊಳ್ಳುವುದು ನಮ್ಮ ಜವಬ್ದಾರಿ

• ಉದಯವಾಹಿನಿ, ಕೆ.ಆರ್.ಪೇಟೆ.

2026-27 ನೇ ಸಾಲಿನ ಶೈಕ್ಷಣಿಕ ವರ್ಷ ಆರಂಭಗೊಂಡಿದ್ದು ತಾಲ್ಲೂಕಿನಾದ್ಯಂತ ಶಿಕ್ಷಕ ಸಮುದಾಯ ಸಡಗರ ಸಂಭ್ರಮದಿಂದ ವಿದ್ಯಾರ್ಥಿಗಳನ್ನು ತಮ್ಮ ತಮ್ಮ ಶಾಲಾ ಕಾಲೇಜುಗಳಿಗೆ ಸ್ವಾಗತಿಸಿತು.

ಸರ್ಕಾರಿ ಶಾಲೆಗಳು, ಅನುದಾನಿತ ಮತ್ತು ಅನುದಾನ ರಹಿತ ಶಾಲೆಗಳು ಸೇರಿದಂತೆ ತಾಲೂಕಿನಲ್ಲಿ ಒಟ್ಟು 376 ಕಿರಿಯ, ಹಿರಿಯ ಪ್ರಾಥಮಿಕ ಶಾಲೆಗಳು ಹಾಗೂ ಪ್ರೌಢಶಾಲೆಗಳಿದ್ದು ಎಲ್ಲಾ ಶಾಲೆಗಳು ನಿಗಧಿತ ಸಮಯಕ್ಕೆ ಸರಿಯಾಗಿ ಆರಂಭಗೊಂಡವು. ಶಾಲಾ ಪ್ರವೇಶ ದ್ವಾರದಲ್ಲಿ ಕಾದು ನಿಂತ ಶಿಕ್ಷಕರು ಮಕ್ಕಳಿಗೆ ಗುಲಾಬಿ ನೀಡಿ ಶಾಲೆಗಳಿಗೆ ಬರಮಾಡಿಕೊಂಡರು.

ಪಟ್ಟಣದ ಕೆ.ಪಿ.ಎಸ್ ಶಾಲೆ ಮತ್ತು ಬೂಕನಕೆರೆ ಕೆ.ಪಿ.ಎಸ್ ಶಾಲೆಗೆ ಆಗಮಿಸಿದ ಶಾಸಕ ಹೆಚ್.ಟಿ.ಮಂಜು ಕ್ಷೇತ್ರ ಶಿಕ್ಷಣಾಧಿಕಾರಿಗಳೊಂದಿಗೆ ಸೇರಿ ಮಕ್ಕಳಿಗೆ ಗುಲಾಬಿ ನೀಡಿ ಸ್ವಾಗತಿಸಿದರಲ್ಲದೆ ಸರ್ಕಾರದ ವತಿಯಿಂದ ನೀಡಲಾಗುತ್ತಿರುವ ಶಾಲಾ ಸಮವಸ್ತ್ರ, ಪಠ್ಯ ಪುಸ್ತಕ ಮತ್ತಿತರ ಶೈಕ್ಷಣಿಕ ಪರಿಕರಗಳನ್ನು ವಿತರಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಹೆಚ್.ಟಿ.ಮಂಜು ಸರ್ಕಾರಿ ಶಾಲೆಗಳನ್ನು ಉಳಿಸಿಕೊಳ್ಳುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ. ಶಿಕ್ಷಣ ಮತ್ತು ಆರೋಗ್ಯ ಕ್ಷೇತ್ರಗಳೆರಡೂ ಖಾಸಗೀಕರಣದ ಹಿಡಿತದಿಂದ ಬಿಡುಗಡೆಯಾಗಬೇಕು.

### ಬಿರುಗಾಳಿ ಸಹಿತ ಭಾರೀ ಮಳೆಗೆ ಅಪಾರ ಹಾನಿ ನೆಲಸಮಗೊಂಡ ರೇಷ್ಮೆ ಶೆಡ್, ತೋಟಗಳು!

• ಉದಯವಾಹಿನಿ, ಮಧುಗಿರಿ

ತಾಲ್ಲೂಕಿನ ಕೊಡಿಗೇನಹಳ್ಳಿಯಲ್ಲಿ ಅರ್ಭಟಿಸಿದ ಬಿರುಗಾಳಿ ಸಹಿತ ಭಾರಿ ಮಳೆಗೆ ವ್ಯಾಪಕ ನಷ್ಟ ಸಂಭವಿಸಿದೆ. ಕೊಡಿಗೇನಹಳ್ಳಿ ಹೋಬಳಿ ಸೇರಿದಂತೆ ಜಿಲ್ಲೆಯ ವಿವಿಧೆಡೆ ಬಿರುಗಾಳಿಯ ರೌದ್ರಾವತಾರಕ್ಕೆ ವಿದ್ಯುತ್ ಕಂಬಗಳು, ಅಡಿಕೆ ಮತ್ತು ತೆಂಗಿನ ಮರಗಳು ನೆಲಸಮಗೊಂಡಿದ್ದು, ಸಾರ್ವಜನಿಕ ಆಸ್ತಿಪಾಸ್ತಿ ಹಾಗೂ ಬೆಳೆಗಳಿಗೆ ಭಾರಿ ಹಾನಿಯುಂಟಾಗಿದೆ.

ಗಡಿಭಾಗದ ಕಡಗತೂರು ಗ್ರಾಮದಲ್ಲಿ ಗಾಳಿಯ ತೀವ್ರತೆ ಹೆಚ್ಚಾಗಿದ್ದು, ರೇಷ್ಮೆ ಕೃಷಿಕರು ಕಂಗಾಲಾಗಿದ್ದಾರೆ. ಚೌಡರೆಡ್ಡಿ ಎಂಬುವವರಿಗೆ ಸೇರಿದ ರೇಷ್ಮೆ ಶೆಡ್ ಸಂಪೂರ್ಣ ಧ್ವಂಸಗೊಂಡಿದೆ. ಗಾಳಿಯ ರಭಸಕ್ಕೆ ಶೆಡ್‌ನ ಕಬ್ಬಿಣದ ರಾಡುಗಳು ಹಾಗೂ ಶೀಟುಗಳು ಹಾರಿ ಹೋಗಿ ನೆಲಸಮಗೊಂಡಿದ್ದು, ಲಕ್ಷಾಂತರ ರೂಪಾಯಿ ನಷ್ಟ ಸಂಭವಿಸಿದೆ. ಸಂಬಂಧಪಟ್ಟ ಕಂದಾಯ ಹಾಗೂ ಕೃಷಿ ಇಲಾಖೆಯ ಅಧಿಕಾರಿಗಳು ಕೂಡಲೇ ಸ್ಥಳಕ್ಕೆ ಭೇಟಿ ನೀಡಿ, ಹಾನಿಯ ಜಂಟಿ ಸಮೀಕ್ಷೆ ನಡೆಸಬೇಕು. ನಷ್ಟ ಅನುಭವಿಸಿದ ಸಂತ್ರಸ್ತ ರೈತರಿಗೆ ಹಾಗೂ ಸಾರ್ವಜನಿಕರಿಗೆ ಸರ್ಕಾರದಿಂದ ಸೂಕ್ತ ಪರಿಹಾರವನ್ನು ಶೀಘ್ರವಾಗಿ ವಿತರಿಸಬೇಕು ಎಂದು ಸ್ಥಳೀಯರು ಆಗ್ರಹಿಸಿದ್ದಾರೆ.

### ಸರ್ಕಾರದಿಂದ ಆಗದ ಪುಣ್ಯ ಕಾರ್ಯ ಧರ್ಮಸ್ಥಳ ಸಂಸ್ಥೆಯಿಂದ ಸಾಕಾರ: ಎಂಡಿಎಲ್

• ಉದಯವಾಹಿನಿ, ಮದ್ದೂರು

ಸರ್ಕಾರದ ಕೈಯಲ್ಲಿ ಆಗದಂತಹ ಪುಣ್ಯ ಕಾರ್ಯಗಳನ್ನು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಮಾಡುತ್ತಿದೆ ಎಂದು ವಿಧಾನಪರಿಷತ್ ಮಾಜಿ ಸದಸ್ಯ ಎಂ.ಡಿ. ಲಕ್ಷ್ಮೀನಾರಾಯಣ್ ಶ್ಲಾಘಿಸಿದರು. ತಾಲ್ಲೂಕಿನ ಮುನಿಯೂರು ಗ್ರಾಮದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಹಾಗೂ ವಿವಿಧ ಸಂಘ ಸಂಸ್ಥೆಗಳ ಸಹಕಾರದೊಂದಿಗೆ ಆಯೋಜಿಸಿದ್ದ 2061 ನೇ ಮದ್ಯವರ್ಜನ ಶಿಬಿರದ ಸಮಾರೋಪ ಸಮಾರಂಭದಲ್ಲಿ ಭಾಗವಹಿಸಿ ಅವರು ಕುಡಿಯುವುದಕ್ಕೆ ಸರ್ಕಾರದ ಬೆಂಬಲವಿದ್ದರೆ, ದುಶ್ಚಟಗಳಿಂದ ಮುಕ್ತಿ ಪಡೆದು ಉತ್ತಮ ಜೀವನ ನಡೆಸುವುದಕ್ಕೆ ಶ್ರೀಕ್ಷೇತ್ರ ಧರ್ಮಸ್ಥಳದ ಶ್ರೀರಕ್ಷೆಯಿದೆ.

ಕುಡಿದರೆ ಜೀವನ ಎಂಬ ಭ್ರಮೆಯಿಂದ ಹೊರಬಂದು ಉತ್ತಮ ಜೀವನ ಸಾಗಿಸಬೇಕು.ತಾಯಿ ಹಾಗೂ ಹಸುವಿನ ಹಾಲನ್ನು ಕುಡಿದು ಬೆಳೆದ ನಾವು ಪ್ರಸ್ತುತ ಮದ್ಯ ಎಂಬ ವಿಷಕ್ಕೆ, ದುಶ್ಚಟಗಳಿಗೆ ದಾಸರಾಗುತ್ತಿರುವುದು ದುರಂತ ಎಂದರು.

ಸರ್ಕಾರದ ಆಯವ್ಯಯದಲ್ಲಿ ಒಂದು ಸಮುದಾಯಕ್ಕೆ, ಒಂದು ಕ್ಷೇತ್ರಕ್ಕೆ ಅನ್ಯಾಯವಾಗಬಹುದು, ಆದರೆ ಧರ್ಮಸ್ಥಳ ಯೋಜನೆಯಲ್ಲಿ ಸರ್ವರ ಹಿತ, ಗ್ರಾಮಾಭಿವೃದ್ಧಿ, ಮಹಿಳಾ ಸಬಲೀಕರಣವೇ ಮುಖ್ಯವಾಗಿ ಅನ್ಯಾಯಕ್ಕೆ ಅವಕಾಶವೇ ಇಲ್ಲದಂತಾಗಿದೆ.

ಹಣಕಾಸು ಸಂಸ್ಥೆಗಳಲ್ಲಿ ಆರ್ಥಿಕ ಸಮಸ್ಯೆ ಸರ್ವೇ ಸಾಮಾನ್ಯ, ಆದರೆ ಯೋಜನೆಯ ಹಣಕಾಸಿನ ವ್ಯವಹಾರ ಪಾರದರ್ಶಕ, ನ್ಯಾಯಸಮ್ಮತವಾಗಿದ್ದು ಸಮಸ್ಯೆಯೇ ಇಲ್ಲದೆ ಅಚ್ಚುಕಟ್ಟಾಗಿ ನಡೆಯುತ್ತಿರುವ ಏಕೈಕ ಸಂಸ್ಥೆ ಇದಾಗಿದೆ ಎಂದು ಹರ್ಷ ವ್ಯಕ್ತಪಡಿಸಿದರು.ಸಮಾಜ ನಿರ್ಮಾಣದ ಕನಸು ಧರ್ಮಾಧಿಕಾರಿಗಳವರದ್ದಾಗಿದೆ.


# ರಾಜ್ಯ ಕಾಂಗ್ರೆಸ್ ಸರ್ಕಾರದ ಸಚಿವ ಸ್ಥಾನಕ್ಕೆ ಜಿಲ್ಲೆಯ ನಾಲ್ವರು ಲಾಬಿ

## ಮುಂಚೂಣಿಯಲ್ಲಿ ಎಂ.ಬಿ.ಪಾಟೀಲ, ಯಶವಂತರಾಯಗೌಡ ಪಾಟೀಲ, ಶಿವಾನಂದ ಪಾಟೀಲ, ಸಿ.ಎಸ್.ನಾಡಗೌಡ

• ಉದಯವಾಹಿನಿ, ವಿಜಯಪುರ:

ರಾಜ್ಯ ಕಾಂಗ್ರೆಸ್ ಸರ್ಕಾರದ ನೂತನ ಮುಖ್ಯಮಂತ್ರಿಯಾಗಿ ಜೂನ್ 3ರಂದು ಪ್ರಮಾಣ ವಚನ ಸ್ವೀಕರಿಸಲಿರುವ ಡಿ.ಕೆ.ಶಿವಕುಮಾರ್ ಅವರ ಸಂಪುಟ ಸೇರಲು ಜಿಲ್ಲೆಯ ನಾಲ್ವರು ಶಾಸಕರು ತೀವ್ರ ಲಾಬಿ ನಡೆಸಿದ್ದಾರೆ. ನಿರ್ಗಮಿತ ಮುಖ್ಯಮಂತ್ರಿ ಸಿದ್ದರಾಮಯ್ಯ ಸಚಿವ ಸಂಪುಟದಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರಾಗಿದ್ದ ಎಂ.ಬಿ.ಪಾಟೀಲ ಹಾಗೂ ಕಬ್ಬು ಅಭಿವೃದ್ಧಿ, ಸಕ್ಕರೆ, ಜವಳಿ ಹಾಗೂ ಕೃಷಿ ಮಾರುಕಟ್ಟೆ ಸಚಿವರಾಗಿದ್ದ ಶಿವಾನಂದ ಪಾಟೀಲರು ಡಿಕೆಶಿ ಸಚಿವ ಸಂಪುಟ ದಲ್ಲೂ ಸ್ಥಾನ ಗಿಟ್ಟಿಸಲು ಕಸರತ್ತು ನಡೆಸಿದ್ದಾರೆ.

ಇಂಡಿ ಶಾಸಕ ಯಶವಂತರಾಯಗೌಡ ಪಾಟೀಲ ಹಾಗೂ ಮುದ್ದೇಬಿಹಾಳ ಶಾಸಕ ಸಿ.ಎಸ್.ನಾಡಗೌಡ ಅವರು ಹೊಸದಾಗಿ ಸಚಿವರಾಗುವ ನಿರೀಕ್ಷೆಯಲ್ಲಿದ್ದು, ದೆಹಲಿ ಮಟ್ಟದಲ್ಲಿ ಲಾಬಿ ನಡೆಸಿದ್ದಾರೆ. ಅಲ್ಲದೇ, ಪ್ರಥಮ ಬಾರಿಗೆ ಶಾಸಕರಾದವರಿಗೂ ಅವಕಾಶ ನೀಡಬೇಕು ಎಂದು ಸಿಂದಗಿ ಶಾಸಕ ಅಶೋಕ ಮನಗೂಳಿ ಮತ್ತು ನಾಗಠಾಣ ಶಾಸಕ ವಿಠಲ ಕಟಕದೊಂಡ ಹಕ್ಕೊತ್ತಾಯ ಮಂಡಿಸಿದ್ದಾರೆ. ಎಂ.ಬಿ.ಪಾಟೀಲ, ಶಿವಾನಂದ ಪಾಟೀಲ ಮತ್ತು ಸಿ.ಎಸ್.ನಾಡಗೌಡ ಅವರು ಈಗಾಗಲೇ ಒಂದೆರಡು ಬಾರಿ ಸಚಿವರಾಗುವ ಅವಕಾಶ ಲಭಿಸಿದೆ. ಆದರೆ, ಇಂಡಿ ಶಾಸಕ ಯಶವಂತರಾಯರು ಮೂರು ಬಾರಿ ಶಾಸಕರಾದರೂ ಒಮ್ಮೆಯೂ ಸಚಿವರಾಗುವ ಅವಕಾಶ ಲಭಿಸಿಲ್ಲ. ಅಲ್ಲದೇ, ಇಂಡಿ ಕ್ಷೇತ್ರದ ಯಾರೊಬ್ಬರಿಗೂ ಇದುವರೆಗೂ ಅವಕಾಶ ಲಭಿಸಿಲ್ಲ. ಈ ಕಾರಣಕ್ಕೆ ಯಶವಂತರಾಯರಿಗೆ ಈ ಬಾರಿ ಅವಕಾಶ ಸಿಗುವ ಸಾಧ್ಯತೆ ದಟ್ಟವಾಗಿದೆ. ಅಲ್ಲದೇ, 2023ರಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕಾಂಗ್ರೆಸ್ ವರಿಷ್ಠರು ಮುಂದಿನ ಸಚಿವ ಸಂಪುಟದಲ್ಲಿ ಯಶವಂತರಾಯರಿಗೆ ಅವಕಾಶ ನೀಡುವ ಭರವಸೆ ನೀಡಿದ್ದರು. ಅದು ಈಗ ಈಡೇರುವ ಸಾಧ್ಯತೆ ಇದೆ ಎಂಬ ಮಾತು ದಟ್ಟವಾಗಿದೆ. ಸಿದ್ದರಾಮಯ್ಯ ಸಂಪುಟದಲ್ಲಿ ಸಚಿವರಾಗಿದ್ದ ಇಬ್ಬರಲ್ಲಿ ಒಬ್ಬರನ್ನು ಮಾತ್ರ ಉಳಿಸಿಕೊಂಡು, ಇನ್ನೊಬ್ಬರನ್ನು ಕೈಬಿಟ್ಟು ಅವರ ಬದಲಿಗೆ ಹೊಸಬರಿಗೆ ಅವಕಾಶ ಲಭಿಸುವ ಸಾಧ್ಯತೆಯೂ ದಟ್ಟವಾಗಿದೆ. ಹೀಗೊಂದು ವೇಳೆ ನಡೆದರೆ ಹಾಲಿ ಸಚಿವರಾಗಿದ್ದ ಎಂ.ಬಿ.ಪಾಟೀಲ ಮತ್ತು ಶಿವಾನಂದ ಪಾಟೀಲ ಅವರಿಬ್ಬರಲ್ಲಿ ಯಾರು ಡಿಕೆ ಸಂಪುಟದಲ್ಲಿ ಸ್ಥಾನ ಗಿಟ್ಟಿಸಲಿದ್ದಾರೆ ಹಾಗೂ ಯಶವಂತರಾಯಗೌಡ ಮತ್ತು ಸಿ.ಎಸ್.ನಾಡಗೌಡ ಅವರಲ್ಲಿ ಯಾರಿಗೆ ಸಚಿವರಾಗುವ ಅವಕಾಶ ಒಲಿಯಲಿದೆ ಎಂಬುದು ಕುತೂಹಲ ಮೂಡಿಸಿದೆ. ರಾಜ್ಯದ ವಿವಿಧ ಜಿಲ್ಲಾವಾರು, ಜಾತಿವಾರು ಸಚಿವ ಸ್ಥಾನ ಮೀಸಲು ನೀಡುವುದರಿಂದ ವಿಜಯಪುರ ಜಿಲ್ಲೆಯ ನಾಲ್ವರಲ್ಲಿ ಯಾರಿಗೆಲ್ಲ ಸಚಿವ ಸ್ಥಾನ ಒಲಿಯಲಿದೆ ಎಂಬುದು ಕಾದುನೋಡಬೇಕಿದೆ.






### ಉಪಮುಖ್ಯಮಂತ್ರಿ ಸ್ಥಾನ ಸೃಷ್ಟಿ

ನೂತನ ಸರ್ಕಾರದಲ್ಲಿ ಉಪಮುಖ್ಯಮಂತ್ರಿ ಸ್ಥಾನ ಸೃಷ್ಟಿಯಾದರೆ ಅದರಲ್ಲಿ ರಾಜ್ಯದ ಪ್ರಬಲ ಲಿಂಗಾಯತ ಸಮುದಾಯಕ್ಕೆ ಅವಕಾಶ ಒಲಿಯಲಿದೆ ಎಂಬ ಮಾತು ಕೇಳಿಬರುತ್ತಿದೆ. ಹಾಗೊಂದು ವೇಳೆ ಉಪ ಮುಖ್ಯಮಂತ್ರಿ ಸ್ಥಾನಕ್ಕೆ ಲಿಂಗಾಯತ ಸಮುದಾಯಕ್ಕೆ ನೀಡುವ ವಿಚಾರ ಬಂದರೆ ಎಂ.ಬಿ.ಪಾಟೀಲರಿಗೆ ಲಭಿಸುವ ಸಾಧ್ಯತೆ ಇದೆ ಎನ್ನಲಾಗುತ್ತಿದೆ. ಇದರ ಜೊತೆಗಾಗಿ ಕೆಪಿಸಿಸಿ ಅಧ್ಯಕ್ಷ ಸ್ಥಾನಕ್ಕೂ ಎಂ.ಬಿ.ಪಾಟೀಲ ಹೆಸರು ಮುಂಚೂಣಿಯಲ್ಲಿದೆ.

ಸಿದ್ದರಾಮಯ್ಯ ಸಂಪುಟದಲ್ಲಿ ಇದ್ದವರಿಗೆ ಅವಕಾಶವಿಲ್ಲ ಹೊಸಬರಿಗೆ ಮಾತ್ರ ಅವಕಾಶ ಎಂಬ ಸೂತ್ರ ಒಂದು ವೇಳೆ ಜಾರಿಗೆ ಬಂದರೆ ಯಶವಂತರಾಯಗೌಡ ಪಾಟೀಲ ಮತ್ತು ಸಿ.ಎಸ್.ನಾಡಗೌಡ ಅವರಿಗೆ ಅದೃಷ್ಟ ಒಲಿದು ಬರಲಿದೆ.

# ಡಿಸಿಎಂ ಸ್ಥಾನ ಜೊತೆ ಕಾಂಗ್ರೆಸ್ ಅಧ್ಯಕ್ಷ ಸ್ಥಾನ ನೀಡಲು ಮನವಿ

• ಉದಯವಾಹಿನಿ,ಚಿಂಚೋಳಿ


ಉದಯವಾಹಿನಿ ಚಿತ್ರ

ಮಾಜಿ ಸಚಿವ ಡಾ.ಶರಣಪ್ರಕಾಶ ಪಾಟೀಲ್ ಅವರಿಗೆ ರಾಜ್ಯ ಸರ್ಕಾರದಲ್ಲಿ ಉಪಮುಖ್ಯಮಂತ್ರಿ ಜೊತೆ ಕಾಂಗ್ರೆಸ್ ಪಕ್ಷದ ರಾಜ್ಯಾಧ್ಯಕ್ಷ ಸ್ಥಾನ ನೀಡಬೇಕು ಎಂದು ಜಿಲ್ಲಾ ಕೆಡಿಪಿ ಮಾಜಿ ಸದಸ್ಯ ಶಿವಶರಣರೆಡ್ಡಿ ಶೇಟ್ಟಿ ಭಕ್ತಂಪಳ್ಳಿ ಹೈಕಮಾಂಡ್ ಸೋನಿಯಾಗಾಂಧಿ,ರಾಹುಲ್ ಗಾಂಧಿ,ಮಲ್ಲಿಕಾರ್ಜುನ್ ಖರ್ಗೆ ಅವರಿಗೆ ಮನವಿ ಮಾಡಿದ್ದಾರೆ. ಡಾ.ಶರಣಪ್ರಕಾಶ ಪಾಟೀಲ ಅವರು ಕೇವಲ ಒಂದು ಕ್ಷೇತ್ರಕ್ಕೆ ಸೀಮಿತವಾಗದೆ ಅವರು ದೂರದೃಷ್ಟಿ ಹೊಂದಿರುವ ಜನಮೆಚ್ಚಿದ ನಾಯಕರಾಗಿದ್ದು ಮತಕ್ಷೇತ್ರದಲ್ಲಿ ಮೂಲಸೌಕರ್ಯ,ಶಿಕ್ಷಣ,ರಸ್ತೆ ಮತ್ತು ಆರೋಗ್ಯ ಕ್ಷೇತ್ರಗಳಿಗೆ ಅಭೂತಪೂರ್ವ ಕೊಡುಗೆ ನೀಡುವ ಮೂಲಕ ಸಮಗ್ರ ಅಭಿವೃದ್ಧಿಯ ಹರಿಕಾರ ಎನಿಸಿಕೊಂಡಿದ್ದಾರೆ.

ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಮತ್ತು ಜೀವನೋಪಾಯ ಇಲಾಖೆಗಳಲ್ಲಿ ಕ್ರಾಂತಿಕಾರಿ ಬದಲಾವಣೆಗಳನ್ನು ತಂದಿದ್ದಾರೆ,ಬಡವರಿಗೂ ಗುಣಮಟ್ಟದ ಉನ್ನತ ವೈದ್ಯಕೀಯ ಚಿಕಿತ್ಸೆ ಸಿಗುವಂತೆ ಮಾಡಿದ್ದಾರೆ.ಕೌಶಲ್ಯಾಭಿವೃದ್ಧಿ ಇಲಾಖೆಯ ಮೂಲಕ ಯುವಜನತೆಗೆ ಉದ್ಯೋಗಾವಕಾಶ ಸೃಷ್ಟಿಸುವಲ್ಲಿ ಯಶಸ್ವಿಯಾಗಿದ್ದಾರೆ.ಪಕ್ಷ ಮತ್ತು ಸರ್ಕಾರ ನೀಡಿದ ಪ್ರತಿಯೊಂದು ಜವಾಬ್ದಾರಿಯನ್ನು ಅತ್ಯಂತ ನಿಷ್ಠೆ ಮತ್ತು ದಕ್ಷತೆಯಿಂದ ನಿಭಾಯಿಸಿ ಸೈ ಎನಿಸಿಕೊಂಡಿದ್ದಾರೆ,ಪ್ರಬಲ ನಾಯಕರಾಗಿ ಹೊರಹೊಮ್ಮಿರುವ ಡಾ.ಶರಣಪ್ರಕಾಶ ಪಾಟೀಲ ಅವರಿಗೆ ಉಪಮುಖ್ಯಮಂತ್ರಿ ಜೋತೆ ಕೆಪಿಸಿಸಿ ಅಧ್ಯಕ್ಷ ಸ್ಥಾನ ನೀಡುವುದು ಇಡೀ ಭಾಗದ ಜನರಿಗೆ ನೀಡುವ ಗೌರವವಾಗಿದೆ.

ಆಡಳಿತಾತ್ಮಕ ಅನುಭವದಿಂದ ರಾಜ್ಯದಲ್ಲಿ ಮತ್ತಷ್ಟು ಹೊಸ ಯೋಜನೆಗಳನ್ನು ಜಾರಿಗೆ ತಂದು ಇಡೀ ಕರ್ನಾಟಕದ ಸಮಗ್ರ ಅಭಿವೃದ್ಧಿಗೆ ಶ್ರಮಿಸಲಿದ್ದು ಪಕ್ಷ ಕಟ್ಟುವಲ್ಲಿ ಸಂಘಟನೆ ಮಾಡುತ್ತಾರೆ.ಈ ನಿಟ್ಟಿನಲ್ಲಿ ಸೂಕ್ತ ನಿರ್ಧಾರ ಕೈಗೊಂಡು ಅವರಿಗೆ ಡಿಸಿಎಂ ಜೊತೆ ಕೆಪಿಸಿಸಿ ಅಧ್ಯಕ್ಷ ಸ್ಥಾನ ನೀಡಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೇಂದ್ರದ ವಿರುದ್ಧ ಸಂಸದ ಸಾಗರ್ ಖಂಡ್ರೆ ಆಕ್ರೋಶ

• ಉದಯವಾಹಿನಿ, ಬೀದರ್


ಉದಯವಾಹಿನಿ ಚಿತ್ರ

ಜಿಲ್ಲೆಯ ರೈತರು ಮುಂಗಾರು ಹಂಗಾಮಿನ ಆರಂಭದಲ್ಲೇ ರಸಗೊಬ್ಬರ ಸಿಗದೆ ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಜಿಲ್ಲೆಗೆ ಅಗತ್ಯವಿರುವ ರಸಗೊಬ್ಬರವನ್ನು ಸಕಾಲದಲ್ಲಿ ಪೂರೈಸದ ಕೇಂದ್ರ ಸರ್ಕಾರದ ರೈತ ವಿರೋಧಿ ಧೋರಣೆ ಅನುಸರಿಸುತ್ತಿದೆ ಎಂದು ಸಂಸದ ಸಾಗರ್ ಖಂಡ್ರೆ ಆರೋಪಿಸಿದ್ದಾರೆ. ಈ ಕುರಿತು ಪ್ರಕಟಣೆ ಹೊರಡಿಸಿರುವ ಅವರು, ಏಪ್ರಿಲ್‌ನಿಂದ ಜೂನ್ ವರೆಗೆ ಜಿಲ್ಲೆಗೆ ಒಟ್ಟು 21,556 ಟನ್ ರಸಗೊಬ್ಬರ ಅಗತ್ಯವಿದ್ದು, ಕೇಂದ್ರ ಸರ್ಕಾರದಿಂದ ಇದುವರೆಗೆ ಕೇವಲ 9,144 ಟನ್ ಪೂರೈಕೆಯಾಗಿದೆ. 12,415 ಟನ್ ರಸಗೊಬ್ಬರ ಕೊರತೆಯಿದೆ. ಮುಂಗಾರು ಅವಧಿಯಲ್ಲಿ ರಸಗೊಬ್ಬರಕ್ಕೆ ಇಷ್ಟೊಂದು ದೊಡ್ಡ ಪ್ರಮಾಣದ ಬೇಡಿಕೆ ಬರುತ್ತದೆ ಎಂಬ ಕನಿಷ್ಠ ಜ್ಞಾನ ಕೇಂದ್ರ ಸರ್ಕಾರಕ್ಕೆ ಇರಬೇಕಿತ್ತು.

ಆದರೆ, ಇಂತಹ ತೀವ್ರ ಬಿಕ್ಕಟ್ಟು ಎದುರಾಗುವ ಮುನ್ಸೂಚನೆ ಇದ್ದರೂ ಸಹ ಇದನ್ನು ಸಂಪೂರ್ಣ ನಿರ್ಲಕ್ಷಿಸಿದೆ ಎಂದು ಕಿಡಿಕಾರಿದ್ದಾರೆ.ಮುಂಗಾರು ಹಂಗಾಮು ರೈತರಿಗೆ ಅತ್ಯಂತ ಪ್ರಮುಖವಾದ ಸಮಯವಾಗಿದೆ.

ಇಂತಹ ಸಂದರ್ಭದಲ್ಲಿ ರೈತರ ನೆರವಿಗೆ ಧಾವಿಸಬೇಕಾಗಿದ್ದ ಕೇಂದ್ರ ಸರ್ಕಾರವು, ಕೇವಲ ಚುನಾವಣಾ ಪ್ರಚಾರ ಮತ್ತು ರಾಜಕೀಯದಲ್ಲಿ ತನ್ನ ಸಮಯವನ್ನು ವ್ಯರ್ಥ ಮಾಡಿದೆ.

# ಮಹಿಳೆಯ ಗರ್ಭಕೋಶದಿಂದ 8 ಕೆ.ಜಿ ಗಡ್ಡೆ ಯಶಸ್ವಿಯಾಗಿ ತೆಗೆದ ವೈದ್ಯರು!

• ಉದಯವಾಹಿನಿ, ಉಡುಪಿ

ಉಡುಪಿ ಜಿಲ್ಲಾ ಸರ್ಕಾರಿ ತಾಯಿ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ 44 ವರ್ಷದ ಮಹಿಳೆಯ ಗರ್ಭಕೋಶದಲ್ಲಿದ್ದ ಸುಮಾರು 8 ಕೆ.ಜಿ. ತೂಕದ ಫೈಬ್ರಾಯ್ಡ್ ಗಡ್ಡೆಯನ್ನು ಯಶಸ್ವಿ ಶಸ್ತ್ರಚಿಕಿತ್ಸೆಯ ಮೂಲಕ ವೈದ್ಯರ ತಂಡ ತೆಗೆದುಹಾಕಿದೆ. ಒಂದು ವರ್ಷದಿಂದ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ, ಕಾಣದ ಸುಧಾರಣೆ ಕಳೆದ ಒಂದು ವರ್ಷದಿಂದ ಹೊಟ್ಟೆನೋವಿನಿಂದ ಬಳಲುತ್ತಿದ್ದ ಮಹಿಳೆ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆದಿದ್ದರೂ ಆರೋಗ್ಯದಲ್ಲಿ ಸುಧಾರಣೆ ಕಂಡುಬರದ ಹಿನ್ನೆಲೆಯಲ್ಲಿ ಸರ್ಕಾರಿ ತಾಯಿ ಮತ್ತು ಮಕ್ಕಳ ಆಸ್ಪತ್ರೆಗೆ ಬಂದಿದ್ದರು.

ವೈದ್ಯಕೀಯ ತಪಾಸಣೆ ವೇಳೆ ಮಹಿಳೆಯ ಹೊಟ್ಟೆಯು ಗರ್ಭಿಣಿಯರ ಹೊಟ್ಟೆಯಂತೆ ಉಬ್ಬಿಕೊಂಡಿರುವುದು ಕಂಡುಬಂದಿದ್ದು, ಬಳಿಕ ಅಲ್ಟ್ರಾಸೌಂಡ್ ಹಾಗೂ ಸಿಟಿ ಸ್ಕ್ಯಾನ್ ಪರೀಕ್ಷೆ ನಡೆಸಿದಾಗ ಗರ್ಭಕೋಶದಲ್ಲಿ ದೊಡ್ಡ ಗಾತ್ರದ ಗಡ್ಡೆ ಇರುವುದು ದೃಢಪಟ್ಟಿತ್ತು. ಜಿಲ್ಲಾ ಆಸ್ಪತ್ರೆ ಹಾಗೂ ತಾಯಿ ಮತ್ತು ಮಕ್ಕಳ ಆಸ್ಪತ್ರೆಯ ಜಿಲ್ಲಾ ಸರ್ಜನ್ ಡಾ. ಹೆಚ್. ಅಶೋಕ್ ಅವರ ಸಲಹೆಯಂತೆ ಕಳೆದ ಮೇ 25ರಂದು ಶಸ್ತ್ರಚಿಕಿತ್ಸೆ ನಡೆಸಲಾಗಿದ್ದು, ಸುಮಾರು 8 ಕೆ.ಜಿ. ತೂಕದ ಗಡ್ಡೆಯನ್ನು ಯಶಸ್ವಿಯಾಗಿ ಹೊರತೆಗೆಯಲಾಗಿದೆ. ಶಸ್ತ್ರಚಿಕಿತ್ಸೆಯ ಬಳಿಕ ಮಹಿಳೆ ಚೇತರಿಸಿಕೊಳ್ಳುತ್ತಿದ್ದು, ಆಸ್ಪತ್ರೆಯಲ್ಲಿ ಚಿಕಿತ್ಸೆ ಮುಂದುವರಿದಿದೆ.ಈ ಶಸ್ತ್ರಚಿಕಿತ್ಸೆಯನ್ನು ಸ್ತ್ರೀರೋಗ ತಜ್ಞರಾದ ಡಾ. ಶಶಾಂಕ್ ಕಿಣಿ, ಡಾ. ಜಾಸ್ಮಿನ್, ಡಾ. ಕವಿತಾ ಹಾಗೂ ಡಾ. ಅಮೃತಾಂಶ್ ಅವರ ತಂಡ ನಡೆಸಿದ್ದು, ಅರವಳಿಕೆ ತಜ್ಞರಾದ ಡಾ. ಸೂರ್ಯನಾರಾಯಣ ಮತ್ತು ಡಾ. ರಾಜಗೋಪಾಲ್ ಭಂಡಾರಿ ಸಹಕರಿಸಿದ್ದಾರೆ. ಶುಶ್ರೂಷಾಧಿಕಾರಿ ರಕ್ಷಿತಾ ಹಾಗೂ ಓಟಿ ಸಹಾಯಕಿ ಸಂಗೀತ ಕೂಡ ಕಾರ್ಯಾಚರಣೆಯಲ್ಲಿ ಭಾಗವಹಿಸಿದ್ದರು.

# ಜನಪರ ಆಡಳಿತದಿಂದ ಮೂವರು ಮುಖ್ಯಮಂತ್ರಿಗಳು ಜನಮನ ಗೆದ್ದಿದ್ದಾರೆ: ಶಾಸಕ ಶರಣಗೌಡ ಕಂದಕೂರು

• ಉದಯವಾಹಿನಿ, ಯಾದಗಿರಿ

ರಾಜ್ಯದಲ್ಲಿ ಆಡಳಿತ ನಡೆಸಿದ ಮಾಜಿ ಮುಖ್ಯಮಂತ್ರಿಗಳಾದ ಎಚ್.ಡಿ. ಕುಮಾರಸ್ವಾಮಿ, ಬಿ.ಎಸ್. ಯಡಿಯೂರಪ್ಪ ಹಾಗೂ ಸಿದ್ದರಾಮಯ್ಯ ಅವರು ತಮ್ಮ ಜನಪರ ಯೋಜನೆಗಳು ಮತ್ತು ಅಭಿವೃದ್ಧಿ ಕಾರ್ಯಗಳ ಮೂಲಕ ಜನಮಾನಸದಲ್ಲಿ ಅಚ್ಚಳಿಯದ ಛಾಪು ಮೂಡಿಸಿದ್ದಾರೆ ಎಂದು ಗುರಮಠಕಲ್ ಕ್ಷೇತ್ರದ ಶಾಸಕ ಶರಣಗೌಡ ಕಂದಕೂರು ಹೇಳಿದರು.

ಸೋಮವಾರ ಮತಕ್ಷೇತ್ರದ ಯರಗೋಳ ಹಾಗೂ ಹೋರುಂಚಾ ಗ್ರಾಮಗಳಲ್ಲಿ ಕೆಕೆಆರ್‌ಡಿಬಿ ಮೈಕ್ರೋ ಎಸ್‌ಸಿಪಿ ಯೋಜನೆಯಡಿ ಒಟ್ಟು 7 ಕೋಟಿ ವೆಚ್ಚದ ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೆ ಅಡಿಗಲ್ಲು ನೆರವೇರಿಸಿ ಅವರು ಮಾತನಾಡಿದರು. ಥಾವರು ನಾಯಕ ತಾಂಡಾದಿಂದ ತಾನು ನಾಯಕ ತಾಂಡಾವರೆಗೆ ಸುಮಾರು 4 ಕೋಟಿ ವೆಚ್ಚದಲ್ಲಿ ಡಾಂಬರೀಕರಣ ರಸ್ತೆ ನಿರ್ಮಾಣ ಹಾಗೂ ಹೋರುಂಚಾ ಗ್ರಾಮದ ನಡುವಿನ ತಾಂಡಾದಿಂದ ಯಡ್ಡಳ್ಳಿ ಗ್ರಾಮದ ಹರಿಜನವಾಡಾವರೆಗೆ 3 ಕೋಟಿ ವೆಚ್ಚದಲ್ಲಿ ರಸ್ತೆ ನಿರ್ಮಾಣ ಕಾಮಗಾರಿಗೆ ಚಾಲನೆ ನೀಡಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಕಂದಕೂರು, ಎಚ್.ಡಿ. ಕುಮಾರಸ್ವಾಮಿ ಅವರು ರೈತರ ಸಾಲಮನ್ನಾ, ಜನತಾ ದರ್ಶನ, ಗ್ರಾಮ ವಾಸ್ತವ್ಯ ಮತ್ತು ಸುವರ್ಣ ಗ್ರಾಮ ಯೋಜನೆಗಳ ಮೂಲಕ ಜನರ ಮೆಚ್ಚುಗೆ ಪಡೆದಿದ್ದಾರೆ. ಬಿ.ಎಸ್. ಯಡಿಯೂರಪ್ಪ ಅವರು ಭಾಗ್ಯಲಕ್ಷ್ಮೀ ಯೋಜನೆ ಹಾಗೂ ವಿದ್ಯಾರ್ಥಿಗಳಿಗೆ ಸೈಕಲ್ ವಿತರಣೆ ಸೇರಿದಂತೆ ಹಲವು ಜನಪರ ಕಾರ್ಯಕ್ರಮಗಳನ್ನು ಜಾರಿಗೆ ತಂದಿದ್ದಾರೆ. ಸಿದ್ದರಾಮಯ್ಯ ಅವರು ವಿವಿಧ ಭಾಗ್ಯ ಯೋಜನೆಗಳ ಮೂಲಕ ರಾಜ್ಯದ ಜನರ ಹೃದಯದಲ್ಲಿ ವಿಶೇಷ ಸ್ಥಾನ ಗಳಿಸಿದ್ದಾರೆ ಎಂದು



ರಾಜ್ಯದ ನೂತನ ಮುಖ್ಯಮಂತ್ರಿಯಾಗಲಿರುವ ಡಿ.ಕೆ. ಶಿವಕುಮಾರ ಅವರು ಈ ಮೂವರು ನಾಯಕರ ಅಭಿವೃದ್ಧಿ ಪರ ಆಡಳಿತವನ್ನು ಆದರ್ಶವಾಗಿ ತೆಗೆದುಕೊಂಡು ರಾಜ್ಯವನ್ನು ಮುನ್ನಡೆಸಬೇಕು. ಜನರ ಭಾವನೆಗಳಿಗೆ ಸ್ಪಂದಿಸುವ ಅಭಿವೃದ್ಧಿ ರಾಜಕಾರಣವೇ ರಾಜ್ಯದ ಪ್ರಗತಿಗೆ ದಾರಿ. ಶರಣಗೌಡ ಕಂದಕೂರು ಶಾಸಕ

# ಮೇ ತಿಂಗಳಲ್ಲಿ ನೈಋತ್ಯ ರೈಲ್ವೆಗೆ ದಾಖಲೆಯ ಆದಾಯ: 770.71 ಕೋಟಿ ಗಳಿಕೆ

• ಉದಯವಾಹಿನಿ, ಹುಬ್ಬಳ್ಳಿ

ನೈಋತ್ಯ ರೈಲ್ವೆ ಮೇ 2026ರಲ್ಲಿ ಸರಕು ಸಾಗಣೆ ಮತ್ತು ಪ್ರಯಾಣಿಕರ ಆದಾಯದಲ್ಲಿ ಗಮನಾರ್ಹ ಬೆಳವಣಿಗೆಯನ್ನು ದಾಖಲಿಸಿದೆ. ಈ ಅವಧಿಯಲ್ಲಿ ವಲಯವು ಒಟ್ಟು 4.4 ಮಿಲಿಯನ್ ಟನ್ ಸರಕು ಸಾಗಣೆ ನಡೆಸಿದ್ದು, ಇದು ಮೇ ತಿಂಗಳಲ್ಲಿನ ಇದುವರೆಗಿನ ಅತಿ ಹೆಚ್ಚು ಸಾಧನೆಯಾಗಿದೆ. ಸರಕು ಸಾಗಣೆಯಿಂದ 425 ಕೋಟಿ ರೂ. ಆದಾಯ ಗಳಿಸಲಾಗಿದೆ. ಪ್ರಯಾಣಿಕರ ವಿಭಾಗದಲ್ಲಿಯೂ ಉತ್ತಮ ಸಾಧನೆ ಕಂಡುಬಂದಿದ್ದು, 302 ಕೋಟಿ ರೂ. ಆದಾಯ ದಾಖಲಿಸುವುದರ ಜೊತೆಗೆ 16.4 ಮಿಲಿಯನ್ ಪ್ರಯಾಣಿಕರನ್ನು ಸಾಗಿಸಲಾಗಿದೆ. ಒಟ್ಟಾರೆ, ಮೇ 2026ರಲ್ಲಿ ನೈಋತ್ಯ ರೈಲ್ವೆಯ ಒಟ್ಟು ಆದಾಯ 770.71 ಕೋಟಿ ರೂ.ಗಳಷ್ಟಾಗಿದೆ.ಮೇ 2026ರಲ್ಲಿ ನೈಋತ್ಯ ರೈಲ್ವೆ 4.40 ಮಿಲಿಯನ್ ಟನ್ ಮೂಲ ಸರಕು ಸಾಗಣೆ ಮಾಡಿದ್ದು, ಇದು ಕಳೆದ ವರ್ಷದ ಅವಧಿಯ 4.22 ಮಿಲಿಯನ್ ಟನ್‌ಗೆ ಹೋಲಿಸಿದರೆ 4.3% ಹೆಚ್ಚಾಗಿದೆ. ಅಲ್ಲದೆ, ಈ ಸಾಧನೆಯು 2008ರ ಮೇ ತಿಂಗಳಲ್ಲಿ ಸ್ಥಾಪಿತವಾದ 4.25 ಮಿಲಿಯನ್ ಟನ್ ದಾಖಲೆಯನ್ನು ಮೀರಿಸಿದೆ. ದಿನಕ್ಕೆ ಸರಾಸರಿ 2,275 ವ್ಯಾಗನ್‌ಗಳನ್ನು ಲೋಡ್ ಮಾಡಲಾಗಿದ್ದು, ಕಳೆದ ವರ್ಷ ಇದೇ ಅವಧಿಯಲ್ಲಿ ಇದು 2,193 ವ್ಯಾಗನ್‌ಗಳಾಗಿತ್ತು, ಅಂದರೆ ಶೇ 3.7ರಷ್ಟು ಬೆಳವಣಿಗೆ ಕಂಡುಬಂದಿದೆ.ಸರಕುಗಳ ವಿಭಾಗದಲ್ಲಿ, ಮೇ 2026ರಲ್ಲಿ 1.766 ಮಿಲಿಯನ್ ಟನ್ ಕಬ್ಬಿಣದ ಅದಿರು, 0.921 ಮಿಲಿಯನ್ ಟನ್ ಉಕ್ಕು ಹಾಗೂ 0.108 ಮಿಲಿಯನ್ ಟನ್ ಕಚ್ಚಾ ವಸ್ತು ಸಾಮಗ್ರಿ ಸಾಗಿಸಲಾಗಿದೆ. ಕಲ್ಲಿದ್ದಲು ಲೋಡಿಂಗ್ 0.93 ಮಿಲಿಯನ್ ಟನ್‌ಗೆ ಏರಿಕೆಯಾಗಿದ್ದು, ಮೇ 2025ರ 0.76 ಮಿಲಿಯನ್ ಟನ್‌ಗೆ ಹೋಲಿಸಿದರೆ 23.3% ಗಣನೀಯ ಬೆಳವಣಿಗೆ ಕಂಡಿದೆ.

# ಬಹುತೇಕ ತರಕಾರಿ ಬೆಲೆ ಸ್ಥಿರ

• ಉದಯವಾಹಿನಿ, ರಾಯಚೂರು

ಹವಾಮಾನ ಇಲಾಖೆ ಪ್ರಕಾರ ಜಿಲ್ಲೆಯಲ್ಲಿ ಮುಂಗಾರು ಪ್ರವೇಶ ಮಾಡಲು ಇನ್ನೂ ಎರಡು ವಾರ ಬಾಕಿ ಇದೆ. ಪ್ರಖರ ಬಿಸಿಲು ಮುಂದುವರಿದಿದೆ. ಹವಾಮಾನವು ತರಕಾರಿ ಬೆಳೆಗಳ ಮೇಲೂ ಪರಿಣಾಮ ಬೀರಿರುವ ಕಾರಣ ಹೆಚ್ಚು ತರಕಾರಿ ಮಾರುಕಟ್ಟೆಗೆ ಬರುತ್ತಿಲ್ಲ. ಹೀಗಾಗಿ ಬಹುತೇಕ ತರಕಾರಿಗಳ ಬೆಲೆ ಯಥಾ ಸ್ಥಿತಿಯಲ್ಲಿ ಮುಂದುವರಿದಿದೆ.

ಈರುಳ್ಳಿ, ಬೆಳ್ಳುಳ್ಳಿ, ಅಲ್ಲಾ, ಮೆಣಸಿನಕಾಯಿ, ಬೀಟ್‌ರೂಟ್, ಬೀನ್ಸ್, ಹಿರೇಕಾಯಿ, ಬೆಂಡೆಕಾಯಿ, ತೊಂಡೆಕಾಯಿ, ಡೊಣಮೆಣಸಿನಕಾಯಿ, ಚವಳೆಕಾಯಿ, ಸೌತೆಕಾಯಿ, ನುಗ್ಗೆ ಬೆಲೆಗಳು ಸ್ಥಿರವಾಗಿದೆ. ಆಲೂಗಡ್ಡೆ, ಎಲೆಕೋಸು ಬೆಲೆ ಸ್ವಲ್ಪ ಹೆಚ್ಚಾಗಿದೆ. ಹೂಕೋಸು ಬೆಲೆ ದುಪ್ಪಟ್ಟಾಗಿದೆ. ಪ್ರತಿ ಕ್ವಿಂಟಲ್‌ಗೆ ಗಜ್ಜರಿ, ಟೊಮೆಟೊ, ಬದನೆಕಾಯಿ, ತುಪ್ಪದ ಹಿರೇಕಾಯಿ 2 ಸಾವಿರ ಏರಿಕೆಯಾಗಿದೆ. ಬಿಸಿಲಿಗೆ ಬಹುಬೇಗ ಬಾಡುವ ಕಾರಣ ಸೊಪ್ಪು ಸಹ ಕಡಿಮೆ ಪ್ರಮಾಣದಲ್ಲಿ ಮಾರುಕಟ್ಟೆಗೆ ಬರುತ್ತಿದೆ. ಮಹಾರಾಷ್ಟ್ರದಿಂದ ಈರುಳ್ಳಿ, ಬೆಳ್ಳುಳ್ಳಿ ಆವಕ ವಾಗಿದೆ. ರಾಯಚೂರು ತಾಲ್ಲೂಕಿನ ಗ್ರಾಮಗಳು, ಆಂಧ್ರಪ್ರದೇಶ, ತೆಲಂಗಾಣ ಗಡಿ ಗ್ರಾಮ ಗಳಿಂದ ಟೊಮೆಟೊ, ಎಲೆಕೋಸು, ಹೂಕೋಸು, ಬದನೆಕಾಯಿ, ಸೌತೆಕಾಯಿ ಇಲ್ಲಿಯ ಕಾಯಿಪಲ್ಲೆ ತರಕಾರಿ ಸಗಟು ಮಾರುಕಟ್ಟೆಗೆ ಬಂದಿದೆ.

# ಥೈರಾಯ್ಡ್ ಕಾಯಿಲೆ ನಿರ್ಲಕ್ಷ್ಯ ಸಲ್ಲದು:ಡಾ. ಗಿರೀಶ

• ಉದಯವಾಹಿನಿ, ವಿಜಯಪುರ


ಉದಯವಾಹಿನಿ ಚಿತ್ರ

ಥೈರಾಯ್ಡ್ ಕಾಯಿಲೆಯನ್ನು ನಿರ್ಲಕ್ಷಿಸದೆ ಸಮಯಕ್ಕೆ ಸರಿಯಾಗಿ ಪರೀಕ್ಷೆ ಮಾಡಿಸಿಕೊಂಡು ಚಿಕಿತ್ಸೆ ಪಡೆಯುವ ಅಗತ್ಯವಿದೆ ಎಂದು ಬಿ.ಎಲ್.ಡಿ.ಇ ಆಸ್ಪತ್ರೆಯ ಶಸ್ತ್ರಚಿಕಿತ್ಸೆ ವಿಭಾಗದ ಪ್ರಾಧ್ಯಾಪಕ ಡಾ. ಗಿರೀಶ ಕುಲ್ಲೊಳ್ಳಿ ಹೇಳಿದ್ದಾರೆ.

ನಗರದ ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯದ ಶ್ರೀ ಬಿ. ಎಂ. ಪಾಟೀಲ ವೈದ್ಯಕೀಯ ಮಹಾವಿದ್ಯಾಲಯದ ಶಸ್ತ್ರಚಿಕಿತ್ಸೆ ವಿಭಾಗದ ವತಿಯಿಂದ ವಿಜಯಪುರದ ಕೆ. ಸಿ. ಪಿ ವಿಜ್ಞಾನ ಪದವಿಪೂರ್ವ ಕಾಲೇಜಿನಲ್ಲಿ ಥೈರಾಯ್ಡ್ ಗ್ರಂಥಿ ರೋಗಗಳ ಜಾಗೃತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಥೈರಾಯ್ಡ್ ಮಾನವ ದೇಹದಲ್ಲಿನ ಅತಿದೊಡ್ಡ ನಿರ್ನಾಳ ಗ್ರಂಥಿಯಾಗಿದ್ದು, ಇಡೀ ದೇಹದ ಚಯಾಪಚಯ ಕ್ರಿಯೆ ಮತ್ತು ನಾನಾ ಶಾರೀರಿಕ ಕಾರ್ಯಗಳನ್ನು ನಿಯಂತ್ರಿಸುವ ಮಹತ್ವದ ಪಾತ್ರ ವಹಿಸುತ್ತದೆ. ಥೈರಾಯ್ಡ್ ಗ್ರಂಥಿಯ ಕಾರ್ಯಕ್ಷಮತೆಯಲ್ಲಿ ಏರುಪೇರಾದಾಗ ಹೈಪೊ ಅಥವಾ ಹೈಪರ್ ಥೈರಾಯ್ಡಿಸಮ್ ಉಂಟಾಗಿ ಕುತ್ತಿಗೆಯ ಮುಂಭಾಗದಲ್ಲಿ ಗಂಟು ಕಾಣಿಸಿಕೊಳ್ಳಬಹುದು. ಈ ಸಮಸ್ಯೆ ಮಹಿಳೆಯರಲ್ಲಿ ಹೆಚ್ಚಾಗಿ ಕಂಡು ಬರುತ್ತದೆ. ಕೆಲವೊಮ್ಮೆ ಅನುವಂಶಿಕವಾಗಿಯೂ ಇದು ಬರಬಹುದು ಎಂದು ಅವರು ಹೇಳಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಸಹಾಯಕ ಪ್ರಾಧ್ಯಾಪಕಿ ಡಾ. ಶ್ರುತಿ ಶೀಲೀನ, ಪ್ರತಿ ವರ್ಷ ಮೇ 25 ರಂದು ವಿಶ್ವ ಥೈರಾಯ್ಡ್ ದಿನವನ್ನು ಆಚರಿಸಲಾಗುತ್ತದೆ. ಥೈರಾಯ್ಡ್ ಕಾಯಿಲೆಗಳ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು ಇದರ ಉದ್ದೇಶವಾಗಿದೆ.

ಅಯೋಡಿನ್ ಕೊರತೆಯಿಂದ ಉಂಟಾಗುವ ಗಳಗಂಡ (ಗಾಯಿಟರ್) ರೋಗವನ್ನು ಅಯೋಡಿನ್ ಯುಕ್ತ ಉಪ್ಪಿನ ಬಳಕೆಯಿಂದ ತಡೆಯಬಹುದಾಗಿದೆ. ಥೈರಾಯ್ಡ್ ಕಾಯಿಲೆಯ ಲಕ್ಷಣಗಳಾಗಿವೆ. ಥೈರಾಯ್ಡ್ ಕ್ಯಾನ್ಸರ್ ಚಿಕಿತ್ಸೆಗೆ ಉತ್ತಮವಾಗಿ ಸ್ಪಂದಿಸುವ ಕ್ಯಾನ್ಸರ್‌ಗಳಲ್ಲೊಂದಾಗಿದ್ದು, ಭಯಪಡದೆ ಎಚ್ಚರಿಕೆಯಿಂದ ಇರಬೇಕು . ಡಾ. ಗಿರೀಶ

# ಹಿಜಾಬ್ ವಿರೋಧಿಸಿ ಹುಬ್ಬಳ್ಳಿಯಲ್ಲಿ ಪ್ರತಿಭಟನೆ

## ಪ್ರಸ್ತುತ ಸರ್ಕಾರವು ಸಮಾಜದಲ್ಲಿ ಸಮಾನತೆ ಕಾಪಾಡುವಲ್ಲಿ ಸಂಪೂರ್ಣವಾಗಿ ವಿಫಲ

• ಉದಯವಾಹಿನಿ, ಹುಬ್ಬಳ್ಳಿ

ರಾಜ್ಯದ ಶೈಕ್ಷಣಿಕ ವಲಯದಲ್ಲಿ ಕೆಲವು ಸಮಯದಿಂದ ತಣ್ಣಗಾಗಿದ್ದ ಧಾರ್ಮಿಕ ಉಡುಪುಗಳ ಸಂಘರ್ಷದ ಕಿಡಿ ವಾಣಿಜ್ಯ ನಗರಿ ಹುಬ್ಬಳ್ಳಿಯಲ್ಲಿ ಮತ್ತೊಮ್ಮೆ ಜಾಗೃತಗೊಂಡಿದೆ. ಶಾಲಾ ಮತ್ತು ಕಾಲೇಜುಗಳ ಆವರಣದಲ್ಲಿ ಹಿಜಾಬ್ ಧರಿಸುವುದಕ್ಕೆ ಸಂಬಂಧಿಸಿದಂತೆ ಪ್ರಸ್ತುತ ಆಡಳಿತಾರೂಢ ಸರ್ಕಾರವು ಕೆಲವು ಸಡಿಲಿಕೆಗಳನ್ನು ಅಥವಾ ಮುಕ್ತ ಅವಕಾಶವನ್ನು ಕಲ್ಪಿಸಿದೆ ಎನ್ನುವ ವಿಚಾರ ಸಾರ್ವಜನಿಕ ವಲಯದಲ್ಲಿ ತೀವ್ರ ಚರ್ಚೆಗೆ ಗ್ರಾಸವಾಗಿತ್ತು. ಈ ನಿರ್ಧಾರವನ್ನು ತೀವ್ರವಾಗಿ ವಿರೋಧಿಸಿ ಶ್ರೀರಾಮಸೇನಾ ಹಿಂದೂ ರಾಷ್ಟ್ರ ಸಮನ್ವಯ ಸಮಿತಿಯು ಹುಬ್ಬಳ್ಳಿ ನಗರದಲ್ಲಿ ತೀವ್ರ ಸ್ವರೂಪದ ಹಾಗೂ ವಿನೂತನ ಮಾದರಿಯ ಪ್ರತಿಭಟನೆಯನ್ನು ಹಮ್ಮಿಕೊಳ್ಳುವ ಮೂಲಕ ಶೈಕ್ಷಣಿಕ ವಲಯದಲ್ಲಿ ಹೊಸದೊಂದು ಸಂಚಲನವನ್ನು ಮೂಡಿಸಿದೆ.

ಸಂಘಟನೆಯ ಪ್ರಮುಖ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಒಟ್ಟಾಗಿ ಹುಬ್ಬಳ್ಳಿ ನಗರದ ಪ್ರಮುಖ ಶಾಲಾ ಮತ್ತು ಕಾಲೇಜುಗಳ ಮುಂಭಾಗದಲ್ಲಿ ಜಮಾಯಿಸಿ ಸರ್ಕಾರದ ಹೊಸ ಧೋರಣೆಯ ವಿರುದ್ಧ ತೀವ್ರ ಅಸಮಾಧಾನವನ್ನು ವ್ಯಕ್ತಪಡಿಸಿದರು. ಕೇವಲ ಘೋಷಣೆಗಳನ್ನು ಕೂಗುವುದಕ್ಕೆ ಸೀಮಿತವಾಗದ ಪ್ರತಿಭಟನಾಕಾರರು ಶೈಕ್ಷಣಿಕ ಸಂಸ್ಥೆಗಳಿಗೆ ಆಗಮಿಸುತ್ತಿದ್ದ ಹಿಂದೂ ವಿದ್ಯಾರ್ಥಿಗಳಿಗೆ ಸಾಲು ಸಾಲಾಗಿ ಕೇಸರಿ ಶಾಲುಗಳನ್ನು ವಿತರಣೆ ಮಾಡಿದರು. ವಿದ್ಯಾರ್ಥಿಗಳು ಈ ಕೇಸರಿ ಶಾಲುಗಳನ್ನು ಧರಿಸಿ ತರಗತಿಗಳಿಗೆ ಪ್ರವೇಶಿಸುವಂತೆ ಪ್ರೇರೇಪಿಸುವ ಮೂಲಕ ಸಂಘಟನೆಯು ತನ್ನ ಸಾಂಸ್ಕೃತಿಕ ಹಾಗೂ ಧಾರ್ಮಿಕ ಪ್ರತಿರೋಧವನ್ನು ಅತ್ಯಂತ ಸ್ಪಷ್ಟವಾಗಿ ದಾಖಲಿಸಿದೆ.


ಉದಯವಾಹಿನಿ ಚಿತ್ರ

ಈ ಮಹತ್ವದ ಬೆಳವಣಿಗೆಯಿಂದಾಗಿ ಹುಬ್ಬಳ್ಳಿಯ ಶೈಕ್ಷಣಿಕ ಸಂಸ್ಥೆಗಳ ಸುತ್ತಮುತ್ತಲಿನ ವಾತಾವರಣದಲ್ಲಿ ಹಠಾತ್ ಬಿಗುವಿನ ಪರಿಸ್ಥಿತಿ ನಿರ್ಮಾಣವಾಯಿತು. ಪ್ರತಿಭಟನಾಕಾರರ ಪ್ರಮುಖ ವಾದದ ಪ್ರಕಾರ ವಿದ್ಯಾಸಂಸ್ಥೆಗಳು ಜ್ಞಾನಾರ್ಜನೆಯ ಪವಿತ್ರ ಕೇಂದ್ರಗಳಾಗಿದ್ದು ಅಲ್ಲಿ ಕೇವಲ ಸಮಾನತೆಯನ್ನು ಬಿಂಬಿಸುವ ಶಾಲಾ ಸಮವಸ್ತ್ರ ನಿಯಮಾವಳಿಗಳನ್ನು ಮಾತ್ರ ಕಟ್ಟುನಿಟ್ಟಾಗಿ ಜಾರಿಗೊಳಿಸಬೇಕು. ಯಾವುದೇ ಒಂದು ನಿರ್ದಿಷ್ಟ ಸಮುದಾಯದ ಧಾರ್ಮಿಕ ಆಚರಣೆಗಳಿಗೆ ಅಥವಾ ಸಾಂಪ್ರದಾಯಿಕ ಉಡುಪುಗಳಿಗೆ ಶಾಲಾ ಆವರಣದ ಒಳಗೆ ಯಾವುದೇ ಕಾರಣಕ್ಕೂ ಆಡಳಿತ ಮಂಡಳಿಗಳು ಅಥವಾ ಸರ್ಕಾರವು ವ್ಯವಸ್ಥಿತವಾಗಿ ಅವಕಾಶ ನೀಡಬಾರದು ಎನ್ನುವುದು ಪ್ರತಿಭಟನೆಯ ಮುಖ್ಯ ಉದ್ದೇಶವಾಗಿದೆ. ಶ್ರೀರಾಮಸೇನಾ ಹಿಂದೂ ರಾಷ್ಟ್ರ ಸಮನ್ವಯ ಸಮಿತಿಯ ಪ್ರಮುಖ ಮುಖಂಡರು ಸ್ಥಳೀಯ ಮಾಧ್ಯಮಗಳೊಂದಿಗೆ ಮಾತನಾಡುವ ಸಂದರ್ಭದಲ್ಲಿ

### ಪ್ರತ್ಯಕ್ಷವಾಗಿ ಎಲ್ಲಾ ರೀತಿಯ ಸಡಿಲಿಕೆ

ಹಿಜಾಬ್ ಧರಿಸಲು ಪರೋಕ್ಷವಾಗಿ ಅಥವಾ ಪ್ರತ್ಯಕ್ಷವಾಗಿ ನೀಡಿರುವ ಎಲ್ಲಾ ರೀತಿಯ ಸಡಿಲಿಕೆಗಳನ್ನು ಹಾಗೂ ವಿಶೇಷ ಅನುಮತಿಗಳನ್ನು ರಾಜ್ಯ ಸರ್ಕಾರವು ತಕ್ಷಣವೇ ಜಾರಿಗೆ ಬರುವಂತೆ ಹಿಂಪಡೆಯಬೇಕು ಎಂದು ಸಂಘಟನೆಯು ಈ ಸಂದರ್ಭದಲ್ಲಿ ಬಲವಾಗಿ ಆಗ್ರಹಿಸಿತು.

ಒಂದು ವೇಳೆ ಸರ್ಕಾರವು ಸಾರ್ವಜನಿಕರ ಹಾಗೂ ಹಿಂದೂ ಸಂಘಟನೆಗಳ ಈ ನ್ಯಾಯಯುತ ಬೇಡಿಕೆಯನ್ನು ನಿರ್ಲಕ್ಷಿಸಿದರೆ ಅಥವಾ ತನ್ನ ಪೂರ್ವಾಗ್ರಹ ಪೀಡಿತ ನಿರ್ಧಾರದಿಂದ ಹಿಂದೆ ಸರಿಯದಿದ್ದರೆ ಮುಂಬರುವ ದಿನಗಳಲ್ಲಿ ಇಡೀ ರಾಜ್ಯಾದ್ಯಂತ ಅತ್ಯಂತ ಉಗ್ರ ಸ್ವರೂಪದ ಹೋರಾಟ

## ಮಿನಿ ನ್ಯೂಸ್

### ಕಾಗದರಹಿತ ವ್ಯವಸ್ಥೆ 6 ತಿಂಗಳಲ್ಲಿ ಜಾರಿ: ವಿಧಾನಸಭಾಧ್ಯಕ್ಷ ಯು.ಟಿ.ಖಾದರ್

• ಉದಯವಾಹಿನಿ, ಮಂಗಳೂರು

ವಿಧಾನ ಮಂಡಲದ ವಿವಿಧ ಪ್ರಕ್ರಿಯೆಗಳಿಗೆ ಕಾಗದರಹಿತ ವ್ಯವಸ್ಥೆ ಜಾರಿಗೊಳಿಸುವ ಪ್ರಕ್ರಿಯೆಗೆ ಚಾಲನೆ ನೀಡಲಾಗಿದೆ. ನ್ಯಾಷನಲ್ ಇ-ವಿಧಾನ್ ಅಪ್ಲಿಕೇಷನ್ (ನೇವಾ) ಬಳಸಿ ವಿಧಾನಮಂಡಲದ ಪ್ರಕ್ರಿಯೆಗಳ ಡಿಜಿಟಲೀಕರಣ ಕೈಗೊಳ್ಳುವ ಕುರಿತು ಸಂಸತ್ತು ಹಾಗೂ ಕರ್ನಾಟಕ ವಿಧಾನಮಂಡಲಗಳ ಸಚಿವಾಲಯಗಳು ಈಚೆಗೆ ಒಪ್ಪಂದಕ್ಕೆ ಸಹಿ ಹಾಕಿವೆ. ಆರು ತಿಂಗಳ ಒಳಗೆ ಇದು ಅನುಷ್ಠಾನಗೊಳ್ಳಲಿದೆ ಎಂದು ವಿಧಾನಸಭಾಧ್ಯಕ್ಷ ಯು.ಟಿ.ಖಾದರ್ ತಿಳಿಸಿದರು.

ಇಲ್ಲಿ ಸುದ್ದಿಗೋಷ್ಠಿಯಲ್ಲಿ ಮಂಗಳವಾರ ಮಾತನಾಡಿದ ಅವರು, ವಿಧಾನಮಂಡಲದ ಪ್ರಕ್ರಿಯೆಗಳನ್ನು ಕಾಗದರಹಿತಗೊಳಿಸುವ ಬೇಡಿಕೆ ಹಿಂದಿನಿಂದಲೂ ಇದೆ. ಅದಕ್ಕಾಗಿ ಒಂದೋ, ನಾವೇ ಪ್ರತ್ಯೇಕ ಆ್ಯಪ್ ಸಿದ್ಧಪಡಿಸಬೇಕಿತ್ತು ಅಥವಾ ವಿಧಾನಮಂಡಲದ ಅಗತ್ಯಗಳಿಗೆ ಅನುಗುಣವಾಗಿ ಕೆಲವೊಂದು ಮಾರ್ಪಾಡು ಮಾಡಿ ನ್ಯಾಷನಲ್ ಇ ವಿಧಾನ್ ಆಯಪ್ ಅನ್ನೇ ಬಳಸುವ ಆಯ್ಕೆ ನಮ್ಮ ಮುಂದಿತ್ತು. ಈ ಎರಡೂ ಆಯ್ಕೆಗಳ ಅನುಕೂಲ ಹಾಗೂ ಅನನುಕೂಲಗಳ ಬಗ್ಗೆ ಚರ್ಚಿಸಿದ್ದೇವೆ. ನ್ಯಾಷನಲ್ ಇ-ವಿಧಾನ್ ಅಪ್ಲಿಕೇಷನ್ ಬಳಸುವ ಪ್ರಸ್ತಾವಕ್ಕೆ ಸರ್ಕಾರವೂ ಅನುಮೋದನೆ ನೀಡಿದೆ' ಎಂದರು.

ನ್ಯಾಷನಲ್ ಇ-ವಿಧಾನ್ ಅಪ್ಲಿಕೇಷನ್ ಬಳಸಿದರೆ ಅದರ ಅನುಷ್ಠಾನದ ಶೇ 60ರಷ್ಟು ಪಾಲನ್ನು ಕೇಂದ್ರವು ನೀಡಲಿದೆ. ನಾವು ವಿಧಾನಸೌಧ ಹಾಗೂ ಬೆಳಗಾವಿಯ ಸುವರ್ಣ ವಿಧಾನ ಸೌಧಗಳೆರಡನ್ನೂ ಡಿಜಿಟಲೀಕರಣಗೊಳಿಸಲಿದ್ದೇವೆ. ವಿಧಾನಸಭೆಯ ಡಿಜಿಟಲೀಕರಣಕ್ಕೆ 72 ಕೋಟಿ ಹಾಗೂ ವಿಧಾನ ಪರಿಷತ್ತಿನ ಡಿಜಿಟಲೀಕರಣಕ್ಕೆ 52 ಕೋಟಿ ವೆಚ್ಚವಾಗಲಿದೆ. ಈ ವ್ಯವಸ್ಥೆಯ ಉಸ್ತುವಾರಿ ನೋಡಿಕೊಳ್ಳುವುದಕ್ಕೆ ಪ್ರತ್ಯೇಕ ಸಮಿತಿಯನ್ನು ರೂಪಿಸಲಾಗುತ್ತದೆ.

### ಜಿರಳೆಗಳಿಗೆ ಹೆದರುವ ಕಾಲ ಇದಲ್ಲ: ಕೋಟ ಶ್ರೀನಿವಾಸ ಪೂಜಾರಿ

• ಉದಯವಾಹಿನಿ, ಮಂಗಳೂರು

ಕಾಕ್ರೋಚ್ ಪಾರ್ಟಿ ಹೆಸರಿನಲ್ಲಿ ಬಿಜೆಪಿಯನ್ನು ಅಪರಾಧಿ ಸ್ಥಾನದಲ್ಲಿ ನಿಲ್ಲಿಸುವ ಪ್ರಯತ್ನ ನಡೆದಿದೆ. ಜಿರಳೆ, ಹೆಗ್ಗಣ, ಸೊಳ್ಳೆಗಳಿಗೆ ಹೆದರುವ ಕಾಲ ಇದಲ್ಲ. ಸಾಲ ತೀರಿಸಲಾಗದೇ ದೇಶದ ಚಿನ್ನವನ್ನು ಅಡವಿಟ್ಟ ಕಾಲವೊಂದಿತ್ತು. ಇಂದು ಭಾರತ 60 ರಾಷ್ಟ್ರಗಳಿಗೆ ಸಾಲ ನೀಡುತ್ತಿದೆ' ಎಂದು ಸಂಸದ ಕೋಟ ಶ್ರೀನಿವಾಸ ಪೂಜಾರಿ ಹೇಳಿದರು.

ಪಂಡಿತ್ ದೀನ್ ದಯಾಳ್ ಉಪಾಧ್ಯಾಯ ಪ್ರಶಿಕ್ಷಣ ಮಹಾಭಿಯಾನ 2026ರ ಅಂಗವಾಗಿ ಬಿಜೆಪಿ ದಕ್ಷಿಣ ಕನ್ನಡ ಜಿಲ್ಲಾ ಘಟಕದ ವತಿಯಿಂದ ಸಂಘನಿಕೇತನದಲ್ಲಿ ಆಯೋಜಿಸಿರುವ ಎರಡು ದಿನಗಳ ಜಿಲ್ಲಾ ಮಟ್ಟದ ಪ್ರಶಿಕ್ಷಣ ವರ್ಗ ಉದ್ಘಾಟಿಸಿ ಅವರು ಮಾತನಾಡಿದರು.

ರಾಜ್ಯದಲ್ಲಿ 1.5 ಲಕ್ಷ ದಲಿತ, ಹಿಂದುಗಳಿದ ವರ್ಗಗಳ ವಿದ್ಯಾರ್ಥಿಗಳು ಹಾಸ್ಟೆಲ್ ಇಲ್ಲದೆ ಸಮಸ್ಯೆ ಎದುರಿಸುತ್ತಿದ್ದಾರೆ. ಕೆಲವರು ಶಾಲೆ ತೊರೆದಿದ್ದಾರೆ. ಪರಿಶಿಷ್ಟರ ಆರೋಗ್ಯ, ಶಿಕ್ಷಣಕ್ಕಾಗಿ ಮೀಸಲಿಟ್ಟ? 60 ಸಾವಿರ ಕೋಟಿಯನ್ನು ಅನ್ಯ ಉದ್ದೇಶಕ್ಕೆ ಸರ್ಕಾರ ಬಳಸಿದೆ. ಕಡಲ ಮೀನುಗಾರಿಕೆ ಮತ್ತಿತರ ಅಭಿವೃದ್ಧಿ ಕಾರ್ಯಗಳಿಗೆ ಕೇಂದ್ರ 22 ಸಾವಿರ ಕೋಟಿ ಬಿಡುಗಡೆ ಮಾಡಿತ್ತು. ಕೇಂದ್ರದ ಅನುದಾನವನ್ನು ರಾಜ್ಯ ಸರ್ಕಾರ ತನ್ನದೇ ಎಂದು ಬಿಂಬಿಸಿದೆ.

ಕಾರ್ಯಕರ್ತರು ಜನತೆಗೆ ಸತ್ಯ ತಿಳಿಸಬೇಕು' ಎಂದರು. ಸಂಸದ ಕ್ಯಾ. ಬ್ರಿಜೇಶ್ ಚೌಟ, '2014ರ ಬಳಿಕ ಭಾರತ ಬದಲಾಗಿದೆ. ಜನರ ಸಮಸ್ಯೆಗಳಿಗೆ ಉತ್ತರವಾಗಿ ಬಿಜೆಪಿ ದೇಶದಲ್ಲಿದೆ. ಗೆಲ್ಲಲು ಸಾಧ್ಯವೇ ಇಲ್ಲ ಎಂಬಂತಿದ್ದ ಪಶ್ಚಿಮ ಬಂಗಾಳದಲ್ಲೂ ಬಿಜೆಪಿ ಆಡಳಿತವಿದೆ. ರಾಜ್ಯದಲ್ಲಿ 2028ರಲ್ಲಿ ಬಿಜೆಪಿ ನೇತೃತ್ವದ ಸರ್ಕಾರ ರಚನೆಯಾಗಬೇಕು' ಎಂದರು.ಬಿಜೆಪಿ ದ.ಕ. ಜಿಲ್ಲಾ ಘಟಕದ ಅಧ್ಯಕ್ಷ ಸತೀಶ್ ಕುಂಪಲ, ಶಾಸಕರಾದ ರಾಜೇಶ್ ನಾಯ್ಕ, ಡಾ.ವೈ.ಭರತ್ ಶೆಟ್ಟಿ, ಭಾಗೀರಥಿ ಮುರುಳ್ಯ, ಯಶಪಾಲ್ ಸುವರ್ಣ, ಕಿಶೋರ್ ಕುಮಾರ್ ಪುತ್ತೂರು, ಪ್ರಶಿಕ್ಷಣ ವಿಭಾಗ ಸಂಚಾಲಕ ಉದಯಕುಮಾರ್ ಶೆಟ್ಟಿ, ವಿಭಾಗ ಸಹಪ್ರಭಾರಿ ಜಯಂತ್ ಕೋಟ್ಯಾನ್

### ನಿಮಿಷಗಳಲ್ಲಿ ಚಾರಣದ 300 ಟಿಕೆಟ್ ಖಾಲಿ!

• ಉದಯವಾಹಿನಿ, ಕಳಸ

ಐದು ತಿಂಗಳ ಚಾರಣದ ಸ್ಥಗಿತದ ನಂತರ ಇದೀಗ ಜೂನ್ 1ರಿಂದ ಕುದುರೆಮುಖ ಗಿರಿಶ್ರೇಣಿ ವ್ಯಾಪ್ತಿಯ ಕುದುರೆಮುಖ, ನೇತ್ರಾವತಿ, ಬಂಡಾಜೆ, ಗಂಗಡಿಕಲ್ಲು, ಮತ್ತಿತರ ಪ್ರದೇಶಗಳಿಗೆ ಚಾರಣಕ್ಕೆ ಅನುಮತಿ ನೀಡಲಾಗಿದೆ. ಅರಣ್ಯದಲ್ಲಿ ಜನಜಂಗುಳಿ ತಡೆಯಲು ಈ ತಾಣಗಳಿಗೆ ಪ್ರತಿ ದಿನ 300 ಜನರಿಗೆ ಮಾತ್ರ ಅವಕಾಶ ಕಲ್ಪಿಸಲಾಗಿದೆ. ಚಾರಣಕ್ಕೆ ಅರಣ್ಯ ಇಲಾಖೆಯ ಅಧಿಕೃತ ವೆಬ್‌ಸೈಟ್ ಮೂಲಕವೇ ಬುಕಿಂಗ್ ಮಾಡಲಾಗುತ್ತದೆ. ಆದರೆ ಆನ್‌ಲೈನ್ ಬುಕಿಂಗ್ ಆರಂಭಗೊಂಡ ಕೆಲವೇ ನಿಮಿಷಗಳಲ್ಲಿ ಎಲ್ಲಾ 300 ಟಿಕೆಟ್‌ಗಳು ಖಾಲಿ ಆಗುತ್ತಿವೆ. ಇದು ಚಾರಣಿಗರಲ್ಲಿ ಅಚ್ಚರಿ ಮತ್ತು ನಿರಾಶೆ ತರುತ್ತಿದೆ. ಹೀಗೆ ಕೆಲವೇ ನಿಮಿಷಗಳಲ್ಲಿ ಎಲ್ಲಾ ಟಿಕೆಟ್ ಬುಕ್ಕಿಂಗ್ ಆಗುತ್ತಿರುವುದರ ಹಿಂದೆ ಬೆಂಗಳೂರಿನ ಟ್ರಾವೆಲ್ಸ್ ಸಂಸ್ಥೆಗಳ ಕೈವಾಡ ಇದೆ ಎಂದು ಸ್ಥಳೀಯರು ದೂರುತ್ತಾರೆ. ಜೂನ್ 6ರ ಚಾರಣಕ್ಕೆ ಮೇ 22ರಂದು ವೆಬ್‌ಸೈಟ್ ಬುಕಿಂಗ್ ಅವಕಾಶ ಕಲ್ಪಿಸಿದಾಗ ನಿಮಿಷದ ಒಳಗೇ ಕುದುರೆಮುಖ ಮತ್ತು ನೇತ್ರಾವತಿಯ 300 ಟಿಕೆಟ್ ಬುಕ್ಕಿಂಗ್ ಆಗಿದ್ದು ಹೇಗೆ ಎಂಬುದು ಅಚ್ಚರಿ. ಜೂನ್ 13ರ ಚಾರಣದ ಟಿಕೆಟ್‌ಗಳು ಕೂಡ ಕೆಲವೇ ನಿಮಿಷಗಳಲ್ಲಿ ಬುಕ್ಕಿಂಗ್ ಆಗಿವೆ.

### ದೊಡ್ಡ ಕನಸುಗಳ ಹೆಜ್ಜೆ ಗುರುತು' ಕೈಯಚ್ಚು ಮೂಡಿಸಿದ ಮಕ್ಕಳು..

• ಉದಯವಾಹಿನಿ, ಬ್ರಹ್ಮಾವರ

ಹೊಸದಾಗಿ ದಾಖಲಾದ ಹಾಗೂ ಹಳೆಯ ವಿದ್ಯಾರ್ಥಿಗಳನ್ನು ವಾದ್ಯ ಮೆರವಣಿಗೆಯಲ್ಲಿ ಬರಮಾಡಿಕೊಳ್ಳಲಾಯಿತು. ಶಿಕ್ಷಕರು ಮತ್ತು ಪೋಷಕರು ಮಕ್ಕಳಿಗೆ ಆರತಿ ಎತ್ತಿ ತಿಲಕವನ್ನಿಟ್ಟು ಸ್ವಾಗತಿಸಿದರು. 'ದೊಡ್ಡ ಕನಸುಗಳ ಹೆಜ್ಜೆ ಗುರುತು ಎಂಬ ಪರಿಕಲ್ಪನೆಯಲ್ಲಿ ಮಕ್ಕಳ ಕೈ ಅಚ್ಚನ್ನು ವಿವಿಧ ಬಣ್ಣಗಳಲ್ಲಿ ಅದ್ದಿ ಹಾಳೆಯ ಮೇಲೆ ಮೂಡಿಸುವ ಮೂಲಕ ಅವರ ಕನಸುಗಳಿಗೆ ಸಾಂಕೇತಿಕ ಚಾಲನೆ ನೀಡಲಾಯಿತು. ಸೆಲ್ಫಿ ಸ್ಟ್ಯಾಂಡ್‌ನಲ್ಲಿ ಪ್ರತಿ ಮಗುವಿನ ಚಿತ್ರವನ್ನು ಸೆರೆಹಿಡಿಯಲಾಯಿತು. ಉಚಿತ ಪಠ್ಯಪುಸ್ತಕಗಳನ್ನು ವಿತರಿಸಲಾಯಿತು. ಎತ್ತಿನಟ್ಟಿ ಶಿರಿಯಾರದ ಶ್ರೀನಂದಿ ಸೊಸೈಟಿ ಹಾಗೂ ಶ್ರೀನಂದಿ ಗ್ರಾಮೀಣ ಮಹಿಳಾ ಸಂಘದ ವತಿಯಿಂದ ಮಕ್ಕಳಿಗೆ ಕೊಡುಗೆಯಾಗಿ ನೀಡಿದ 120 ಬ್ಯಾಗ್‌ಗಳನ್ನು ಗಣ್ಯರು ವಿದ್ಯಾರ್ಥಿಗಳಿಗೆ ವಿತರಿಸಿದರು. ಹಳೆ ವಿದ್ಯಾರ್ಥಿ ಸಂಘದ ಉಪಾಧ್ಯಕ್ಷ ರವೀಂದ್ರನಾಥ ಕಿಣಿ, ಯಡ್ತಾಡಿ ಕೃಷಿಕರ ಸಂಘದ ಅಧ್ಯಕ್ಷ ಜಯಕರ ಶೆಟ್ಟಿ, ಸಿಆರ್‌ಪಿ ಶೋಭಾ ಜಯಂತಿ ಉಪಸ್ಥಿತರಿದ್ದರು.

